ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 168 ಸಂಚಿಕೆ– 168 | PAGE-8 ಪುಟ–8 | ಗುರುವಾರ 14.08.2025 | RS.2/- ಬೆಲೆ 2/–

## ಪಥ ಸಂಚಲನ ಪಾದಯಾತ್ರೆ ನಾಳೆ



ಮಲ್ಲಮ್ಮನುಡಿವಾರ್ತೆಹುಮನಾಬಾದ್ : ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಪಟ್ಟಣದಲ್ಲಿಅ. 15ರಂದು ಬೆಳಗ್ಗೆ 9:30ಕ್ಕೆಸಂವಿಧಾನರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ ಪಥ ಸಂಚಲನೆ ಕಾರ್ಯಕ್ರಮ ಆಯೋಜನೆಮಾಡಲಾಗಿದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಪ್ಪರಮಿಯ ಹೇಳಿದರು.

(2ನೇ ಪುಟ ನೋಡಿ)

## ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಉಪಾಧ್ಯಕ್ಷರಾಗಿ ವಾಘಮಾರೆ ನೇಮಕ



ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರಾಗಿ ನೇಮಕವಾಗಿರುವ ಡಾ.ಸಿದ್ರಾಮ ದಾದಾರಾವ ವಾಘಮೋರೆಯವರು ಮಾಜಿ ಸಚಿವ ರಾಜಶೇಖರ ಪಾಟೀಲ ಹುಮನಾಬಾದರನ್ನು ಶಾಲು ಹೊದಿಸಿ ಸನ್ಮಾನಿಸಿದರು.

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.13: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರಾಗಿ ಡಾ.ಸಿದ್ರಾಮ ದಾದಾರಾವ್ ವಾಘಮಾರೆರವರನ್ನು ಕೆಪಿಸಿಸಿ ರಾಜ್ಯಾಧ್ಯಕ್ಷರು ಹಾಗೂ

(2ನೇ ಪುಟ ನೋಡಿ)

# ಮಹಿಳೆಯರ ರಕ್ಷಣೆಗೆ ಅಕ್ಕ ಪಡೆ: ಲಕ್ಷ್ಮಿ ಹೆಬ್ಬಾಳ್ಕರ್

ಮಲ್ಲಮ ನುಡಿ ವಾರ್ತೆ

ಬೆಂಗಳೂರು: ಅ.13:ಶಾಲಾ – ಕಾಲೇಜು ವಿದ್ಯಾರ್ಥಿನಿಯರು ಹಾಗೂ ಮಹಿಳೆಯರ ಸುರಕ್ಷತೆ ದೃಷ್ಟಿಯಿಂದ ಮಹಿಳಾ ಪೊಲೀಸ್ ಒಳಗೊಂಡ ಅಕ್ಕ ಪಡೆ ಶೀಘ್ರವೇ ಜಾರಿಗೆ ಬರಲಿದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

ಮಳೆಗಾಲದಅಧಿವೇಶನದಮೂರನೇ ದಿನಚಿಕ್ಕನಾಯಕನಹಳ್ಳಿಕ್ಷೇತ್ರದ ಶಾಸಕ ಸುರೇಶ್ ಬಾಬು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಈಗಾಗಲೇ ಬೀದರ್ ಜಿಲ್ಲೆಯಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಅಗಸ್ಟ್ 15ರಿಂದ ಬೆಳಗಾವಿ, ಮೈಸೂರು ಹಾಗೂ ಮಂಗಳೂರಿನಲ್ಲಿ ಪ್ರಾಯೋಗಿಕವಾಗಿ ಅಕ್ಕ ಪಡೆ ಆರಂಭಿಸಲಾಗುತ್ತಿದೆ ಎಂದು ತಿಳಿಸಿದರು. ಕೆಲವು ಸಮುದಾಯ ಮತ್ತು ಪಂಗಡಗಳಲ್ಲಿ ಆಚರಣೆಯಲ್ಲಿರುವ ಸಾಮಾಜಿಕ ಪದ್ಧತಿಗಳಿಂದಾಗಿ ಬಾಲ್ಯವಿವಾಹಗಳು ನಡೆಯುತ್ತಿದ್ದು, ಇದರಿಂದಾಗಿ ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದೆ. ಬಾಲ್ಯ ವಿವಾಹಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದೆ. ಬಾಲ್ಯವಿವಾಹ ಸಾಮಾಜಿಕ ಪಿಡುಗಾಗಿದ್ದು, ಇದನ್ನು



ಬೇರುಮಟ್ಟದಿಂದ ಕಿತ್ತೊಗೆಯಬೇಕು. ಬಾಲ್ಯವಿವಾಹ ತಡೆಗಟ್ಟಲು ಸರ್ಕಾರ ಸರ್ವಸನ್ನದ್ಧವಾಗಿದ್ದು, ಇದಕ್ಕೆ ಎಲ್ಲರ ಸಹಕಾರವೂ ಅಗತ್ಯ ಎಂದು ಹೇಳಿದರು. ಬಾಲ್ಯವಿವಾಹಗಳನ್ನು ತಡೆಗಟ್ಟಲು ಸರ್ಕಾರ ಈಗಾಗಲೇ ಕಾಯ್ದೆಯನ್ನು ಜಾರಿಗೆ ತಂದಿದೆ. ನಮ್ಮ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿ ಮಕ್ಕಳ ರಕ್ಷಣಾ ಸಮಿತಿ (ಸಿಡಬ್ಲ್ಯುಸಿ) ಕಾರ್ಯನಿರ್ವಹಿಸುತ್ತಿದ್ದು, ಬೆಂಗಳೂರಿನಲ್ಲಿ 4 ಕೇಂದ್ರಗಳು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ತಲಾ ಒಂದು ಸಿಡಬ್ಲ್ಯುಸಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದರು. ಬಾಲ್ಯವಿವಾಹ ತಡೆಗಟ್ಟುವ ಸಲುವಾಗಿ ಸೋಷಿಯಲ್ ಮೀಡಿಯಾಗಳಿಗೆ ಕಡಿವಾಣ ಹಾಕಬೇಕು. ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಗೃಹ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಂದಾಯ ಇಲಾಖೆ, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಇಲಾಖೆಗಳು ಜಂಟಿಯಾಗಿ ಕಾರ್ಯನಿರ್ವಹಿಸಲಿವೆ ಎಂದು ನುಡಿದರು. ಮಕ್ಕಳ ಸುರಕ್ಷತೆಗಾಗಿ ಮಕ್ಕಳ ಸಹಾಯವಾಣಿ 1098 ಸಂಖ್ಯೆಯೂ ದಿನದ 24 ಗಂ–ಟೆಯೂ ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಬಂದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗುತ್ತಾರೆ ಎಂದು ಮಾಹಿತಿ ನೀಡಿದರು. ಗ್ರಾಮ ಪಂಚಾಯಿತಿ ಮಟ್ಟದಿಂದ ಜಿಲ್ಲಾ ಮಟ್ಟದವರೆಗೂ ಮಹಿಳೆಯರು ಹಾಗೂ ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ ಎಂದು ಹೇಳಿದರು.

## ಶಾಲಾ ಮಕ್ಕಳ ಆಧಾರ್ ಅರಿವು ವಿಶೇಷ ಅಭಿಯಾನ ಕೈಗೊಳ್ಳಿ:ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಆ.13 : ಕಲಬುರಗಿ ಜಿಲ್ಲೆಯಲ್ಲಿ ಶಾಲಾ ಮಕ್ಕಳ ಆಧಾರ್ ನೋಂದಣಿಗಾಗಿ ವಿಶೇಷ ಅಭಿಯಾನ ಕೈಗೊಳ್ಳಬೇಕು ಹಾಗೂ ಪ್ರತಿಯೊಬ್ಬರಿಗೂ ಆಧಾರ್ ನೋಂದಣಿ ಮತ್ತು ತಿದ್ದುಪಡಿ ಹಾಗೂ ಆಧಾರ್ ಯೋಜನೆ ಕುರಿತಂತೆ ಸಾರ್ವಜನಿಕರ ಸಮಸ್ಯೆಗಳನ್ನು ಸಂಬಂಧಿತ ಅಧಿಕಾರಿಗಳು ತ್ವರಿತಗತಿಯಲ್ಲಿ ಪರಿಹರಿಸುವ ಮೂಲಕ ಉತ್ತಮವಾಗಿ ಆಧಾರ್

(2ನೇ ಪುಟ ನೋಡಿ)

## ವಿವಿದೆಡೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ



ಮಲ್ಲಮ್ಮ ನುಡಿ ವಾರ್ತೆ ಬೀದರ. ಆ.13 : ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಬೀದರ ತಾಲ್ಲೂಕಿನ ಬಗದಲ್ ಗ್ರಾಮದ ಪ್ರಾಥಮಿಕ ಶಾಲೆ ಹಾಗೂ ಮೌಲಾನಾ ಆಜಾದ ಪ್ರೌಢ ಶಾಲೆಗೆ ಭೇಟಿ ನೀಡಿ ಶಿಥಿಲಗೊಂಡ ಕಟ್ಟಡಗಳ ಪರಿಶೀಲನೆ ಮಾಡಿದರು. ಇತ್ತೀಚೆಗೆ ವಿದ್ಯಾರ್ಥಿಯೊಬ್ಬರ ಮೇಲೆ ಗೋಡೆ ಬಿದ್ದು ಗಾಯಗೊಂಡಿರುವ ವಿದ್ಯಾರ್ಥಿ ಬಗ್ಗೆ ಶಿಕ್ಷಕರಿಂದ ಮಾಹಿತಿ ಪಡೆದರು. ನಲಿ ಕಲಿ ಕೇಂದ್ರದ ಚಿಕ್ಕ ಮಕ್ಕಳ ಚಟುವಟಿಕೆಗಳನ್ನು ವೀಕ್ಷಿಸಿ ಸಮಯ ಕಳೆದರು. ನಂತರ ಪ್ರೌಢ ಶಾಲೆಯ ವಿದ್ಯಾರ್ಥಿಗಳಿಗೆ ಗಣಿತ ಪಾಠ ಮಾಡಿದರು. ಮಕ್ಕಳ ಶೈಕ್ಷಣಿಕ ಗುಣಪಟ್ಟ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಶಾಲಾ ಉಪನಿರ್ದೇಶಕರಾದ ಓಂಕಾರ ರುಗನ್ ಹಾಗೂ ಬಿ.ಇಓ ಮದರಖಾನ್ ಉಪಸ್ಥಿತರಿದ್ದರು. ನಂತರ ಅವರು ಸಕಿಂದ್ರಾಪುರ ಹಾಲು ಉತ್ಪಾದಕರ ಸಂಘಕ್ಕೆ ಭೇಟಿ ನೀಡಿ ಮಹಿಳಾ ಸದಸ್ಯರೊಂದಿಗೆ ಹಾಲು ಶೇಖರಣೆ ಬಗ್ಗೆ ಮಾಹಿತಿ ಪಡೆದರು. ನಂತರ ಅವರು ಭಾಲ್ಕಿ ತಾಲ್ಲೂಕಿನ ಹಾಲಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಿದರು. ದಿನನಿತ್ಯ ಬರುವ ಹೊರ ರೋಗಿಗಳ ಬಗ್ಗೆ ಹೆರಿಗೆಕೋಣೆ ಹಾಗೂ ಔಷಧಾಲಯವನ್ನು ಪರಿಶೀಲಿಸಿದರು. ನಾಯಿ ಕಡಿತ ಹಾಗೂ ಹಾವು ಕಡಿತ–ಕ್ಕೆ ಇಂಜೆಕ್ಷನಗಳನ್ನು ಕಡ್ಡಾಯವಾಗಿ ಲಭ್ಯವಿರುವಂತೆ ಸೂಚಿಸಿದರು. ಅನಿಮಿಯಾ ನಿಯಂತ್ರಣಕ್ಕೆ ಕ್ರಮ ವಹಿಸುವಂತೆ ತಿಳಿಸಿದರು. ವೈದ್ಯಾಧಿಕಾರಿ ಡಾ.ಜೋಹಾ ಫಾತಿಮಾ ಉಪಸ್ಥಿತರಿದ್ದರು.



## ಒಂದನೇ ಪುಟದಿಂದ

### ಸಂಚಲನೆ ಪಾದಯಾತ್ರೆ ನಾಳೆ

ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದ ವರೆಗೆ ಪಾದ ಯಾತ್ರೆ ಜರುಗಲಿದೆ. ಹೀಗಾಗಿ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದ್ದಾರೆ.

### ಕೈಗೊಳ್ಳಿ:ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್

ಸೇವೆಯನ್ನು ಒದಗಿಸಬೇಕೆಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಹೇಳಿದರು.

ಇಂದು ಅವರು ಜಿಲ್ಲೆಯ ಆಧಾರ್ ಯೋಜನೆ ಪ್ರಗತಿ ಹಾಗೂ ಮೇಲ್ವಿಚಾರಣೆ ಸಮಿತಿಯ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ ಪ್ರತಿ ಮಗು ಸಹ ಆಧಾರ್ ಹೊಂದಿರುವುದು ಅಗತ್ಯವಾಗಿದೆ, ಶಾಲಾ ಶಿಕ್ಷಣ ಇಲಾಖೆಯು ಶಾಲೆಗಳಲ್ಲಿನ ಪ್ರತಿ ಮಗವೂ ಆಧಾರ್ ಹೊಂದಿರುವ ಬಗ್ಗೆ ಪರಿಶೀಲನೆ ನಡೆಸಿ, ಆಧಾರ್ ಇಲ್ಲದ ಮಕ್ಕಳಿಗೆ ತ್ವರತಗತಿಯಲ್ಲಿ ಮಕ್ಕಳಿಗೆ ಆಧಾರ ಕಾರ್ಡ್ ಮಾಡಿಸಿಕೊಡಲು ಸಂಬಂಧಿತ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಶೇ 100 ರಷ್ಟು ಗುರಿ ಮುಟ್ಟಬೇಕು ಎಂದರು,ಜಿಲ್ಲೆಯಲ್ಲಿ ಬಾಲ ಆಧಾರ್‌ಗೆ ಸಂಬಂಧಿಸದಂತೆ ಪೋಷಣ್ ಯೋಜನೆಯಲ್ಲಿ ನೋಂದಾಯಿತ ಮಕ್ಕಳ ಜನನ ಪ್ರಮಾಣಕ್ಕೂ ಹಾಗೂ ಆಧಾರ್ ಕಾರ್ಡ್ ಹೊಂದಿರುವ ಮಕ್ಕಳ ಪ್ರಮಾಣಕ್ಕೂ ಸಾಕಷ್ಟು ವ್ಯತ್ಯಾಸಗಳಿರುವುದು ಕಂಡು ಬಂದಿರುತ್ತದೆ. ಜಿಲ್ಲೆಯಲ್ಲಿ ಪೋಷಣ್ ಯೋಜನೆಯಲ್ಲಿ ನೋಂದಾಯಿತ 2,43,178 ಮಕ್ಕಳಿದ್ದು, ಆಧಾರ್ ಹೊಂದಿರುವುದು ಕೇವಲ 74,695 ಮಕ್ಕಳು, ಇನ್ನೂ 2,01,769 ಮಕ್ಕಳು ಆಧಾರ್‌ನಿಂದ ದೂರು ಉಳಿದಿರುವುದು ಕುರಿತು ಸಂಬಂಧಿತ ಅಧಿಕಾರಿಗಳು ಕೂಡಲೇ ಕ್ರಮಕೈಗೊಳ್ಳಬೇಕೆಂದರು.ಅದೇ ರೀತಿಯಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಒಟ್ಟು 5,34,347 ವಿದ್ಯಾರ್ಥಿಗಳಿದ್ದುಅದರಲ್ಲಿ 4,06,383 ವಿದ್ಯಾರ್ಥಿಗಳು ಆಧಾರ್ ಹೊಂದಿರುತ್ತಾರೆ, ಉಳಿದಂತೆ 1,27,964 ವಿದ್ಯಾರ್ಥಿಗಳಿಗೆ ಆಧಾರ್ ಮಾಡಿಸಲು ಕ್ರಮ ಕೈಗೊಳ್ಳಲು ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಿಗೆ ತಿಳಿಸಿದರು. ಇತ್ತೀಚಿನ ವರದಿ ಪ್ರಕಾರ ಜಿಲ್ಲೆಯಲ್ಲಿ ಶೇ 76.05 ವಿದ್ಯಾರ್ಥಿಗಳು ಆಧಾರ್ ಹೊಂದಿದ್ದಾರೆ.

ಜಿಲ್ಲೆಯ ಅಫ್ಜಲಪುರ 62, ಆಳಂದ 29, ಚಿಂಚೋಳಿ 26, ಚಿತ್ತಾಪುರ 24, ಜೇವರ್ಗಿ 18 ಮತ್ತು ಸೇಡಂ ತಾಲ್ಲೂಕಿನಲ್ಲಿ 20 ಆಧಾರ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು ಜಿಲ್ಲೆಯಲ್ಲಿ ಒಟ್ಟು 179 ಕೇಂದ್ರಗಳಿವೆ. ಈವರೆಗೆ ಜಿಲ್ಲೆಯಲ್ಲಿ ಒಟ್ಟು 32,94,745 ಆಧಾರ್ ಕಾರ್ಡ್‌ಗಳನ್ನು ನೀಡಲಾಗಿದ್ದು, ಅದರಲ್ಲಿ 0–5 ವರ್ಷದೊಳಗಿನ 1,35,335 ಮಕ್ಕಳು, 5–18 ವರ್ಷದೊಳಗಿನ 9,41,762 ಮಕ್ಕಳು ಹಾಗೂ 18 ದಾಟಿದ 22,17,648 ವಯಸ್ಕರರು ಆಧಾರ್ ಹೊಂದಿರುತ್ತಾರೆ.5 ವರ್ಷದೊಳಗಿನ ಮಕ್ಕಳಿಗೆ ಆಧಾರ್ ಮಾಡಿಸಿರುವ ಪಾಲಕರು ತಮ್ಮ ಮಕ್ಕಳಿಗೆ 5 ವರ್ಷ ತುಂಬಿದ ನಂತರ ಮತ್ತೊಂದ ಬಾರಿ ಆಧಾರ್ ಅಪ್‌ಡೇಟ್ ಮಾಡಿಸಬೇಕು ಹಾಗೂ ಅದೇ ರೀತಿಯಲ್ಲಿ 15 ವರ್ಷ ತುಂಬಿದ ನಂತರ ಬಯೋಮೆಟ್ರಿಕ್ ಆಧಾರ್ ಮಾಡಿಸುವ ಅವಶ್ಯಕತೆ ಇರುತ್ತದೆ. ಈ ಕುರಿತಂತೆ ಪಾಲಕರಲ್ಲಿ ಅರಿವು ಮೂಡಿಸುವ ಅವಶ್ಯಕತೆ ಇದೆ.5 ರಿಂದ 7 ವರ್ಷ ಹಾಗೂ 15 ರಿಂದ 17 ವರ್ಷದೊಳಗಿನ ಮಕ್ಕಳಿಗೆ ಒಂದು ಬಾರಿಗೆ ಉಚಿತ ನವೀಕರಣಕ್ಕೆ ಅವಕಾಶವಿದೆ. ಇಲ್ಲದಿದ್ದಲ್ಲಿ ರೂ. 100 ನೀಡಬೇಕಾಗುತ್ತದೆ. ಬಯೋಮೆಟ್ರಿಕ್ ನವೀಕರಣ ಸಮಯದಲ್ಲಿ ಮಾಡಿದರೆ ಉಚಿತವಾಗಿದ್ದು, ಪ್ರತ್ಯೇಕವಾಗಿ ರೂ. 50 ಶುಲ್ಕ ಪಾವತಿಸಿ ನವೀಕರಣ ಮಾಡಬಹುದು. ಪ್ರತಿಯೊಂದು ಮಗು ಆಧಾರ್ ಕಾರ್ಡ ಹೊಂದುವುದು ಅಗತ್ಯವಾಗಿದ್ದು, ಈ ಹಿನ್ನಲೆಯಲ್ಲಿ ಪ್ರತಿ ಶಾಲೆಗಳಲ್ಲಿ ಅಭಿಯಾನ ಹಮ್ಮಿಕೊಳ್ಳಲು ಶಾಲಾ ಶಿಕ್ಷಣ ಇಲಾಖೆ ಸಹಕಾರದೊಂದೊಗೆ ರೂಟ್ ಮ್ಯಾಪ್ ಹಾಕಿಕೊಳ್ಳಬೇಕೆಂದು ಸೂಚನೆ ನೀಡಿದರು.ಆಧಾರ್‌ನಲ್ಲಿ ಆವ್ಯವಹಾರ ನಡೆದರೆ ಆಧಾರ್ 2016ರ ಕಾಯ್ದೆ ಪ್ರಕಾರ ಕಾನೂನು ಕ್ರಮಕೈಗೊಳ್ಳಲು ಜಿಲ್ಲಾಧಿಕಾರಿಗಳು ಸೂಚಿಸಿದರು.ಹೊಸದಾಗಿ ಆಧಾರ ನೋಂದಣಿ, ಲಿಂಗ, ಜನ್ಮ ದಿನಾಂಕ ವಿಳಾಸ ಮೊಬೈಲ್ ಸಂಖ್ಯೆಗಳ ಸರಿಪಡಿಸುವಿಕೆ ನವೀಕರಣಕ್ಕೆ ಸಂಬಂಧಪಟ್ಟ ಸಮಸ್ಯೆಗಳನ್ನು ಸರಿಪಡಿಸಲು ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆದುಕೊಳ್ಳತಕ್ಕದು, ನಿಗದಿತ ಹಣಕ್ಕಿಂತ ಹೆಚ್ಚಿನ ಹಣ ಪಡೆದಿರುವುದು ಕಂಡುಬಂದಲ್ಲಿ ಸೂಕ್ತ ಕ್ರಮಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು. ಯುಐಡಿಎಐನ್ ಸಹಾಯಕ ವ್ಯವಸ್ಥಾಪಕ ಡೇವಿಡ್ ಆಧಾರ್ ನೋಂದಣಿಯ ಬಗ್ಗೆ ಮಾತನಾಡಿದರು.ಅನಾಥ ಮಕ್ಕಳಿಗೆ ಆಧಾರ ಕಾರ್ಡ್ ವಿತರಣೆ: ಜಿಲ್ಲೆಯಲ್ಲಿ ಇದೇ ಮೊದಲ ಬಾರಿಗೆ 10 ಅನಾಥ ಮಕ್ಕಳಿಗೆ ಆಧಾರ್ ಕಾರ್ಡ್ ಮಾಡಿಕೊಡಲಾಗಿದ್ದು, ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಮೂರು ಜನ ಅನಾಥ ಮಕ್ಕಳಿಗೆ ಆಧಾರ ಕಾರ್ಡ್ ಸಾಂಕೇತಿಕವಾಗಿ ವಿತರಿಸಿದರು. ಅನಾಥ ಮಕ್ಕಳಾದ 15 ವರ್ಷದ ನಾಗಮ್ಮ, 14 ವರ್ಷದ ಗಾಯಿತ್ರಿ ಹಾಗೂ 10 ವರ್ಷದ ಅಪ್ಪುರಾಜ ಇವರು ಮೊದಲ ಬಾರಿಗೆ ಆಧಾರ್ ಪಡೆದ ಖುಷಿಯಲ್ಲಿ ಜಿಲ್ಲಾಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಯುಐಡಿಎಐಎನ್ ಸಹಾಯಕ ವ್ಯವಸ್ಥಾಪಕ ಡೇವಿಡ್, ಉಪನಿರ್ದೇಶಕ ಗುಲ್ಷನ್ ಕುಮಾರ, ಇ-ಗರ್ವರ್ನೆನ್ಸ್ ವ್ಯವಸ್ಥಾಪಕರ ಬಸವ ಕಿರಣ ಭೀಮಳ್ಳಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶ ಸೂರ್ಯಕಾಂತ ಮದಾನೆ, ಜಿಲ್ಲಾ ಸಮಾಲೋಚಕರಾದ (ಆಧಾರ) ಆನಂದ ಗಡಾಳೆ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಉಪಾಧ್ಯಕ್ಷರಾಗಿ ವಾಘಮಾರೆ ನೇಮಕ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರರ ಆದೇಶದಂತೆ ನೇಮಕಮಾಡಲಾಗಿದೆ ಎಂದು ಕಾಂಗ್ರೆಸ್ ಪಕ್ಷದ ಹಿಂದುಳಿದ ವರ್ಗದ ರಾಜ್ಯ ಅಧ್ಯಕ್ಷರು ಹಾಗೂ ಸಚಿವರಾದ ಎಸ್. ಮಧು ಬಂಗಾರಪ್ಪ ರವರು ನೇಮಕಾತಿ ಆದೇಶ ಹೊರಡಿಸಿದ್ದಾರೆ.

# ರಾಜೀವ್ ಗಾಂಧಿ ಜ್ಯೋತಿ ಯಾತ್ರೆಗೆ ಸ್ವಾಗತ

ಮಲ್ಲಮ್ಮ ನುಡಿ ವಾರ್ತೆ



ಹುಮನಾಬಾದ್ : ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ 81ನೇ ಜನ್ಮದಿನದ ಅಂಗವಾಗಿ ಆರಂಭವಾದ ರಾಜೀವ್ ಗಾಂಧಿ ಜ್ಯೋತಿ ಯಾತ್ರೆಗೆ ಹುಮನಾಬಾದ್ ಪಟ್ಟಣದಲ್ಲಿ ಬುಧವಾರ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಸ್ವಾಗತಿಸಿ, ಪುಷ್ಪ ನಮನ ಸಲ್ಲಿಸಿದರು.

ರಾಜೀವಗಾಂಧಿ ಜ್ಯೋತಿ ಯಾತ್ರಾ ಸಮಿತಿ ಅಧ್ಯಕ್ಷ ಆರ್. ದೊರೆ ಮಾತನಾಡಿ, ರಾಜೀವಗಾಂಧಿಪ್ರಧಾನಿಯಾಗಿದ್ದ ಸಂದರ್ಭದಲ್ಲಿ ದೀನ ದಲಿತ, ಹಿಂದುಳಿದ ಅಲ್ಪಸಂಖ್ಯಾತ ಸಮುದಾಯಗಳ ಏಳಿಗೆಗೆ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿದ್ದರು. ದೂರ ದೃಷ್ಟಿತ್ವ ಹೊಂದಿದ್ದ ರಾಜೀವ ಗಾಂಧಿ ಅವರು, ಇವತ್ತಿನ ತಂತ್ರಜ್ಞಾನ, ಡಿಜಿಟಲ್ ಕ್ರಾಂತಿಗೆ ಅಂದೇ ಮುನ್ನುಡಿ ಬರೆದಿದ್ದರು. ಇಂದಿನ ಯುವಕರು ಅವರ ತತ್ವ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು ಬಲಿಷ್ಠ ರಾಷ್ಟ್ರದ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ತಿಳಿಸಿದರು. ಗ್ರಾಮೀಣ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ ಮಾತನಾಡಿ, ಮಾಜಿ ಪ್ರಧಾನಿ ರಾಜೀವಗಾಂಧಿ ಅವರು ಕೇವಲ ಕಾಂಗ್ರೆಪಕ್ಷಕ್ಕೆ ಸೀಮಿತವಾಗಿರದೆ ಎಲ್ಲಾ ಜಾತಿ, ಧರ್ಮದ ವಿಶ್ವಾಸಗಳಿಸಿದ ದೇಶದ ಜ್ಯಾತ್ಯತೀತ ನಾಯಕರಾಗಿದ್ದರು. ಅಂತಹಾ ಮಹಾನ ನಾಯಕನ ಜ್ಯೋತಿಯಾತ್ರೆಯಶಸ್ವಿಯಾಗಲಿ ಎಂದರು.

ಈಸಂದರ್ಭದಲ್ಲಿರಾಜೀವಗಾಂಧಿ ಜ್ಯೋತಿ ಯಾತ್ರಾ ಸಮಿತಿ ಉಪಾಧ್ಯಕ್ಷ ಕೃಷ್ಣಪ್ಪ, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ, ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಉಮೇಶ ಜಮಗಿ, ಪುರಸಭೆ ಉಪಾಧ್ಯಕ್ಷಮುಕ್ರಂಜಾ,ಪುರಸಭೆ ಸದಸ್ಯರಾದ ಸೈಯದ್ ಬಾಸೀದ್, ದತ್ತು ಪರೀಟ್, ದತ್ತಕುಮಾರ ಚಿದ್ರಿ, ಧರ್ಮರೆಡ್ಡಿ, ಬಸವರಾಜ ಶೇರಿಕಾರ, ಸುರೇಶ ಘಾಂಗ್ರೆ, ಪ್ರಕಾಶ ಉಡಬಾಳ, ನರಸಪ್ಪ ಪರಸನೋರ್, ಶಿವಕುಮಾರ ಪರೀಟ್ ಸೇರಿ ಅನೇಕರಿದ್ದರು.

# ಶ್ರೀಕೃಷ್ಣ ಜನ್ಮಾಷ್ಟಮಿ: ಔರಾದ್ ನಲ್ಲಿ 16ರಂದು "ದಹಿ ಹಂಡಿ" ಉತ್ಸವ

ಔರಾಧ:ಅ.13:ಶ್ರೀಕೃಷ್ಣಜನ್ಮಾಷ್ಟಮಿ ನಿಮಿತ್ತ ಶ್ರೀ ಉದ್ಭವಲಿಂಗ ಅಮರೇಶ್ವರ ದಹಿ ಹಂಡಿ ಉತ್ಸವ ಸಮಿತಿ ವತಿಯಿಂದ ಆಗಸ್ಟ್16ರಂದು(ಶನಿವಾರ) ಮಧ್ಯಾಹ್ನ2ಗಂಟೆಗೆಔರಾದ್(ಬಿ) ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಸಾರ್ವಜನಿಕ 'ದಹಿ ಹಂಡಿ ಉತ್ಸವ' (ಮೊಸರು ಗಡಿಗೆ ಒಡೆಯುವ ಸ್ಪರ್ಧೆ) ಏರ್ಪಡಿಸಲಾಗಿದೆ.

ಶ್ರೀ ಕೃಷ್ಣಜನ್ಮಾಷ್ಟಮಿಯನ್ನು ಅದ್ದೂರಿ, ಅರ್ಥಪೂರ್ಣ ಜೊತೆಗೆನಮ್ಮಶ್ರೇಷ್ಠಪರಂಪರೆ, ಸಂಸ್ಕೃತಿ ಉಳಿಸಿ, ಬೆಳೆಸಲು ಪೂರಕವಾಗಿ ದಹಿ ಹಂಡಿ ಉತ್ಸವ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಶಾಸಕ ಪ್ರಭು.ಬಿ ಚವ್ಹಾಣ್ ಅವರು ಮನವಿ ಮಾಡಿದ್ದಾರೆ.

ಶ್ರೀ ಕೃಷ್ಣಜನ್ಮಾಷ್ಟಮಿ ದೇಶ–ವಿದೇಶಗಳಲ್ಲಿ ಅತ್ಯಂತ ಶ್ರದ್ಧೆ, ಭಕ್ತಿಯೊಂದಿಗೆ ಸಂಭ್ರಮದಿಂದ ಆಚರಿಸಲಾಗುತ್ತದೆ. ಶ್ರೀಕೃಷ್ಣನ ಲೀಲೆಗಳಲ್ಲಿ ಬಾಲಲೀಲೆ ವಿಶಿಷ್ಟವಾಗಿದೆ. ದಹಿ ಹಂಡಿ ಒಡೆಯುವಿಕೆಯು ಬಾಲಕೃಷ್ಣನ ಕ್ರಿಯೆಗಳನ್ನು ಅನುಕರಿಸುತ್ತದೆ. ಹೀಗಾಗಿ ಎಲ್ಲೆಡೆ ದಹಿ ಹಂಡಿ ಉತ್ಸವ(ಮಡಿಕೆ ಉತ್ಸವ) ಬಹಳಷ್ಟು ಅದ್ದೂರಿಯಾಗಿ ಆಚರಿಸಲಾಗುತ್ತದೆ. ಈ ಉತ್ಸವ ನಮ್ಮಲ್ಲಿಯೂ ನಡೆಯಬೇಕೆಂಬ ಉದ್ದೇಶದಿಂದ ಕಳೆದ ವರ್ಷದಿಂದ ಅದ್ದೂರಿಯಾಗಿ ದಹಿ ಹಂಡಿ ಉತ್ಸವ ಏರ್ಪಡಿಸುತ್ತಿದ್ದು, ಈ ವರ್ಷವೂ ಅರ್ಥಪೂರ್ಣ ದಹಿ ಹಂಡಿ ಉತ್ಸವ ನಡೆಯಲಿದೆ ಎಂದು ಶಾಸಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ವಿಜೇತರಿಗೆ ಬಹುಮಾನ: ದಹಿ ಹಂಡಿ ಉತ್ಸವದಲ್ಲಿ ಕಾಲೇಜು ವಿದ್ಯಾರ್ಥಿಗಳು ಮತ್ತು ಸಾಮಾನ್ಯ ಜನರಿಗಾಗಿ ಎರಡು ವಿಭಾಗಗಳಲ್ಲಿ ಸ್ಪರ್ಧೆ ನಡೆಯುತ್ತದೆ. ವಿಜೇತ ತಂಡಗಳಿಗೆ ಪ್ರಥಮ ಬಹುಮಾನ 25,000, ದ್ವಿತೀಯ ಬಹುಮಾನ 15,000 ಹಾಗೂ ತೃತೀಯ ಬಹುಮಾನ 10,000 ಮತ್ತು ಪಾರಿತೋಷಕ ವಿತರಿಸಲಾಗುತ್ತದೆ. ಹಾಗೆಯೇ ಶ್ರೀಕೃಷ್ಣವೇಷಧಾರಿ ಮಕ್ಕಳಿಗೆ ವಿಶೇಷ ಸನ್ಮಾನ ಇರುತ್ತದೆ. 10 ವರ್ಷದೊಳಗಿನ ಮಕ್ಕಳು ಮಾತ್ರ ಶ್ರೀ ಕೃಷ್ಣ ವೇಷಧಾರಿ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ ಎಂದು ಹೇಳಿದ್ದಾರೆ.

ಹಿಂದೂ ಸಂಸ್ಕೃತಿ ಮತ್ತು ಪರಂಪರೆಯಲ್ಲಿ ಅತ್ಯಂತ ಪವಿತ್ರ ಹಾಗೂ ಮಹಾಗ್ರಂಥವಾದ ಭಗವದ್ಗೀತೆ ಹಾಗೂ ಮಹಾಭಾರತದ ಪ್ರಮುಖ ಪಾತ್ರಧಾರಿ ಶ್ರೀಕೃಷ್ಣರು ಭಗವಾನ ವಿಷ್ಣುವಿನ ಎಂಟನೇ ಅವತಾರವಾಗಿದ್ದಾರೆ. ಅವರು ಬೋಧಿಸಿದ ಗೀತೆ ಭಗವದ್ಗೀತೆ ಎಂದೇ ಪ್ರಸಿದ್ಧವಾಗಿದೆ. ಎಲ್ಲ ವ್ಯಕ್ತಿಗಳಿಗೂ, ಎಲ್ಲ ಸಂದರ್ಭಕ್ಕೂ, ಎಲ್ಲ ಕಾಲಕ್ಕೂ ಅನ್ವಯವಾಗುವ ಸಾರಗಳನ್ನು ಇದು ಒಳಗೊಂಡಿದೆ. ಅತ್ಯಂತ ಸ್ಫೂರ್ತಿದಾಯಕವಾಗಿರುವ ಶ್ರೀಕೃಷ್ಣನ ಜೀವನದಿಂದ ನಾವು ಸಾಕಷ್ಟು ನೀತಿಗಳನ್ನು ಕಲಿಯಬಹುದು. ಇಂತಹ ವಿಷಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಮತ್ತು ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸಲು ಇಂತಹ ಕಾರ್ಯಕ್ರಮ ಸಹಕಾರಿಯಾಗಲಿವೆ. ದಹಿ ಹಂಡಿ ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಪಾಲ್ಗೊಳ್ಳಬೇಕು ಮತ್ತು ಕಾರ್ಯಕ್ರಮ ಶಾಂತಿ, ಸೌಹಾರ್ದತೆಯಿಂದ ನಡೆಯಲು ಸಹಕರಿಸಬೇಕು ಎಂದು ಶಾಸಕರು ತಿಳಿಸಿದ್ದಾರೆ.

ತಂಡಗಳ ನೋಂದಣಿಗೆ ಅವಕಾಶ: ದಹಿ ಹಂಡಿ ಉತ್ಸವದಲ್ಲಿ ಭಾಗವಹಿಸುವ ತಂಡಗಳ ನೋಂದಣಿಗೆ ಶನಿವಾರ ಬೆಳಿಗ್ಗೆವರೆಗೆ ಅವಕಾಶವಿದೆ. ಭಾಗಿಯಾಗಬೇಕಾದ ತಂಡದ ಸದಸ್ಯರು 18 ವರ್ಷಕ್ಕಿಂತ ಮೇಲ್ಪಟ್ಟಿರಬೇಕು. ಒಂದು ತಂಡದಲ್ಲಿ ಕನಿಷ್ಟ 12 ಜನರು ಇರಬೇಕು. ಆಸಕ್ತ ತಂಡಗಳು ಆಗಸ್ಟ್ 16ರ ಬೆಳಗ್ಗೆ 11 ಗಂಟೆಯೊಳಗಾಗಿ ಶಿವರಾಜ ಅಲ್ಮಾಜೆ–9448605300, ಕೇರಬಾ ಪವಾರ– 9916330099 ಅಥವಾ ಬಸವರಾಜ ಹಳ್ಳೆ– 8123979550ಗೆ ಕರೆ ಮಾಡಿ ತಮ್ಮ ಹೆಸರು ನೋಂದಾಯಿಸಿಕೊಳ್ಳಬೇಕು. ನಂತರ ಬರುವವರಿಗೆ ಅವಕಾಶ ಇರುವುದಿಲ್ಲ.

# ಗೌರಿ ಗಣೇಶ ಹಬ್ಬ ಸಡಗರ, ಸಂಭ್ರಮದಿಂದ ಸೌಹಾರ್ದತೆಯೊಂದಿಗೆ ಆಚರಿಸಿ

ಮಲ್ಲಮ್ಮ ನುಡಿ ವಾರ್ತೆ




ಎಲ್ಲಾ ಮಂಡಳಿಗಳು ಕಾನೂನು ಪಾಲನೆ, ಅಲಂಕಾರ, ನೂತನ ಪ್ರಯೋಗ, ವಿವಿಧ ಮಾದರಿಯಲ್ಲಿ ಆಕರ್ಷಣೆ ಮಾಡಿರುವುದರ ಜೊತೆ ಸಾಂಸ್ಕೃತಿಕ ಕಾರ್ಯಕ್ರಮ ಸೇರಿದಂತೆ ದ್ವಿತಿಯ ಹಾಗೂ ತೃತೀಯ ಬಹುಮಾನ ನೀಡುವ ಕಾರ್ಯಕೈಗೊಳ್ಳಬೇಕು."
–ಅಮೀತಕುಮಾರ ಕುಲಕರ್ಣಿ, ತಹಸೀಲ್ದಾರ

ಕಮಲನಗರ:ಅ.13: ಗೌರಿ ಗಣೇಶ ಹಬ್ಬ ಸಡಗರ, ಸಂಭ್ರಮದಿಂದಶಾಂತಿಯುತವಾಗಿ ಆಚರಣೆ ಮಾಡುವ ಮೂಲಕ ಸೌಹಾರ್ದತೆಕಾಪಾಡಿಕೊಂಡು ಹೋಗಬೇಕುಎಂದುತಹಸೀಲ್ದಾರ ಆಮೀತಕುಮಾರ ಕುಲಕರ್ಣಿ ಕರೆ ನೀಡಿದರು. ಪಟ್ಟಣದ ಪಂಚಾಯತಿ ಸಭಾಂಗಣದಲ್ಲಿ ಪೊಲೀಸ್ ಇಲಾಖೆ ಹಾಗೂ ತಾಲೂಕು ಆಡಳಿತದಿಂದ ಗೌರಿ ಗಣೇಶ ಹಬ್ಬದ ಶಾಂತಿ ಸಭೆಯಲ್ಲಿ ತಹಸೀಲ್ದಾರರಾದ ಅಮೀತಕುಮಾರ ಕುಲಕರ್ಣಿ ಮಾತನಾಡಿದರು.ಸಿಪಿಐಶ್ರೀಕಾಂತ ಅಲ್ಲಾಪೂರೆ ಮಾತನಾಡಿ, ಗಣೇಶ ಪ್ರತಿಷ್ಠಾಪನೆ ಮಾಡುವ ಮಂಡಳಿಗಳು ಪೆಂಡಾಲ್ ಹಾಕುವ ಮುಂಚೆ ಪಂಚಾಯತಿ, ಪೊಲೀಸ್ ಠಾಣೆಯಿಂದ ಕಡ್ಡಾಯವಾಗಿ ಅನುಮತಿಪಡೆಯಬೇಕು, ನಿಮ್ಮ ಮಂಡಳಿಗಳಿಂದ ಪೊಲೀಸ್ ಠಾಣೆಗೆ ಮುಂಚಿತ ಮಾಹಿತಿ ನೀಡುವುದು ಸ್ಥಾಪನೆಯಾದ ದಿನದಿಂದ ವಿಸರ್ಜನೆವರೆಗೆ ಮಂಡಳಿಯ ಇಬ್ಬರು ಸದಸ್ಯರು ಪೆಂಡಾಲ್‌ನಲ್ಲಿ ಇರುವುದು, ಧ್ವನಿವರ್ಧಕದಿಂದ ಸಾರ್ವಜನಿಕರಿಗೆ ತೊಂದರೆ–ಯಾಗದಂತೆ ನೋಡಿಕೊಳ್ಳಬೇಕು. ವಿದ್ಯುತ್ ಸಂಪರ್ಕಕ್ಕೆ ಜೆಸ್ಕಾಂ ಅನುಮತಿ ಪಡೆಯಬೇಕು, ವಿಸರ್ಜನೆ ದಿನ ಪೊಲೀಸರು ಸೂಚಿಸಿದ ಮಾರ್ಗದಲ್ಲಿ ಮೆರವಣಿಗೆ ನಡೆಸಬೇಕು ಎಂದರು ಈ ಸಂದರ್ಭದಲ್ಲಿ ಗ್ರಾ.ಪಂ.ಅಧ್ಯಕ್ಷೆ ಸುಶೀಲಾ ಮಹೇಶ ಸಜ್ಜನಶೆಟ್ಟಿ, ಮುಖಂಡರಾದ ಶಿವಾನಂದ ವಡೆ, ಶ್ರೀಕಿರಂಗ ಭರಿತಾರ. ಎನೋ ಎಸ್. ಕಿವಣಕರ ಬಗ್ಗೆ.ದಿಲೀಪ ಮುದಾಳೆ, ಶಾಂತಕುಮಾರ ಜಿರಾದಾರ, ಪ್ರವೀಣ ಕದವರ್, ಮಹೇಶ ಸಜ್ಜನ್, ಚಂದ್ರಕಾಂತ ಬಿರಾದಾರ, ಮಲ್ಲಿಕಾರ್ಜುನ ಮಹಾಜನ್, ಸಂತೋಷ ಮೀರ್ಚೆ, ಠಾಣೆಯ ವ್ಯಾಪ್ತಿಯಲ್ಲಿ ಬರುವ ಹಲವು ಸಮಿತಿಗಳ ಮುಖಂಡರು ಉಪಸ್ಥಿತರಿದ್ದರು.

# ಮುಜರಾಯಿ ದೇವಾಲಯಗಳಲ್ಲಿ ಕನ್ನಡ ಶ್ಲೋಕ ಹೇಳಲು ಕಲಿಕೆಗೆ ಸೂಚನೆ: ರಾಮಲಿಂಗಾರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.13:ರಾಜ್ಯದಮುಜರಾಯಿ ದೇವಾಲಯಗಳಲ್ಲಿ ಪೂಜೆ ಮಾಡುವಾಗಕನ್ನಡದಲ್ಲಿಶ್ಲೋಕ ಹೇಳಬೇಕು, ಹೀಗಾಗಿ ಕನ್ನಡ ಶ್ಲೋಕ ಕಲಿಯಲು ಸೂಚನೆ ಕೊಡೋದಾಗಿ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯೆ ಭಾರತಿ ಶೆಟ್ಟಿ ಪ್ರಶ್ನೆ ಕೇಳಿದರು. ನಮ್ಮ ಮುಜರಾಯಿ ದೇವಾಲಯಗಳಲ್ಲಿ ಪೂಜೆ ಮಾಡುವಾಗ ಶ್ಲೋಕಗಳನ್ನು ಸಂಸ್ಕೃತದಲ್ಲಿ ಹೇಳುತ್ತಿದ್ದಾರೆ. ತಮಿಳುನಾಡು ರಾಜ್ಯದಲ್ಲಿ ತಮಿಳಿನಲ್ಲಿ ಶ್ಲೋಕ ಹೇಳುತ್ತಾರೆ. ಅದೇ ರೀತಿ ಕರ್ನಾಟಕದ ದೇವಾಲಯಗಳಲ್ಲೂ ಕನ್ನಡದಲ್ಲಿ ಶ್ಲೋಕ ಹೇಳುವಂತೆ ಕ್ರಮ ಆಗಬೇಕು. ಹಿರೇಮಗಳೂರು ಕಣ್ಣನ್ ಅವರು ಕನ್ನಡದಲ್ಲಿ ಶ್ಲೋಕ ಹೇಳ್ತಾರೆ. ಅದರಂತೆ ಕನ್ನಡದಲ್ಲಿ ಶ್ಲೋಕ ಹೇಳುವಂತೆ ಕ್ರಮ ಆಗಬೇಕು ಎಂದರು.

ದೇವಾಲಯಗಳಲ್ಲಿ ಸ್ವಚ್ಛತೆ ಸರಿಯಾಗಿ ನಿರ್ವಹಣೆ ಆಗುತ್ತಿಲ್ಲ. ತಿರುಪತಿ ಮಾದರಿಯಲ್ಲಿ ನಮ್ಮ ದೇವಾಲಯಗಳಲ್ಲಿ ಸ್ವಚ್ಛತೆ ನಿರ್ವಹಣೆಗೆ ಕ್ರಮವಹಿಸಬೇಕು. ನಮ್ಮ ದೇವಾಲಯಗಳಲ್ಲಿ ಸ್ವಚ್ಛತೆ ಸರಿಯಾಗಿ ಆಗಬೇಕು ಎಂದು ಮನವಿ ಮಾಡಿದರು. ಇದಕ್ಕೆ ಸಚಿವ ರಾಮಲಿಂಗಾರೆಡ್ಡಿ ಅವರು ಉತ್ತರ ನೀಡಿ, ಆಗಮ ಶಿಕ್ಷಣದಲ್ಲಿ ಅನೇಕ ವರ್ಷಗಳಿಂದ ಸರ್ಟಿಫಿಕೇಟ್ ಕೊಟ್ಟಿರಲಿಲ್ಲ. ಈಗ ನಾವು ಕೊಡ್ತಿದ್ದೇವೆ. ಕನ್ನಡದಲ್ಲಿ ಶ್ಲೋಕ ಅಭ್ಯಾಸ ಮಾಡಲು ಸೂಚನೆ ಕೊಡ್ತೀವಿ ಎಂದರು. ದೇವಾಲಯಗಳಲ್ಲಿ ಆ.15ರಿಂದ ಪ್ಲಾಸ್ಟಿಕ್ ನಿಷೇಧ ಮಾಡಲಾಗುತ್ತಿದೆ. ದೇವಾಲಯಗಳಲ್ಲಿ ಪ್ಲಾಸ್ಟಿಕ್ ನಿಷೇಧದ ಜೊತೆಗೆ ಸ್ವಚ್ಛತೆಗೂ ಸೂಚನೆ ಕೊಡ್ತೀವಿ ಎಂದು ಹೇಳಿದರು.

## ನವಜಾತ ಶಿಶು ಪತ್ತೆ-ರಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಜಿಲ್ಲೆಯ ರಬಕವಿ–ಬನಹಟ್ಟಿತಾಲೂಕಿನ ಜಗದಾಳಗ್ರಾಮದಲ್ಲಿ ಬುಧವಾರ ಗಿಡಗಂಟಿಗಳ ಪೊದೆಯಲ್ಲಿ ನವಜಾತ ಹೆಣ್ಣು ಶಿಶು ಪತ್ತೆಯಾಗಿದೆ. ಜಗದಾಳ ಜನತಾ ಪ್ಲಾಟ್ ಹಿಂದುಗಡೆಯ ಪೊದೆಯಲ್ಲಿ ಮಧ್ಯಾಹ್ನ ಶಿಶು ಪತ್ತೆಯಾಗಿದ್ದು, ಸ್ಥಳೀಯರು ರಕ್ಷಿಸಿ ಆರೈಕೆ ಮಾಡಿದ್ದಾರೆ. ನಿರ್ಜನ ಪ್ರದೇಶದಲ್ಲಿ ಮಗು ಅಳುವಿನ ಧ್ವನಿ ಕೇಳಿ ಜನರು ಹುಡುಕಾಟ ನಡೆಸಿದಾಗ ಮುಳ್ಳಿನ ಪೊದೆಯಲ್ಲಿ ಶಿಶು ಕಾಣಿಸಿಕೊಂಡಿದೆ. ತಕ್ಷಣ ಗ್ರಾಮಸ್ಥರು ಗ್ರಾಮ ಪಂಚಾಯಿತಿಗೆ ಸುದ್ದಿ ತಿಳಿಸಿದಾಗ ಸ್ಥಳಕ್ಕೆ ಆಗಮಿಸಿದ ಅಭಿವೃದ್ಧಿ ಅಧಿಕಾರಿ ಡಿ.ಕೆ.ಸಾವಳಗಿ ಬನಹಟ್ಟಿ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ನಂತರ ಶಿಶುವನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ನೀಡಿದ್ದಾರೆ.

## ಸುರಪುರ ತಾಲೂಕು ಕೆಂಭಾವಿ ಪಟ್ಟಣದಲ್ಲಿ ಸ್ವಚ್ಛತೆ ಮತ್ತು ಸೌಂದರ್ಯ ಅಭಿಯಾನ

ಕೆಂಭಾವಿ:ಪಟ್ಟಣದ ಸ್ವಚ್ಛತೆ ಹಾಗೂ ಸೌಂದರ್ಯವನ್ನು ಹೆಚ್ಚಿಸುವ ದೃಷ್ಟಿಯಿಂದ ಪುರಸಭೆ ಮುಂದಾಗಿದ್ದು, ಈ ಕುರಿತು ಸಾರ್ವಜನಿಕರ ಸಹಕಾರ ಅನಿವಾರ್ಯವಾಗಿದೆ ಎಂದು ಪುರಸಭೆ ನೈರ್ಮಲ್ಯ ಅಧಿಕಾರಿ ಶ್ರೀ ಅರುಣ್ ಕುಮಾರ್ ಚೌಹಾನ್ ತಿಳಿಸಿದ್ದಾರೆ.




ಪಟ್ಟಣದ ವಿವಿಧ ಬಡಾವಣೆಗಳು, ರಸ್ತೆಗುಚ್ಛಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಶುದ್ಧತೆಯ ಪಾಳನೆಯು ಅತ್ಯಂತ ಅವಶ್ಯಕವಾಗಿದೆ. "ಪ್ರತಿಯೊಬ್ಬ ನಾಗರಿಕನೂ ಸ್ವಚ್ಛತಾ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ತಮ್ಮ ಹೊಣೆಗಾರಿಕೆಯನ್ನು ಪೂರೈಸಬೇಕು. ಕಸದ ನಿರ್ಮೂಲನೆ, ಪ್ಲಾಸ್ಟಿಕ್ ನಿಷೇಧ, ತ್ಯಾಜ್ಯ ವಸ್ತುಗಳನ್ನು ಸರಿಯಾದ ರೀತಿಯಲ್ಲಿ ವಿಂಗಡಿಸಿ ವಿಸರ್ಜನೆ ಮಾಡುವುದು ಎಲ್ಲರ ಕರ್ತವ್ಯ" ಎಂದು ಅವರು ತಿಳಿಸಿದ್ದಾರೆ. ಪುರಸಭೆ ವತಿಯಿಂದ ನಿರಂತರವಾಗಿ ಜಾಗೃತಿ ಅಭಿಯಾನ, ಕಸ ಸಂಗ್ರಹಣಾ ವ್ಯವಸ್ಥೆ ಹಾಗೂ ರಸ್ತೆ ಹಾಗೂ ಶುದ್ಧತೆ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ ನಾಗರಿಕರು ಸಹಕಾರ ನೀಡುವುದು ಅವಶ್ಯಕವಾಗಿದೆ. "ನಮ್ಮ ಪಟ್ಟಣವನ್ನು ಸ್ವಚ್ಛ ಹಾಗೂ ಸುಂದರವಾಗಿರಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು" ಎಂಬ ಸಂದೇಶವನ್ನು ಶ್ರೀ ಅರುಣ್ ಕುಮಾರ್ ಚೌಹಾನ್ ಅವರು ನಾಗರಿಕರಿಗೆ ನೀಡಿದ್ದಾರೆ.

**ಉಪನಿರ್ದೇಶಕರು(ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾಧಿಕಾರಿಯವರ ಕಛೇರಿ, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ, ಬೀದರ ಜಿಲ್ಲೆ.**

No: DPI/2025-26/SE0352 Date: 07/08/2025

**ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಬ್ಲಾಕ್ ಹಂತದ** Academic Resource Person for Career Counselling **ಸಿಬ್ಬಂದಿಗಳ ಸೇವೆಯನ್ನು ಪಡೆಯಲು ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸುವ ಕುರಿತು. ಟೆಂಡರ್ ವೇಳಾ ಪಟ್ಟಿ ಹಾಗೂ ವಿವರಗಳು**

1) ಟೆಂಡರ್ ಗೆ ಇಟ್ಟಿರುವ ಮೊಬಲಗು **ರೂ: 19.80 ಲಕ್ಷ,** 2) ಟೆಂಡರ್ ಡಾಕ್ಯುಮೆಂಟ್‌ನ್ನು ವೆಬ್ ಸೈಟ್ ನಿಂದ ಡೌನಲೋಡ್ ಮಾಡಕೊಳ್ಳಬೇಕಾದ ದಿನಾಂಕ **ದಿ:07–08–2025 ರಿಂದ28–08–2025. ಸಂಜೆ: 5.00,** 3) ಟೆಂಡರ್ ಬಿಡಗಳನ್ನು ಸಲ್ಲಿಸಲು ಕೊನೆಯ ದಿನಾಂಕ (ವೆಬ್ ಸೈಟ್ ಮೂಲಕ) ಸಮಯ **ದಿ:28/08/2025 ಸಮಯ ಸಂಜೆ: 5.00,** 4) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ & ಸಮಯ **ದಿ:29/08/2025 ಸಮಯ ಸಂಜೆ: 5.15,** 5) ಆರ್ಥಿಕ ಬಿಡ್ ಗಳನ್ನು ತೆರೆಯ ಬಹುದಾದ ಸಂಭಾವ್ಯ ದಿನಾಂಕ & ಸಮಯ **ದಿನಾಂಕ: 30–08–2025 ಅಪರಾಹ್ನ 03.00 ಗಂಟೆಗೆ** / ತಾಂತ್ರಿಕ ಬಿಡ್ ಅನುಮೋದನೆಯಾದ ನಂತರ ತಿಳಿಸಲಾಗುವುದು. 6) ಇ.ಎಂ.ಡಿ. ಮೊಬಲಗು (ವಿದ್ಯುನ್ಮಾನ ಪ್ರಕ್ರಿಯೆ ಮೂಲಕ ಮಾತ್ರ) **ರೂ: 49.500/–** 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ 9448999388/9480695090, 8) ಅಂತರ ಜಾಲತಾಣದ ವಿಳಾಸ www.kppp.karnataka.gov.in

**ಸಹಿ/–ಉಪ ನಿರ್ದೇಶಕರು (ಆಡಳಿತ)ಹಾಗೂ**
**ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು**
**ಸರ್ವ ಶಿಕ್ಷಣ ಅಭಿಯಾನ, ಬೀದರ ಜಿಲ್ಲೆ.**

ವಾ.ಸಾ.ಸಂ.ಇ/ಬೀದರ/134/ಕೆ.ಎಸ್.ಎಂ.ಸಿ.&ಎ/2025–26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.

ಯಶಸ್ವಿಯಾಗಿ ಜರುಗಿದ ಮಂಗಲಗಿ ಗ್ರಾಮ ಸಭೆ

# ನರೇಗಾ ಯೋಜನೆಯ ಲಾಭ ಪಡೆದುಕೊಳ್ಳಿ:- ರಾಹುಲ್ ಕೈವಾರೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲ್ಲೂಕಿನ ಮಂಗಲಗಿ ಗ್ರಾಮ ಪಂಚಾಯತ್ ಆವರಣದಲ್ಲಿ 2025-26ನೇ ಸಾಲಿನ ಸಾಮಾಜಿಕ ಪರಿಶೋಧನೆ ಗ್ರಾಮ ಸಭೆ ಜರುಗಿತ್ತು. ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮದ ತಾಲೂಕ ವ್ಯವಸ್ಥಾಪಕ ರಾಹುಲ್ ಕೈವಾರೆ ಮಾತನಾಡಿ, ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಗಂಡು ಹೆಣ್ಣಿಗೂ ಸಮಾನ ಕೆಲಸ ಹಾಗೂ ಸಮಾನ ವೇತನ ನೀಡಲಾಗುತ್ತಿದೆ. ಪ್ರತಿಯೊಂದು ಕುಟುಂಬಕ್ಕೂ ವರ್ಷಕ್ಕೆ 100 ದಿನಗಳ ಕೆಲಸ ನೀಡಲಾಗುತ್ತಿದ್ದು, ಪ್ರತಿಯೋಬ್ಬರು ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ 15ನೇ ಹಣಕಾಸು ಆಯೋಗದ ಅನುದಾನ ಮತ್ತು 2020-21ನೇ ಸಾಲಿನಿಂದ 2024-25ನೇ ಸಾಲಿನ ವರೆಗೆ ಜಿಲ್ಲಾ ಮತ್ತು ತಾಲೂಕು ಪಂಚಾಯತನ ರಾಜ್ಯ ಹಣಕಾಸು ಆಯೋಗದ ಅನುದಾನದಡಿ ಅನುಷ್ಠಾನ ಮಾಡಿರುವ ಕಾಮಗಾರಿಗಳ/ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು. ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಕಂಡು ಬಂದಿರುವ ಅಂಶಗಳ ಬಗ್ಗೆ ಮಾಹಿತಿ ನೀಡಿದರು. ಅದರಂತೆ ಸಭೆಯಲ್ಲಿ ತಿರ್ಮಾನಗಳು ಕೈಗೊಳಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ಪುಂಡಲೀಕ ಆರ್ಕಿ, ಉಪಾಧ್ಯಕ್ಷೆ ಪವಿತ್ರಾ ಎಸ್.ರೆಡ್ಡಿ, ಅಭಿವೃದ್ದಿ ಅಧಿಕಾರಿ ಬಸಪ್ಪ ಮುರಾಳೆ, ಐಇಸಿ ಸಂಯೋಜಕ ವಿಶ್ವನಾಥ ಗಡ್ಡಿಮನಿ, ತಾಂತ್ರಿಕ ಸಂಯೋಜಕ ಸುಧಾಕರ ಪಾಟೀಲ್, ತಾಂತ್ರಿಕ ಸಹಾಯಕ ಜೈಸಿಂಗ್ ರಾಠೋಡ, ಬಿಎಫ್ ಟಿ ರಜನಿಕಾಂತ್ ಉಡಬಾಳ, ಗ್ರಾಮ ಪಂಚಾಯತ್ ಸದಸ್ಯರಾದ ಮಹ್ಮದ್ ಪಟೇಲ್, ಶ್ರೀಮಂತ ಕಾವಳೆ, ಇಸ್ಮಾಯಿಲ್ ಪಟೇಲ್, ಗುಂಡಪ್ಪ ಗೌರಾ, ಮಖಬುಲ್ ಪಾಶಾ, ಹಣಮಂತ ಒಡೆಯರ್, ಕಲಾವತಿ ಚೀನಕೇರಾ, ಅನುಷಮ್ಮಾ ಗಾರಂಪಳ್ಳಿ, ಆಶಾಬಾಯಿ ಮಾಳಗೆ, ವಿಮಲಾಬಾಯಿ ಭೀಮಶಾ, ಉಮಾಶ್ರೀ ಜಾಬಾ, ಪ್ರಮುಖರಾದ ವೈಜಿನಾಥ ವಿ.ರೆಡ್ಡಿ, ಸಂತೋಷರೆಡ್ಡಿ, ನಾರಾಯಣರಾವ ಕುಲಕರ್ಣಿ, ತಿಪಣ್ಣ ಆರ್ಕಿ, ಕೃಷ್ಣ ರೆಡ್ಡಿ, ಸಂತೋಷರೆಡ್ಡಿ ಪಾಟಿ, ಸಿದ್ದಲಿಂಗ ಹಾಗೂ ಮಂಗಲಗಿ ಮತ್ತು ನಾಗನಕೇರಾ ಗ್ರಾಮಸ್ಥರು, ಗ್ರಾಮ ಪಂಚಾಯತ ಸಿಬ್ಬಂದಿ ವರ್ಗದವರು ಸೇರಿದಂತೆ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

# ತ್ರಿ ಭಾಷಾ ಸೂತ್ರ ಮುಂದುವರಿಸುವಂತೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:- ತ್ರೀ ಭಾಷಾ ಸೂತ್ರವು 1961 ರಲ್ಲಿ ಪ್ರಾರಂಭಗೊಂಡು ಇಲ್ಲಿಯವರೆಗೆ ಎಲ್ಲಾ ಹಿಂದಿ ಸ್ನಾತಕೋತ್ತರ ಪದವೀಧರ ವ್ಯಾಸಂಗ ಮುಗಿಸಿ ಹಿಂದಿ ಶಿಕ್ಷಕರ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಆದರೆ ಈಗ ನಮ್ಮ ಕರ್ನಾಟಕ ಸರ್ಕಾರವು ತ್ರಿ ಭಾಷಾ ಸೂತ್ರವನ್ನು ಕೈ ಬಿಡುವ ಬಗ್ಗೆ ವರದಿಯನ್ನು ಸಲ್ಲಿಸುತ್ತಾರೆ ಇದರಿಂದ ಹಿಂದಿ ಶಿಕ್ಷಕರ ಬಳಗ ದವರಿಗೆ ತುಂಬಾ ನೋವಾಗಿದೆ ಅವರಿಗೆ ಮುಂದೆ ಯಾವ ದಾರಿ ತೋಚದಂತೆ ಆಗಿದೆ ಎಂದು ಹಿಂದಿ ಉಪನ್ಯಾಸಕರಾದ ನರಸಿಂಗ್ ರೆಡ್ಡಿ ಗದಲೇಗಾಂವ ತಿಳಿಸಿದರು. ಅವರು ತಾಲೂಕಿನ ಹಿಂದಿ ಶಿಕ್ಷಕರ ಸಂಘದಿಂದ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದರು ಅದೇ ರೀತಿ ತಾಲೂಕಿನ ಹಿಂದಿ ಪ್ರೌಢ ಶಾಲೆ ಶಿಕ್ಷಕರ ಸಂಘದ ಅಧ್ಯಕ್ಷರಾದ ಜಗದೀಶ್ ಶುಕ್ಲಾ ಮಾತನಾಡಿ ರಾಷ್ಟ್ರೀಯ ಭಾವೈಕ್ಯತೆ ಮೂಡಿಸುವ ಭಾಷೆ ಇದಾಗಿದೆ ಸಂಪರ್ಕ ಸಾಧಿಸುವ ಭಾಷೆಯು ಸಹ ಆಗಿದೆ ಎಂದರು. ಶಿಕ್ಷಕರಾದ ನಾಗಪ್ಪಾ ನಿಣ್ಣೆ. ಹನುಮಂತಪ್ಪ ಬಿರಾದಾರ್. ದಿಲೀಪ್ ಸ್ವಾಮಿ. ಸುಭಾಷ್ ಬಿರಾದಾರ್. ಪುಷ್ಪಬಂದೆ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ವಿಜಯಕುಮಾರ್ ಮಾನೆ ಹಾಗೂ ಬಿಎಸ್ಪಿ ತಾಲೂಕು ಅಧ್ಯಕ್ಷರಾದ ಶಂಕರ್ ಫುಲೆ. ಹಾಗೂ ಇಕ್ರಾಮುದ್ದೀನ್ ಖಾದಿ ವಾಲೆ ಸೇರಿದಂತೆ ಅನೇಕರು ಭಾಗವಹಿಸಿ ಮನವಿ ಪತ್ರ ಸಲ್ಲಿಸಿದರು.

# ಗವಿಮಠದಲ್ಲಿ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ 6ನೇ ವಿಶೇಷ ಉಪನ್ಯಾಸ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಆ 13- ಜ್ಞಾನವೇ ನಿಜವಾದ ಸಂಪತ್ತು. ಗುರುವಿನ ಮೂಲಕ ಮಕ್ಕಳಿಗೆ ಧರ್ಮ ಹಾಗೂ ಆಧ್ಯಾತ್ಮದ ಸಂಸ್ಕಾರ ಕೊಡಿಸುವುದರಿಂದ ಮಕ್ಕಳು ಜ್ಞಾನ ಎಂಬ ಸಂಪತ್ತು ಪಡೆಯಲು ಸಾಧ್ಯ ಎಂದು ಇಲ್ಲಿನ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ.ಬ್ರ.ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನುಡಿದರು.

ಪವಿತ್ರ ಶ್ರಾವಣ ಮಾಸ ಅಂಗವಾಗಿ ಇಲ್ಲಿನ ಶ್ರೀ ಜಗದ್ಗುರು ಘನಲಿಂಗರುದ್ರಮುನಿ ಶಿವಚಾರ್ಯ ಸಂಸ್ಥಾನ ಗವಿಮಠದಲ್ಲಿ ಗವಿಮಠ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತ 6ನೇ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಜ್ಞಾನದ ಒಡೆಯನಾದ ಶಿವನು ಜ್ಞಾನ ಸಾಗರನು. ಅದಕ್ಕಾಗಿಯೇ ಶಿವನನ್ನು ಸರ್ವಜ್ಞ ಎಂದು ಕರೆಯಲಾಗಿದೆ. ಅಲ್ಲದೆ ವಿಶೇಷ ಸನ್ಮಾನ ಸ್ವೀಕರಿಸಿದ ನಿವೃತ್ತ ನ್ಯಾಯಾಧೀಶ ಸುಭಾಷ ನಾಗರಾಳೆ ಅವರು ವೃತ್ತಿಯಿಂದ ನ್ಯಾಯಾಧೀಶರಾಗಿ ಸೇವೆ ಸಲ್ಲಿಸುತ್ತ ವಚನ ಸಾಹಿತ್ಯವನ್ನು ಆಳವಾಗಿ ಅಧ್ಯಯನ ಮಾಡಿ ಶಿವ ಶರಣರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡವರು. ಉನ್ನತ ಹುದ್ದೆ ಅಲಂಕರಿಸಿದರೂ ನಿರಂತರ ಕಾಯಕದಾಸೋಹ ಗೈದ ಸಾಧಕರು. ಹಾಗೇ ಇವತ್ತು ಮಹಾ ಪ್ರಸಾದ ಸೇವೆ ಮಾಡಿದ ದಾಸೋಹಿಗಳು. ಸಾಧನೆ ಗೈದ ಹಿರಿಯ ಶರಣ ಜೀವಿ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಸುಭಾಷ ನಾಗರಾಳೆ ಅವರನ್ನು ವಿಶೇಷ ಸನ್ಮಾನ ಗೈದು ಗೌರವಿಸಲಾಯಿತು ಎಂದು ನುಡಿದರು.

ವಿಶೇಷ ಸನ್ಮಾನ ಸ್ವೀಕರಿಸಿದ ನಿವೃತ್ತ ನ್ಯಾಯಾಧೀಶರಾದ ಶುಭಾಷ ನಾಗರಾಳೆ ಮಾತನಾಡಿ ಪ್ರಪಂಚವು ಪರಮಾತ್ಮನ ಸ್ವರೂಪ. ಹೀಗಾಗಿ ಶಿವಶರಣರು ಎಲ್ಲರನ್ನು ಗೌರವದಿಂದ ಕಂಡರು. ಮನುಜ ಮತ ವಿಶ್ವಪಥ ಎಂಬ ಸಂದೇಶದ ಮೂಲಕ ಮಾನವೀಯ ಮೌಲ್ಯಗಳನ್ನು ಎತ್ತಿ ಹಿಡಿದ ಪ್ರಕೃತಿಯಲ್ಲಿ ದೇವರನ್ನು ಕಾಣುವ ದೇವರಲ್ಲಿ ಪ್ರಕೃತಿಯನ್ನು ಕಾಣುವ ದೈವಿಕ ಸಂಬಂಧಗಳನ್ನು ಪ್ರತಿಪಾದಿಸಿದವರು ಕುವೆಂಪು. ಪ್ರತಿವರ್ಷ ಶ್ರಾವಣ ಮಾಸದಲ್ಲಿ ಪೂಜ್ಯಶ್ರೀ ಅಭಿನವ ಗುರುಗಳು ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು ವಿಶೇಷ ಉಪನ್ಯಾಸಗಳ ಮೂಲಕ ನಮ್ಮೆಲ್ಲರಿಗೆ ಧರ್ಮದ ಸಂಸ್ಕಾರ ಕೊಡುತ್ತಿರುವುದು ಉತ್ತಮ ಕಾರ್ಯ ಎಂದು ಸಂತಸ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಗಳಾಗಿ ಬಿಡಿವಿಸಿ ಉಪಾಧ್ಯಕ್ಷರಾದ ಡಾ.ಜಿ. ಎಸ್. ಭುರಳೆ ಮಾತನಾಡಿ ಇಂದು ಯುವಕರು ಹಾಗೂ ಮಕ್ಕಳಲ್ಲಿ ಹೃದಯ ಸಂಬಂದಿ ಸಮಸ್ಯಯಿಂದ ಸಾವು, ನೋವು ಸಂಭವಿಸುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಆದ್ದರಿಂದ ಯುವಕರು ಹಾಗೂ ಮಕ್ಕಳು ನಿಯಮಿತ ವ್ಯಾಯಾಮ, ಉತ್ತಮ ಆಹಾರ ಸೇವನೆ ಮತ್ತು ಶಿಸ್ತುಬದ್ಧ ಜೀವನ ಮೂಲಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪತ್ರಕರ್ತ ವೀರಶೆಟ್ಟಿ ಮಲಶೆಟ್ಟಿ ಮಾತನಾಡಿ ಗವಿಮಠ ಶಾಂತಿ, ಸಮಾಧಾನದ ಪವಿತ್ರ ತಾಣ. ಪೂಜ್ಯ ಗವಿಮಠ ಗುರುಗಳು ನಮಗೆ ಸದಾ ಧರ್ಮದ ಸಂಸ್ಕಾರ ಕರುಣಿ, ಆಶೀರ್ವದಿಸುತ್ತ ಸನ್ಮಾರ್ಗದಲ್ಲಿ ನಮ್ಮನ್ನು ಮುನ್ನಡೆಸುತ್ತಿರುವುದು ನಮ್ಮೆಲ್ಲರ ಭಾಗ್ಯ ಎಂದು ನುಡಿದರು.

ಮಕ್ಕಳ ನೃತ್ಯ : ನಗರದ ಶ್ರೀಗುರು ಮಹಾಲಿಂಗೇಶ್ವರ ಪ್ರಾಥಮಿಕ ಶಾಲೆಯ ಮಕ್ಕಳ ಸಾಮೂಹಿಕ ನೃತ್ಯ ಎಲ್ಲರ ಗಮನ ಸೆಳೆಯಿತು.

ಶರಣಬಸಪ್ಪ ಅಲಗುಡೆ ಪ್ರಾರ್ಥನಾ ಗೀತೆ ಹಾಡಿದರು. ಶಿಕ್ಷಕ ಮಲ್ಲಿಕಾರ್ಜುನ ಅಲಗುಡೆ ಸಂಚಾಲನೆ ಮಾಡಿದರು.

ಈ ಸಂದರ್ಭದಲ್ಲಿ ಬಸವಂತಪ್ಪ ಲವಾರೆ, ವಿವೇಕ ನಾಗರಾಳೆ, ಶಿವನಗೌಡ ಪಾಟೀಲ, ರಾಕೇಶ್ ಪುರವಂತ, ಶಿವಕುಮಾರ ಮುನ್ನಳ್ಳಿ, ಸಾಗರ ಬಿರಾದಾರ, ಮಹಾಂತ ಪಾಟೀಲ, ಸಂಜು ಕುಮಾರ ರೆಡ್ಡಿ, ವಿಠ್ಠಲ ರಾಯಪ್ಪನವರ, ಪ್ರೋ. ರುದ್ರೇಶ್ವರ ಗೋರ್ಟಾ, ರುದ್ರಮುನಿ ಸ್ವಾಮಿ, ವೀರಣ್ಣ ಪಾಟೀಲ ವೊರಖಂಡಿ, ವೊದಲಾದ ಭಕ್ತರು ಪಾಲ್ಗೊಂಡಿದ್ದರು.

# ಒಳ ಮೀಸಲಾತಿ ತಾರತಮ್ಯ ಸರಿಪಡಿಸಲು ಸರ್ಕಾರಕ್ಕೆ ಚಲವಾದಿ ಮಹಾಸಭಾ ಒತ್ತಾಯ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಒಳ ಮೀಸಲಾತಿ ವರದಿಯಲ್ಲಿ ಆಗಿರುವ ತಾರತಮ್ಯ ಸರಿಪಡಿಸಿ ನ್ಯಾಯ ದೊರಕಿಸಿಕೊಡಲು ಕರ್ನಾಟಕ ರಾಜ್ಯ ಚಲವಾದಿ ಮಹಾಸಭಾ ವತಿಯಿಂದ ಸರ್ಕಾರಕ್ಕೆ ದೂರು ಸಲ್ಲಿಸಿ ಒತ್ತಾಯ ಪಡಿಸಲಾಗಿದೆ ಎಂದು ಚಲವಾದಿ ಮಹಾಸಭಾ ರಾಜ್ಯ ಉಪಾಧ್ಯಕ್ಷ ಕೊಪ್ಪಳದ ಕೃಷ್ಣ ಇಟ್ಟಂಗಿರವರು ಮುಖ್ಯಮಂತ್ರಿ ಅವರಿಗೆ ಪ್ರಕಟಣೆ ಮೂಲಕ ಒತ್ತಾಯಿಸಿದ್ದಾರೆ

ಅವರು ಮಂಗಳವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಏರ್ಪಡಿಸಿದ ಸುದ್ದಿಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡುತ್ತ

ನ್ಯಾಯಮೂರ್ತಿ ನಾಗಮೋಹನ್‌ದಾಸ್‌ರವರ ಅಧ್ಯಕ್ಷತೆಯ ಒಳ ಮೀಸಲಾತಿ, ಏಕ ಸದಸ್ಯ ವಿಚಾರಣಾ ಆಯೋಗವು ದಿನಾಂಕ: 2025 ರ ಆಗಸ್ಟ್ 4 ರಂದು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಪರಿಶಿಷ್ಟ ಜಾತಿ ಬಲಗೈ ಸಮುದಾಯಕ್ಕೆ ಸೇರಿದ ಹರ್ಯೈಯ್ಯ. ಪರವನ್ ಜಾತಿಯನ್ನು ಎಡಗೈ ಪಂಗಡಕ್ಕೆ ಸೇರಿಸಿರುವುದಲ್ಲದೇ ಬಲಗೈ ಸಮುದಾಯಕ್ಕೆ ಸೇರಿದ ಇನ್ನೂ ಹಲವು ಜಾತಿಗಳನ್ನು ಅತ್ಯಂತ ಹಿಂದುಳಿದ ಜಾತಿಗಳ ಗುಂಪಿಗೆ ಸೇರಿಸಿ ಬಲಗೈ ಸಮುದಾಯದ ಜನಸಂಖ್ಯೆಯನ್ನು ಉದ್ದೇಶಪೂರ್ವಕವಾಗಿ ಕಡಿಮೆ ಮಾಡಿರುವುದಲ್ಲದೇ, ಜಾತಿಯೇ ಅಲ್ಲದ ಆದಿಕರ್ನಾಟಕ, ಆದಿದ್ರಾವಿಡ, ಆದಿಅಂದ ಸಮೂಹಕ್ಕೆ ಶೇಕಡ 1ರಷ್ಟು ಮೀಸಲಾತಿ ನಿಗದಿಪಡಿಸಿರುವುದನ್ನು ರದ್ದುಪಡಿಸಿ, ಸದರಿ ಮೀಸಲಾತಿಯನ್ನು ಸಂಬಂಧಿಸಿದ ಜಾತಿಗಳಿಗೆ ಹಂಚಿಕೆ ಮಾಡಲು ಸಚಿವ ಸಂಪುಟದ ಉಪ ಸಮಿತಿ ರಚಿಸಿ ಅಗತ್ಯ ಕ್ರಮ ಕೈಗೊಳ್ಳುವ

ಕುರಿತು ನ್ಯಾಯಮೂರ್ತಿ ನಾಗಮೋಹನ್ ದಾಸ್, ಒಳ ಮೀಸಲಾತಿ, ಏಕ ಸದಸ್ಯ ವಿಚಾರಣಾ ಆಯೋಗವು ಪರಿಶಿಷ್ಟ ಜಾತಿಯ ಕುಟುಂಬಗಳನ್ನು ಸಮೀಕ್ಷೆ ನಡೆಸಿ ದಿ: 04.ರಂದು ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಸದರಿ ವರದಿ ಸಿದ್ಧಪಡಿಸಲು ಮೇ-5-2025 ರಿಂದ ಜುಲೈ-6-2025ರವರೆಗೆ ನಡೆದ ಸಮೀಕ್ಷೆಯಲ್ಲಿ 27.24 ಲಕ್ಷ ಕುಟುಂಬಗಳ 1.07 ಕೋಟಿ ಜನರನ್ನು ಸಮೀಕ್ಷೆ ಮಾಡಿದ್ದು, ಪ್ರಸ್ತುತ 5 ಗುಂಪುಗಳಾಗಿ ವಿಂಗಡಿಸಿ ಅತೀ ಹಿಂದುಳಿದ ಗುಂಪಿಗೆ ಶೇಕಡ 1 ರಷ್ಟು, ಎಡಗೈ ಗುಂಪಿಗೆ ಶೇಕಡ 6 ರಷ್ಟು, ಬಲಗೈ ಗುಂಪಿಗೆ ಶೇಕಡ 5 ರಷ್ಟು, ಬಂಜಾರ, ಭೋವಿ, ಕೊರಮ, ಕೊರಚ, ಅಸ್ಪೃಶ್ಯರಲ್ಲದ ಜಾತಿಗಳಿಗೆ ಶೇಕಡ 4 ರಷ್ಟು, ಜಾತಿಯೇ ಅಲ್ಲದ ಗುಂಪುಗಳಿಗೆ ಅಂದರೆ, ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಅಂದ್ರ ಗುಂಪುಗಳಿಗೆ ಶೇಕಡ 1ರಷ್ಟು ಮೀಸಲಾತಿಯನ್ನು ನಿಗದಿಪಡಿಸಿರುವುದು ಮಾಧ್ಯಮಗಳಲ್ಲಿ ವರದಿಯಾಗಿರುತ್ತದೆ ಇದನ್ನು ಸರಿಪಡಿಸಿ ಆಗಿರುವ ತಾರತಮ್ಯ ಸರಿ ಮಾಡಿ ಒಳ ಮೀಸಲಾತಿ ನ್ಯಾಯ ಸಮ್ಮತವಾಗಿ ಸಿಗುವಂತೆ ಕರ್ನಾಟಕ ಛಲವಾದಿ ಮಹಾಸಭಾ




ಬಸವಕಲ್ಯಾಣ:-ಪ ಪೂ ಶ್ರೀ ಅದ್ವೈತಾನಂದ ಸ್ವಾಮಿಗಳು ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಹೆಮ್ಮರವಾಗಿ ಬೆಳೆದ ಸಂಸ್ಥೆಗೆ ಅಭಿನಂದಿಸಿ, ಸಂಸ್ಥೆ ಇನ್ನೂ ಅಭಿವೃದ್ಧಿ ಪಥದಲ್ಲಿ ಸಾಗಲಿ ಎಂದು ಶುಭ ಹಾರೈಸಿದರು ಅಲ್ಲದೆ 1 ರಿಂದ 7 ನೆಯ ತರಗತಿ ಮಕ್ಕಳಿಗೆ ಭಾರತೀಯ ಸಂಸ್ಕೃತಿ, ಮಹಾತ್ಮ ಬಸವೇಶ್ವರ, ನಡೆದಾಡುವ ದೇವರು ಪೂಜ್ಯ ಸಿದ್ದೇಶ್ವರ ಸ್ವಾಮಿಗಳ ಪ್ರಮುಖ ತತ್ವ "ವಿಶ್ವ ಪ್ರೇಮ " ಕುರಿತು ತಮ್ಮ ಅಭಿಪ್ರಾಯ ವಿವರಿಸಿದರು, ಇದೆ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಬಸವರಾಜ ಕೊರಕೆ ಕಾರ್ಯದಶಿ9 ವಿವೇಕ ಹೊದ ಲೂರೆ ಇನ್ನಿತರರು ಸೆರಿದಂತೆ ಶಿಕ್ಷಕ ಸಿಬ್ಬಂದಿಗಳು ಉಪಸ್ಥಿತರಿದ್ದರು..

# ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಉಚಿತ ಮಕ್ಕಳ ಆರೋಗ್ಯ ಮತ್ತು ನೇತ್ರ ತಪಾಸಣಾ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಆ, 13, ತಾಲೂಕಿನ ಲಯನ್ಸ್ ಕ್ಲಬ್ ಆಫ್ ಸೇಡಂ ವತಿಯಿಂದ ಹಾಗು ರಾಧಾಕೃಷ್ಣ ಆಸ್ಪತ್ರೆ ಸೇಡಂ ಇವರ ಸಹಯೋಗದಲ್ಲಿ ಸತತವಾಗಿ ಮೂರು ವರ್ಷಗಳಿಂದ ಸ್ವಾತಂತ್ರ ದಿನಾಚರಣೆಯ ನಿಮತ್ಯ ಉಚಿತ ಕಣ್ಣಿನ ತಪಾಸಣಾ ಶಿಬಿರ ಮತ್ತು ಕಡಿಮೆ ದರದಲ್ಲಿ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಮಾಡುತ್ತಿದ್ದೂ. ಈ ವರ್ಷವೂ ಕೂಡ ದಿ. 15-08-2025 ಶುಕ್ರವಾರ ರಂದು ಬೆಳಗ್ಗೆ 10-00 ರಿಂದ ಮಧ್ಯಾಹ್ನ 2-00 ಗಂಟೆಯ ವರೆಗೆ ಉಚಿತ ಕಣ್ಣಿನ ತಪಾಸಣಾ ಮತ್ತು ಮಕ್ಕಳ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ಈ ಶಿಬಿರದ ಸದುಪಯೋಗಪಡೆದುಕೊಳ್ಳಬೇಕೆಂದು

ಡಾ, ಪ್ರಮೋದ ಕುಮಾರ ಬಿಚ್ಚಾಲ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ ಈ ಸಂದರ್ಭದಲ್ಲಿ ಡಾ, ಕನಕ ಶುಭಶ್ರೀ ಬಿಚ್ಚಾಲ. ಡಾ, ವೆಂಕಟರಾಮ ರೆಡ್ಡಿ. ಡಾ, ಪ್ರವೀಣ ಜೋಶಿ ಇದ್ದರು.

# ಅಗ್ನಿವೀರ್ ಸೇನಾ ಭರ್ತಿ: 6ನೇ ದಿನಕ್ಕೆ 779 ಅಭ್ಯರ್ಥಿಗಳು ಭಾಗಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 13: ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದಲ್ಲಿ ಆಯೋಜನೆ ಮಾಡಿದ ಅಗ್ನಿವೀರ್ ಸೇನಾ ಭರ್ತಿಗೆ 6ನೇ ದಿನವಾದ ಆಗಸ್ಟ್ 13ರಂದು ಒಟ್ಟು 779 ಅಭ್ಯರ್ಥಿಗಳು ವರದಿ ಮಾಡಿಕೊಂಡರು.

ಈ ಪೈಕಿ, 1600 ಮೀಟರ್ ಓಟದ ಸ್ಪರ್ಧೆಯಲ್ಲಿ 492 ಅಭ್ಯರ್ಥಿಗಳು ತೇರ್ಗಡೆಯಾಗಿ ಮುಂದಿನ ವೈದ್ಯಕೀಯ ಪರೀಕ್ಷೆಗೆ ಪ್ರವೇಶ ಪಡೆದುಕೊಂಡರು.

ಮಳೆಯಿಂದ ಮೈದಾನ ಕೆಸರು: ಆಗಸ್ಟ್ 12ರಂದು ರಾತ್ರಿವೇಳೆಯಲ್ಲಿ ಜಿಟಿಜಿಟಿ ಮಳೆಯು ನಿರಂತರ ಸುರಿದ ಪರಿಣಾಮ ಆಗಸ್ಟ್ 13ರಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣವು ಕೇಸರಿನಿಂದ ಆವೃತವಾಗಿದ್ದು ಕಂಡು ಬಂದಿತು.

ಆಗಸ್ಟ್ 14ರಂದು ಬೆಳಗಾವಿ ಅಭ್ಯರ್ಥಿಗಳು: ವೇಳಾಪಟ್ಟಿಯಂತೆ ಆಗಸ್ಟ್ 14ರಂದು ಬೆಳಗಾವಿ ಜಿಲ್ಲೆಯಿಂದ ಅಂದಾಜು 860 ಅಭ್ಯರ್ಥಿಗಳು ಸೇನಾ ಭರ್ತಿಗೆ ವರದಿ ಮಾಡಿಕೊಳ್ಳಲಿದ್ದಾರೆ ಎಂದು ಸೇನಾಧಿಕಾರಿಗಳು ತಿಳಿಸಿದ್ದಾರೆ.

# ಬಳ್ಳಾರಿ ಮಹಾನಗರ ಪಾಲಿಕೆ: ವಿವಿಧೆಡೆ ದಾಳಿ, ಪ್ಲಾಸ್ಟಿಕ್ ವಶ

ಬಳ್ಳಾರಿ,ಆ.13-ಮಹಾನಗರ ಪಾಲಿಕೆ ವತಿಯಿಂದ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳ ನಿಷೇಧ ಕುರಿತಂತೆ ನಗರದ ಗುಗ್ಗರಹಟ್ಟಿ ಕೈಗಾರಿಕ ಪ್ರದೇಶದಲ್ಲಿ ಸೋಮವಾರ ದಾಳಿ ನಡೆಸಿದ್ದು, ದಾಳಿಯ ಸಂದರ್ಭದಲ್ಲಿ ಒಟ್ಟು 1,400 ಕೆ.ಜಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಶಪಡಿಸಿಕೊಂಡು 50 ಸಾವಿರ ರೂ. ದಂಡ ವಿಧಿಸಲಾಗಿದೆ.

ಕಾರ್ಯಾಚರಣೆ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಆರೋಗ್ಯ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು(ಪರಿಸರ), ಹಿರಿಯ ಮತ್ತು ಕಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸಿಬ್ಬಂದಿಗಳು ಇದ್ದರು.

# ಶಾಹೀನ್ ಗ್ರೂಪ್‌ನಿಂದ ಆಲಂ ಪಾಶಾ ವಿರುದ್ಧ 10 ಕೋಟಿಯ ಮಾನಹಾನಿ ನೋಟಿಸ್

ಮಲ್ಲಮ್ಮ ನುಡಿ ವಾರ್ತೆ

ಬೀದರ,ಆ,13:-ದೇಶದ ಖ್ಯಾತ ಶಿಕ್ಷಣ ಸಂಸ್ಥೆಯಾದ ಶಾಹೀನ್ ಗ್ರೂಪ್ ಅಧ್ಯಕ್ಷ ಡಾ. ಅಬ್ದುಲ್ ಕದೀರ್ ಅವರು, ಬೆಂಗಳೂರಿನ ಸ್ವಯಂಘೋಷಿತ ಸಮಾಜಸೇವಕ ಆಲಂ ಪಾಶಾ ವಿರುದ್ಧ 10 ಕೋಟಿಯ ಮಾನಹಾನಿ

ನೋಟಿಸ್ ಜಾರಿ ಮಾಡಿದ್ದಾರೆ. ನೋಟಿಸ್‌ನಲ್ಲಿ ಎಲ್ಲಾ ಅವಹೇಳನಕಾರಿ ವಿಷಯಗಳನ್ನು

ತಕ್ಷಣವೇ ಎಲ್ಲಾ ಡಿಜಿಟಲ್ ವೇದಿಕೆಗಳಿಂದ ತೆಗೆದುಹಾಕಲು, ನಿರ್ವ್ಯಾಜ ಸಾರ್ವಜನಿಕ

ಕ್ಷಮೆಯಾಚನೆ ಸಲ್ಲಿಸಲು ಹಾಗೂ ಹಾನಿ ಪರಿಹಾರ ಮೊತ್ತವನ್ನು ಪಾವತಿಸಲು

ಆಗ್ರಹಿಸಲಾಗಿದೆ. ಇದಕ್ಕಾಗಿ ಮೂರು ದಿನಗಳ ಗಡುವು ನೀಡಲಾಗಿದ್ದು, ಅವಧಿಯೊಳಗೆ

ಅನುಸರಿಸದಿದ್ದರೆ ಭಾರತೀಯ ನ್ಯಾಯ ಸಂಹಿತೆ (BNS) ಅಡಿಯಲ್ಲಿ ದಿವಾನಿ ಹಾಗೂ

ಕ್ರಿಮಿನಲ್ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಲಾಗಿದೆ.

ಈ ನೋಟಿಸ್ ಅನ್ನು ಬೆಂಗಳೂರಿನ ಹಿರಿಯ ವಕೀಲ ಪಿ. ಉಸ್ಮಾನ್ ಅವರ ಮುಖಾಂತರ ಆಲಂ ಪಾಶಾಗೆ ಕಳುಹಿಸಲಾಗಿದೆ. ಕಳೆದ ಆರು ತಿಂಗಳಿನಿಂದ ಆಲಂ ಪಾಶಾ ಫೇಸ್‌ಬುಕ್, ಯೂಟ್ಯೂಬ್ ಮತ್ತು ಇನ್‌ಸ್ಟಾಗ್ರಾಂ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ "ಸುಳ್ಳು, ಅಸತ್ಯ ಮತ್ತು ಅವಮಾನಕಾರಿ" ವೀಡಿಯೊಗಳನ್ನು ಪ್ರಸಾರ ಮಾಡುತ್ತಿದ್ದಾರೆಂಬ ಆರೋಪ ನೋಟಿಸ್‌ನಲ್ಲಿ

ಮಾಡಲಾಗಿದೆ.

ಆ ವೀಡಿಯೊಗಳಲ್ಲಿ ಡಾ. ಅಬ್ದುಲ್ ಕದೀರ್ ಅವರ ಮೇಲೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ವಿದ್ಯಾರ್ಥಿವೇತನ ನಿಧಿಯಲ್ಲಿ ಹಣಕಾಸಿನ ದುರುಪಯೋಗ ಮಾಡಿರುವುದು ಹಾಗೂ ಸಾರ್ವಜನಿಕ ಹಣವನ್ನು ತಮ್ಮದಾಗಿಸಿಕೊಂಡಿರುವುದು ಎಂದು ಆರೋಪಿಸಿ, ಅವರನ್ನು "ಕಳ್ಳ"

ಎಂಬ ಅವಮಾನಕಾರಿ ಪದದಿಂದ ಉಲ್ಲೇಖಿಸಲಾಗಿದೆ.

ಶಾಹೀನ್ ಸಂಸ್ಥೆಗಳ ಬೀದರ್ ಅಧ್ಯಕ್ಷ ಡಾ. ಅಬ್ದುಲ್ ಕದೀರ್ ಅವರ ಹೇಳಿಕೆಯಲ್ಲಿ, ಈ

ಸುಳ್ಳು ಹಾಗೂ ಅಸತ್ಯ ಆರೋಪಗಳಿಂದ ತಮ್ಮ ಖ್ಯಾತಿಗೆ ತೀವ್ರ ಹಾನಿಯಾಗಿದೆ ಮತ್ತು

ಮಾನಸಿಕ ಯಾತನೆ ಅನುಭವಿಸಬೇಕಾಗಿದೆ ಎಂದು ತಿಳಿಸಿದ್ದಾರೆ. ಇದೇ ಕಾರಣ-ಕ್ಕೆ ಅವರು ಆಲಂಪಾಶಾಗೆ ಈ ಮಾನಹಾನಿ ನೋಟಿಸ್ ನೀಡಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

# ಅಂಗನವಾಡಿಗಳಲ್ಲಿ ಮೂಲ ಸೌಕರ್ಯಗಳನ್ನು ಪರಿಶೀಲಿಸಿ: ಜಿಪಂ ಸಿಇಓ ಈಶ್ವರ ಕುಮಾರ ಕಾಂದೂ ಸೂಚನೆ

ಮಲ್ಲಮ್ಮ ನುಡಿವಾರ್ತೆ

ರಾಯಚೂರು ಆಗಸ್ಟ್ 13- ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಕಾಲ-ಕಾಲಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಬೇಕು. ಅಂಗನವಾಡಿಯ ಕಾರ್ಯಕರ್ತರ ಹಾಜರಾತಿ, ಮಕ್ಕಳಿಗೆ ನೀಡುವ ಪೌಷ್ಟಿಕ ಆಹಾರ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಗಸ್ಟ್ 12ರ ಮಂಗಳವಾರ ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇ-ರಿಯ ಸಭಾಂಗಣದಲ್ಲಿ ಜರುಗಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ಬಾಲ್ಯ ವಿವಾಹ ತಡೆಗಟ್ಟಲು ಅಗತ್ಯ ಕ್ರಮವಹಿಸಬೇಕು. 14 ರಿಂದ 18 ವರ್ಷದ ಯುವತಿಯರಿಗೆ ಕೌಶಲ ತರಬೇತಿ ನೀಡಿ ಉದ್ಯೋಗ ಅವಕಾಶ ಮಾಡಿದರೆ ಅನುಕೂಲವಾಗಲಿದ್ದು, ಈ ತರಬೇತಿ ಕಾರ್ಯಕ್ರಮದಡಿ ತಾಲೂಕು ಮಟ್ಟದಲ್ಲಿ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಿ ಗ್ರಾಮೀಣ ನಿರುದ್ಯೋಗ ಯುವತಿಯರಿಗೆ ಉದ್ಯೋಗ ದೊರಕಿಸಬೇಕೆಂದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ಮತ್ತು ಪೋಕ್ಸೋ ಅಪರಾಧಗಳು ಕಂಡುಬಂದಲ್ಲಿ ಸೂಕ್ತ ಕ್ರಮಕೈಗೊಳ್ಳಬೇಕು. ಬಾಲ್ಯ ವಿವಾಹ ಮತ್ತು ಪೋಕ್ಸೋ ಪ್ರಕರಣಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಬೀದಿ ನಾಟಕಗಳು ಮತ್ತು ಜಾಗೃತ ಕಾರ್ಯಕ್ರಮಗಳನ್ನು ಹೆಚ್ಚಾಗಿ ಆಯೋಜನೆ ಮಾಡಬೇಕು. ಬಾಲ್ಯ ವಿವಾಹಗಳ ಬಗ್ಗೆ ನಿಗಾವಹಿಸಿ ತಡೆಗಟ್ಟಲು ಮಾರ್ಗಸೂಚಿಗಳನ್ನು ರೂಪಿಸಬೇಕು. ಸಾರ್ವಜನಿಕರ ಸಹಕಾರ ಪಡೆದು ಗ್ರಾಮ ಪಂಚಾಯಿತಿಯ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಹಾಜರಾತಿಯು ಕಡ್ಡಾಯವಾಗಿ ಇರುವಂತೆ ನೋಡಿಕೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಿಇಓ ಅವರು ಸೂಚನೆ ನೀಡಿದರು.

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್ ಅವರು ಮಾತನಾಡಿ, ಶಾಲಾ ಶಿಕ್ಷಕರು ಮತ್ತು ಅಂಗನವಾಡಿ ಕಾರ್ಯಕತೆ-ಯರು ಗ್ರಾಮಗಳಲ್ಲಿಯೇ ಇರುವುದರಿಂದ ಬಾಲ್ಯ ವಿವಾಹಗಳ ಬಗ್ಗೆ ಪತ್ತೆ ಹಚ್ಚಿ ಕಾರ್ಯಪಡೆಗೆ ಸಕಾಲಕ್ಕೆ ಮಾಹಿತಿ ಒದಗಿಸಲು ಕಾಳಜಿ ವಹಿಸಬೇಕು ಎಂದು ಸೂಚನೆ ನೀಡಿದರು. ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು ಮತ್ತು ಪೋಷಣ್ ತಂತ್ರಾಂಶದಲ್ಲಿ ಫಲಾನುಭವಿಗಳ ಆಧಾರ್ ಸೀಡಿಂಗ್ 2025ರ ಜುಲೈ ಅಂತ್ಯಕ್ಕೆ ಒಟ್ಟು 2,42,482 ಫಲಾನುಭವಿಗಳಿದ್ದು, 2,42,457 ಆಧಾರ್ ವೇರಿಫೈಡ್ ಮಾಡಲಾಗಿದೆ. ಇನ್ನೂ 25 ವೇರಿಫೈಡ್ ಬಾಕಿ ಉಳಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಪೋಷಣೆ ಅಭಿಯಾನ ಯೋಜನೆ ಸರಿಯಾಗಿ ಅನುಷ್ಠಾನಗೊಳಿ: ಜಿಲ್ಲೆಯಲ್ಲಿ ಪೋಷಣಾ ಅಭಿಯಾನ ಯೋಜನೆಯಡಿ ಅಂಗನವಾಡಿ ಕೇಂದ್ರಗಳಿಗೆ ವಿತರಸಲಾದ ಗ್ರೋಥ್ ಮಾನಿಟರಿಂಗ್ ಮಾಪನಗಳ ಮಾಹಿತಿ ನೀಡುವಲ್ಲಿ ಹೆಚ್ಚಿನ ಗಮನಹರಿಸಬೇಕು. ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು ಮತ್ತು ಫಲಾನುಭವಿಗಳ ಆಧಾರ್ ಸೀಡಿಂಗ್ ಮಾಹಿತಿ ಸರಿಯಾದ ರೀತಿಯಲ್ಲಿ ನೀಡಬೇಕು. ಜಿಲ್ಲೆಯಲ್ಲಿರುವ ಒಟ್ಟು ಫಲಾನುಭವಿಗಳ ಮೊಬೈಲ್ ಸಂಖ್ಯೆ ಪರಿಶೀಲಿಸಿ ಮಾಹಿತಿ ನೀಡಬೇಕು. ಪೋಷಣ್ ನಲ್ಲಿ ದೈನಂದಿನ ಚಟುವಟಿಕೆಯ ಮಾಹಿತಿಯು ಸಹ ಅಧಿಕಾರಿಗಳಿಗೆ ಸಲ್ಲಿಸಬೇಕು. ಪೋಷಣ್ ಫಲಾನುಭವಿಗಳನ್ನು 0-6 ವರ್ಷದ ಮಕ್ಕಳ ತೂಕ ಮತ್ತು ಎತ್ತರ ಮಾಡಬೇಕು. ಹದಿಹರೆಯದ ಕಿಶೋರಿಯರ ತೂಕ ಮತ್ತು ಎತ್ತರ ಅಳವಡಿಸಿರುವ ಮಾಹಿತಿ, ಪೋಷಣ್ ತಂತ್ರಾಂಶದಲ್ಲಿ ಫಲಾನುಭವಿಗಳ ಮನೆ ಭೇಟಿ ಮಾಹಿತಿ ನೀಡಿ ಜಿಲ್ಲೆಯಲ್ಲಿ ಪೋಷಣೆ ಅಭಿಯಾನ ಯೋಜನೆಯನ್ನು ಸರಿಯಾಗಿ ಅನುಷ್ಠಾನಗೊಳಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಲವಾರು ಯೋಜನೆಗಳಾದ ಮಿಶನ್ ಶಕ್ತಿ ಯೋಜನೆ, ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನ, ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ, ಶಕ್ತಿ ಸದನ ಯೋಜನೆ, ಶಿಶು ಪಾಲನಾ ಕೇಂದ್ರಗಳು, ಬಾಲಕಿಯರ ವಸತಿ ನಿಲಯ ಯೋಜನೆ, ಸಾಂತ್ವನ ಯೋಜನೆ, ಸ್ತ್ರೀ ಶಕ್ತಿ ಯೋಜನೆ ಸೇರಿದಂತೆ ಇತರೆ ಯೋಜನೆಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ನಂದಿತಾ, ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಕೆ.ಡಿ.ಬಡಿಗೇರ, ಮಿಶನ್ ಶಕ್ತಿ ಯೋಜನೆಯ ನಿರ್ವಾಹಕರಾದ ಗಿರಿಜಾ, ಸಖಿ ಒನ್ ಕೇಂದ್ರ ರೀಮ್ಸ್ ಸಿಬ್ಬಂದಿ ಭಾಗ್ಯವತಿ, ಒ.ಎಸ್.ಸಿ ಲೀಗಲ್ ಅಡ್ವೋ-ಕೇಟ್ ಪಾರ್ವತಿ ಸೇರಿದಂತೆ ಇತರರು ಇದ್ದರು.



ಬೀದರ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಂದು ಆಗಸ್ಟ್.15 ರಂದು ನಡೆಯಲಿರುವ ಧ್ವಜಾರೋಹಣ ಹಿನ್ನೆಲೆಯಲ್ಲಿ ಜಿಲ್ಲಾ ನೆಹರು ಕ್ರೀಡಾಂಗಣಕ್ಕೆ ಭೇಟಿ ನೀಡಿ ಸಿದ್ಧತೆ ಪರಿಶೀಲಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಿದ್ಧಾರೂಢ ಮಠ: ಕೃಷ್ಣ ಜನ್ಮಾಷ್ಟಮಿ ನಾಳೆ

ಬೀದರ. ಆ. 13 : ಇಲ್ಲಿಯ ಸಿದ್ಧಾರೂಢ ಮಠದಲ್ಲಿ ಆಗಸ್ಟ್ 15 ರಂದು ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ರಾತ್ರಿ 10ಕ್ಕೆ ಭಜನೆ, ರಾತ್ರಿ 11ಕ್ಕೆ ಕೃಷ್ಣನ ಬಾಲ ಲೀಲೆ ಕುರಿತು



ಪ್ರವಚನ, ರಾತ್ರಿ 12ಕ್ಕೆ ತೊಟ್ಟಿಲು ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸದ್ಗುರುವಿನ ಕೃಪೆಗೆ ಪಾತ್ರರಾಗಬೇಕು ಎಂದು ಮಠದ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಮನವಿ ಮಾಡಿದ್ದಾರೆ.

## ಮಳೆಗೆ ಜನಜೀವನ ಸಂಪೂರ್ಣ ಅಸ್ತವ್ಯಸ್ತ



ಬೀದರ. ಆ. 13 : ನಗರ ಸೇರಿದಂತೆ ಜಿಲ್ಲೆಯ ಹಲವೆಡೆಗಳಲ್ಲಿ ಸೋಮವಾರ ಉತ್ತಮ ಮಳೆಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿತು.

ಬೆಳಿಗ್ಗೆಯಿಂದ ಮಧ್ಯಾಹ್ನದ ಆಕಾಶ ಶುಭ್ರವಾಗಿತ್ತು. ಮಧ್ಯಾಹ್ನ ದಟ್ಟ ಕಾರ್ಮೋಡ ಕವಿದು, ಬಿರುಸಿನ ಮಳೆಯಾಯಿತು. ಆನಂತರ ಬಿಟ್ಟು ಬಿಟ್ಟು ರಾತ್ರಿ ವರೆಗೆ ಜಿಟಿಜಿಟಿ ಮಳೆ ಸುರಿಯಿತು. ನಡು ನಡುವೆ ಜೋರಾಗಿ ವರ್ಷಧಾರೆಯಾಯಿತು. ಇದರಿಂದಾಗಿ ವಾತಾವರಣ ಸಂಪೂರ್ಣ ತಂಪಾಯಿತು.

ಸತತ ಮಳೆಗೆ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿತು. ಸಂಜೆ ನಂತರ ಹೊರಗೆ ಜನರ ಓಡಾಟ ಹೆಚ್ಚಿಗೆ ಇರಲಿಲ್ಲ. ನಗರದ ಮನ್ನಳ್ಳಿ ರಸ್ತೆ, ಹಾರೂರಗೇರಿ ಕಮಾನ್, ಛತ್ರಪತಿ ಶಿವಾಜಿ ಮಹಾರಾಜರ ವೃತ್ತ ಸೇರಿದಂತೆ ಹಲವೆಡೆಗಳಲ್ಲಿ ರಸ್ತೆಯಲ್ಲಿ ಅಪಾರ ನೀರು ಸಂಗ್ರಹಗೊಂಡಿದ್ದರಿಂದ ವಾಹನ ಸವಾರರು ಪರದಾಟ ನಡೆಸಿದರು. ಪ್ರಮುಖ ವೃತ್ತಗಳಲ್ಲಿ ಸಂಜೆ ವಾಹನಗಳು ನಿಧಾನ ಗತಿಯಲ್ಲಿ ಸಂಚರಿಸಿದ ಪರಿಣಾಮ ಜನ ಸಮಸ್ಯೆ ಅನುಭವಿಸಿದರು.

ಬೀದರ್ ತಾಲ್ಲೂಕಿನ ಮರಕಲ್, ಚಿಕ್ಕಪೇಟೆ, ಮಾಮನಕೇರಿ, ಬೆನಕನಳ್ಳಿ, ಜನವಾಡ, ಶಹಾಪುರ ಗೇಟ್, ಮಲ್ಕಾಪೂರ, ಗೋರನಳ್ಳಿ, ಚಿಟ್ಟಾ, ಘೋಡಂಪಳ್ಳಿ, ಅಮಲಾಪೂರ ಸೇರಿದಂತೆ ಹಲವೆಡೆ ಮಳೆಯಾಗಿರುವುದು ವರದಿಯಾಗಿದೆ.

ಜಿಲ್ಲೆಯ ಭಾಲ್ಕಿ, ಹುಲಸೂರ, ಹುಮನಾಬಾದ್, ಚಿಟಗುಪ್ಪದಲ್ಲೂ ಉತ್ತಮ ಮಳೆಯಾಗಿದೆ. ಮಂಗಳವಾರವೂ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

## ಏಡ್ಸ್ ತಡೆಗೆ ಯುವ ಜನರ ಸಹಕಾರ ಅಗತ್ಯ



ಬೀದರ. ಆ. 13 : ಏಡ್ಸ್ ತಡೆಗೆ ಯುವ ಜನರ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕದ ಕಾರ್ಯಕ್ರಮ ಅಧಿಕಾರಿ ಡಾ. ಅನಿಲಕುಮಾರ ಚಿಂತಾಮಣಿ ಹೇಳಿದರು. ನಗರದ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ ಜಿಲ್ಲಾಮಟ್ಟದ ಅಂತರರಾಷ್ಟ್ರೀಯ ಯುವ ದಿನಾಚರಣೆ, ಎಚ್‌ಐವಿ/ಏಡ್ಸ್ ಅರಿವು ಮಾಸಾಚರಣೆ ಉದ್ಘಾಟನೆ ಹಾಗೂ ಭಿತ್ತಿಚಿತ್ರ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಚ್‌ಐವಿ/ಏಡ್ಸ್ ತಡೆಗಟ್ಟಲು ಸರ್ಕಾರ ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ತಿಳಿಸಿದರು. ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಮಾತನಾಡಿ, ಆರೋಗ್ಯವಂತ ಶರೀರದಲ್ಲಿ ಮಾತ್ರ ಉಲ್ಲಸಿತ ಮನಸ್ಸು ಇರಲು ಸಾಧ್ಯವಿದೆ. ಸದೃಢ ಆರೋಗ್ಯಕ್ಕಾಗಿ ಯುವಕರು ಪೌಷ್ಟಿಕ ಆಹಾರ ಸೇವಿಸಬೇಕು. ಉತ್ತಮ ಹವ್ಯಾಸಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು. ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಪ್ರೊ. ಆರ್.ವಿ. ಗಂಗಶೆಟ್ಟಿ ಮಾತನಾಡಿ, ಸಮೃದ್ಧ ರಾಷ್ಟ್ರ ನಿರ್ಮಾಣದಲ್ಲಿ ಯುವ ಶಕ್ತಿಯ ಪಾತ್ರ ಮಹತ್ವದ್ದಾಗಿದೆ. ಏಡ್ಸ್‌ನಂಥ ಮಹಾಮಾರಿ ಬಗ್ಗೆ ಯುವಕರಲ್ಲಿ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸುವ ಕೆಲಸ ಆಗಬೇಕಿದೆ ಎಂದು ಹೇಳಿದರು. ಯುವಕರು ದುಶ್ಚಟಗಳಿಂದ ದೂರ ಇರಬೇಕು. ಸದೃಢ ಸಮಾಜಕ್ಕೆ ಕೊಡುಗೆ ನೀಡಲು ಸಂಕಲ್ಪ ತೊಡಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ನಾಗಪ್ಪ ಜಾನಕನೋರ ತಿಳಿಸಿದರು.

ಭಿತ್ತಿ ಚಿತ್ರ ಸ್ಪರ್ಧೆಯಲ್ಲಿ ವಿಜೇತರಾದ ಗುರುನಾನಕ್ ಝೀರಾ ಸಾಹೇಬ್ ನರ್ಸಿಂಗ್ ಕಾಲೇಜಿನ ಸತೀಶ್ (ಪ್ರಥಮ), ವಿದ್ಯಾನಿಧಿ ಪ್ರೌಢಶಾಲೆಯ ಅನನ್ಯ (ದ್ವಿತೀಯ) ಹಾಗೂ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜಿನ ವಿದ್ಯಾರ್ಥಿನಿ ರಕ್ಷಿತಾ (ತೃತೀಯ) ಅವರಿಗೆ ಕ್ರಮವಾಗಿ ತಲಾ ರೂ. 3,000, ರೂ. 2,000 ಹಾಗೂ ರೂ. 1,000 ಬಹುಮಾನ ವಿತರಿಸಲಾಯಿತು. ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕದ ಮೇಲ್ವಿಚಾರಕ ಸೂರ್ಯಕಾಂತ, ಕಾರ್ಯಕ್ರಮ ಸಹಾಯಕ ಸಂಜಯ್,

ಉಪನ್ಯಾಸಕರಾದ ನಟರಾಜ, ನೆಹರೂ, ಡಾ. ಪಂಡಿತ, ಈಶ್ವರ ರೆಡ್ಡಿ, ಮಂಗಲಾ, ರಾಜಮ್ಮ ನೇಳಗೆ, ಸಪ್ನಾ, ಶ್ವೇತಾ, ಅಂಬಿಕಾ, ವಿಜಯಲಕ್ಷ್ಮಿ ಸ್ವಾಮಿ ಇದ್ದರು.

ಉಪನ್ಯಾಸಕಿ ವಿಜಯಲಕ್ಷ್ಮಿ ನಿರೂಪಿಸಿದರು. ಶ್ರೀಲತಾ ಸ್ವಾಗತಿಸಿದರು. ರಾಖಿ ಕಾಡಗೆ ವಂದಿಸಿದರು. ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ ಹಾಗೂ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜು ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

# ಬಿ.ವಿ ಬಿ. ಮಹಾವಿದ್ಯಾಲಯದಲ್ಲಿ ಹರ್ ಘರ್ ತಿರಂಗಾ ರ್‍ಯಾಲಿಗೆ ಪ್ರಾಚಾರ್ಯರಿಂದ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಅ. 13: ಬಿ. ವಿ. ಭೂಮರಡ್ಡಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ವತಿಯಿಂದ "ಆಜಾದಿ ಕಾ ಅಮೃತ ಮಹೋತ್ಸವ" ಅಂಗವಾಗಿ ಹರ್ ಘರ್ ತಿರಂಗಾ ರ್‍ಯಾಲಿಯನ್ನು ಇಂದು ಭವ್ಯವಾಗಿ ಆಯೋಜಿಸಲಾಯಿತು.



ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪಿ. ವಿಠಲ ರೆಡ್ಡಿ ಅವರು ಹಸಿರು ನಿಶಾನ ತೋರಿಸಿ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡುತ್ತಾ – "ಹರ್ ಘರ್ ತಿರಂಗಾ ಕೇವಲ ಒಂದು ಅಭಿಯಾನವಲ್ಲ, ಇದು ಪ್ರತಿಯೊಬ್ಬ ಭಾರತೀಯನ ಹೃದಯದಲ್ಲಿ ದೇಶ ಪ್ರೇಮವನ್ನು ಬಿತ್ತುವ ಕಾರ್ಯವಾಗಿದೆ" ಎಂದು ಹೇಳಿದರು. ಎನ್.ಸಿ.ಸಿ ಕ್ಯಾಡೆಟ್ಸ್, ವಿದ್ಯಾರ್ಥಿಗಳು, ಅಧ್ಯಾಪಕರು ಹಾಗೂ ಸಿಬ್ಬಂದಿಗಳು ಕೈಯಲ್ಲಿ ತ್ರಿವರ್ಣ ಧ್ವಜಗಳನ್ನು ಹಿಡಿದು, ದೇಶಭಕ್ತಿಯ ಘೋಷಣೆಗಳನ್ನು ಕೂಗುತ್ತಾ ಬಿ.ವಿ.ಬಿ. ಮಹಾವಿದ್ಯಾಲಯ – ಚನ್ನಮ್ಮ ವೃತ – ರಾಮ ಚೌಕ್ – ಬೋಮಗೊಂಡೇಶ್ವರ ವೃತದಿಂದ ಹಿಂತಿರುಗಿ ಮಹಾವಿದ್ಯಾಲಯದವರೆಗೆ ರ್‍ಯಾಲಿಯಲ್ಲಿ ಸಂಚರಿಸಿದರು. ರ್‍ಯಾಲಿ ವೇಳೆ ವಿದ್ಯಾರ್ಥಿಗಳು ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ದೇಶಭಕ್ತಿಯ ಮಹತ್ವ ಮತ್ತು ಪ್ರತಿಯೊಂದು ಮನೆಯಲ್ಲಿ ರಾಷ್ಟ್ರಧ್ವಜ ಹಾರಿಸುವ ಸಂದೇಶವನ್ನು ಜನತೆಗೆ ತಲುಪಿಸಿದರು. ಕಾರ್ಯಕ್ರಮದಲ್ಲಿ ಉಪ ಪ್ರಾಚಾರ್ಯರಾದ ಶ್ರೀ ಅನಿಲಕುಮಾರ ಅಣದೂರೆ, ಸೈನಿಕ ಶಾಲೆ ಹಾಗೂ ನ್ಯಾಷನಲ್ ಆಂಗ್ಲ ಮಾಧ್ಯಮ ಶಾಲೆ ಪ್ರಾಚಾರ್ಯರಾದ ಡಾ. ಶ್ರೀಲತಾ ಜಿ. ಸ್ವಾಮಿ, ಎನ್.ಸಿ.ಸಿ ಅಧಿಕಾರಿ ಶ್ರೀ ಮಾರುತಿ ಭೀಮಣ್ಣ, ಎನ್‌ಎಸ್‌ಎಸ್ 'ಬ' ಘಟಕಾಧಿಕಾರಿ ಶ್ರೀ ಬಸವರಾಜ ಬಿರಾದಾರ, ವಿವಿಧ ವಿಭಾಗಗಳ ಮುಖ್ಯಸ್ಥರು ಮತ್ತು ಶಿಕ್ಷಕರು ಸಕ್ರಿಯವಾಗಿ ಪಾಲ್ಗೊಂಡರು.

# ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ಯ 75 ಹಳ್ಳಿಗಳು ಹಸೀರಿಕರಣ : ದುರ್ಗಾಳೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ :ಅ.13: ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ 75ನೇ ಜಯಂತಿಯ ಅಮೃತ ಮಹೋತ್ಸವ ನಿಮಿತ್ಯ ತಾಲೂಕಿನ 75 ಹಳ್ಳಿಗಳಲ್ಲಿ ಮರ ನೆಡುವ ಮೂಲಕ ಹಸಿರೀಕರಣ ಮಾಡಲಾಗುವುದು ಎಂದು ನವ ಚೇತನ ಸೇವಾ ಸಂಘದ ಅಧ್ಯಕ್ಷ ಶರದ್ ದುರ್ಗಾಳೆ ಹೇಳಿದರು.



ಪಟ್ಟಣದ ಡಿ.ಕೆ.ಸಿದ್ರಾಮ ನಿವಾಸದ ಕಚೇರಿಯಲ್ಲಿ ಬುಧವಾರ ಕರೆದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸೆ.25 ರಂದು ನಡೆಯುವ ಹಿರೇಮಠ ಸಂಸ್ಥಾನದ ಹಿರಿಯ ಸ್ವಾಮೀಜಿಯಾದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ 75ನೇ ಜಯಂತಿಯ ಅಮೃತ ಮಹೋತ್ಸವ ನಿಮಿತ್ಯ ತಾಲೂಕಿನ 75 ಹಳ್ಳಿಗಳಲ್ಲಿ ಸಂಘಟನೆಯ ವತಿಯಿಂದ ಮರಗಳನ್ನು ನೆಡುವ ಮೂಲಕ ತಾಲೂಕವನ್ನು ಹಸಿರೀಕರಣ ಮಾಡಲಾಗುವುದು ಹಾಗೂ ಜಿಲ್ಲೆಯ ಎಲ್ಲಾ ಸಮಾಜದ ಮಠಾಧೀಶರನ್ನು ಒಂದು ವೇದಿಕೆಯಲ್ಲಿ ಕರೆದು ಸಂತ ಸಮ್ಮೇಳನ ಆಯೋಜಿಸಲಾಗುವುದು. ಹಾಗೆಯೇ ಸಂಘಟನೆಯ ವತಿಯಿಂದ ಹಲವಾರು ಸಾಮಾಜಿಕ ಕಾರ್ಯಕ್ರಗಳನ್ನು ಆಯೋಜಿಸಿ ತಾಲುಕು ಅಭಿವೃದ್ಧಿಗಾಗಿ ಶ್ರಮಿಸಲಾಗುವುದು. ಈ ಎಲ್ಲಾ ಕಾರ್ಯಕ್ರಮಗಳು ನಮ್ಮ ಸಂಘಟನೆಯ ನೇತಾರರಾದ ಡಿ.ಕೆ.ಸಿದ್ರಾಮರವರ ನೇತೃತ್ವದಲ್ಲಿ ಈ ನಡೆಯುತ್ತವೆ. ನಾನು ಮತ್ತು ಎನ್.ಎಸ್.ಎಸ್.ಕೆ ಅಧ್ಯಕ್ಷ ಡಿ.ಕೆ.ಸಿದ್ರಾಮರವರು ಕಾರಣಾಂರಗಳಿಂದ ಬಿಜೆಪಿ ಪಕ್ಷದಿಂದ ದೂರವಿದ್ದರೂ ಬಿಜೆಪಿ ಪಕ್ಷಕ್ಕಾಗಿಯೇ ದುಡಿಯುತ್ತಲಿದ್ದೇವೆ. ಆದರೆ ಬಿಜೆಪಿ ತಾಲೂಕು ಮಂಡಲ ಅಧ್ಯಕ್ಷರಾದ ವೀರಣ್ಣಾ ಕಾರಬಾರಿಯವರು ನಮ್ಮ ಜನಪ್ರಿಯತೆಯನ್ನು ಸಹಿಸದೇ ಪತ್ರಿಕಾ ಗೋಷ್ಠಿ ಕರೆದು, ನಮಗೆ ಕಾಂಗ್ರೆಸ್ ಬಿ ಟೀಮ್ ಎಂದು ಹೇಳುತ್ತಿವುದು ಯಾವ ನ್ಯಾಯವೆಂದು ಪ್ರಶ್ನಿಸಿದರು. ಇದೇ ವೀರಣ್ಣಾ ಕಾರಬಾರಿಯವರು 2024ರ ಎಮ್.ಪಿ. ಚುನಾವಣೆಯಲ್ಲಿ ಡಿ.ಕೆ.ಸಿದ್ರಾಮರವರನ್ನೇ ಬಳಸಿಕೊಂಡು ತಾಲೂಕಿನಾದ್ಯಂತ ಪ್ರಚಾರ ನಡೆಸಿದ್ದಾರೆ. ಅಂದು ಉಚ್ಚಾಟಿತ ಡಿ.ಕೆ.ಸಿದ್ರಾಮ ಎನ್ನದೇ ಇವತ್ತು ಯಾಕೆ ಈ ಮಾತು ಹೇಳುತ್ತಿದ್ದಾರೆ. ಇದನ್ನೆಲ್ಲಾ ಸೂಕ್ಷ ??ವಾಗಿ ಗಮನಿಸಿದರೇ ಕಾಂಗ್ರೆಸ್ ಪಕ್ಷದಿಂದ ಬಂದಂತಹ ವೀರಣ್ಣಾ ಕಾರಬಾರಿಯವರೇ ಕಾಂಗ್ರೆಸ್ ಬಿ ಟೀಮ್ ಆಗಿ ಕೆಲಸ ಮಾಟಡುತ್ತಿದ್ದಾರೆ ಎಂದು ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ ಎಂದು ಹೇಳಿದರು.

ಸಂಘದ ಕಾರ್ಯದರ್ಶಿ ಜೈರಾಜ್ ಕೊಳ್ಳಾ ಮಾತನಾ, ವೀರಣ್ಣಾ ಕಾರಬಾರಿಯವರು ಡಿ.ಕೆ.ಸಿದ್ರಾಮ್ ಮತ್ತು ತಂಡದವರಿಗೆ ಬಿ.ಟೀಮ್, ಸಿ. ಟೀಮ್ ಎಂದು ಕರೆಯುವವರು ಕಳೆದ ಎಮ್.ಪಿ.ಚುನಾವಣೆಯಲ್ಲಿ ಡಿ.ಕೆ.ಸಿದ್ರಾಮರವರನ್ನು ಬಿಟ್ಟು ಯಾವುದೇ ಪ್ರಚಾರಕ್ಕೆ ಹೋಗಿಲ್ಲಾ, ಇದನ್ನೆಲ್ಲಾ ನೋಡಿದರೆ ಭಾಲ್ಕಿಯಲ್ಲಿ ಬಿಜೆಪಿ ಶಕ್ತಿ ಕ್ಷೀಣಿಸಿ ಕಾಂಗ್ರೆಸ್ ಪಕ್ಷಕ್ಕೆ ಇವರೇ ಬಲ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪ್ರಮುಖರಾದ ಸಂಗಮೇಶ ಭೂರೆ, ವಿನೋದ ಕಾರಾಮುಂಗೆ, ವಿಭಿಷಣ ಮೇತ್ರೆ, ಕೈಲಾಸ ಪಾಟೀಲ ಮತ್ತಿತರರು ಇದ್ದರು.

## ಆರ್ಬಿಟ್ ಸಂಸ್ಥೆಯಿಂದ ಉಚಿತ ಕ್ಯಾನ್ಸರ್ ಮತ್ತು ನೇತ್ರ ತಪಾಸಣೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.13: ತಾಲೂಕಿನ ದಾಡಗಿ ಗ್ರಾಮದ ವಿದ್ಯಾಭಾರತಿ ಹಿರಿಯ ಪ್ರಾಥಮಿಕ ಶಾಲೆಯ ಆವಣರದಲ್ಲಿ ಕ್ಯಾನ್ಸರ್ ಮತ್ತು ನೇತ್ರ ತಪಾಸಣೆ ಶಿಬಿರ ನಡೆಯಿತು.



ಮಹಿಳಾ ಸಬಲೀಕರಣ ಯೋಜನೆಯ ಕಾರ್ಯಕರ್ತೆ ಸುಜಾತಾ ರವರು ಪ್ರಾರ್ಥನಾ ಗೀತೆಯೊಂದಿಗೆ ಶಿಬಿರಕ್ಕೆ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಸುಮಾರು 33 ವರ್ಷಗಳಿಂದ ಆರ್ಬಿಟ್ ಸಂಸ್ಥೆಯು ಸಮಾಜ ಸೇವೆಯನ್ನು ಮಾಡುತ್ತಾ ಬಂದಿದೆ. ಮಾನಸಿಕ ಅಸ್ವಸ್ಥತೆ ಮತ್ತು ಬೆಳವಣಿಗೆಯಲ್ಲಿ ಕುಂಠಿತ ವಿರುವ ಮಕ್ಕಳ ಮತ್ತು ಮಹಿಳೆಯರ ಸಬಲೀಕರಣ ಮತ್ತು ಸಮಾಜ ಸೇವೆಯಲ್ಲಿ ತೊಡಗಿ ಅವರ ಜೀವನ ಮಟ್ಟವನ್ನು ಸುಧಾರಿಸುವಲ್ಲಿ ಹಾಗು ಸರ್ಕಾರದ ಸವಲತ್ತುಗಳನ್ನು ಸಮಾಜದ ಜನರಿಗೆ ಒದಗಿಸುವಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಇತ್ತೀಚಿನ ದಿನಗಳಲ್ಲಿ ಕ್ಯಾನ್ಸರ್ ಎನ್ನುವ ಮಾಹಾ ರೋಗವು ಜನರಲ್ಲಿ ಕಂಡು ಬರುತ್ತಿದೆ. ಅನೇಕ ಜನರು ಕ್ಯಾನ್ಸರ್ ರೋಗವನ್ನು ತಿಳಿಯಲಾರದೇ ತುತ್ತಾಗುತ್ತಿದ್ದಾರೆ. ಅದಕ್ಕಾಗಿಯೇ ಈ ಶಿಬಿರವನ್ನು ಆಯೋಜಿಸಲಾಗಿದೆ. ಸಾರ್ವಜನಿರು ಶಿಬಿರದ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ಸಂಸ್ಥೆಯ ಸಂಯೋಜಕ ಯೋಹಾನ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಇಂಡಿಯನ್ನ ಕ್ಯಾನ್ಸರ್ ಸುಸೈಟಿಯ ಜಿಲ್ಲಾ ಸಂಯೋಜಕ ಗುರುರಾಜ ಕುಲಕರ್ಣಿಯವರು ಮಾತನಾಡಿ, ಕ್ಯಾನ್ಸರ್ ಲಕ್ಷಣಗಳ ಬಗ್ಗೆ ಮತ್ತು ಅದರಿಂದಾಗುವ ದುರುಪಯೋಗಗಳ ಬಗ್ಗೆ ತಿಳುವಳಿಕೆ ನೀಡಿದರು. ಇದೇ ವೇಳೆ ಗ್ರಾಮದ ಸುಮಾರು 60 ಜನರು ಕ್ಯಾನ್ಸರ್ ತಪಾಸಣೆ ಮತ್ತು 24 ಜನರು ನೇತ್ರ ತಪಾಸಣೆ ಮಾಡಿಸಿಕೊಂಡರು. ಮಹಿಳಾ ಸಬಲೀಕರಣ ಕಾರ್ಯಕರ್ತ ಪ್ರಭು ವಂದಿಸಿದರು.

## ನೈಋತ್ಯ ಮುಂಗಾರು: ಜಿಲ್ಲೆಯಲ್ಲಿ 246 ಮಿ.ಮೀ.ಮಳೆ

ಬೀದರ.ಆ.13: ಇತ್ತೀಚಿನ ಕೆಲವು ದಿನಗಳಿಂದ ಸುರಿಯುತ್ತಿರುವ ಮಳೆಯಿಂದ ಜಿಲ್ಲೆಯಲ್ಲಿ 02 ಮಾನವ ಹಾನಿ, 08 ದೊಡ್ಡ ಜಾನುವಾರು ಪ್ರಾಣಿ ಜೀವ ಹಾನಿ, 83 ಮನೆ ಹಾನಿಯಾಗಿರುವುದರಿಂದ ಜಿಲ್ಲಾಡಳಿತದಿಂದ ಪರಿಹಾರ ವಿತರಿಸಲಾಗಿದೆ. ಹಾಗೂ ಜಿಲ್ಲೆಯಲ್ಲಿ 210.00 ಹೆಕ್ಟೇರ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು ಇದಕ್ಕೆ ಜಂಟಿ ಸಮೀಕ್ಷೆ ಪರಿಹಾರ ಕಾರ್ಯ ಪ್ರಗತಿಯಲ್ಲಿರುತ್ತದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2024-25ನೇ ಸಾಲಿನ ನೈಋತ್ಯ ಮುಂಗಾರು ಹಂಗಾಮಿನಲ್ಲಿ ವಾಡಿಕೆ 373 ಮೀ.ಮೀ. ಮಳೆಯಾಗಬೇಕಾಗಿದ್ದು, 246 ಮೀ.ಮೀ. ಮಳೆಯಾಗಿರುತ್ತದೆ. ಇದರಿಂದ ಜಿಲ್ಲೆಯಲ್ಲಿ ಶೇ. 35% ಕಡಿಮೆ ಮಳೆಯಾಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

## ಯುವಕರು ರಾಷ್ಟ್ರದ ಶಕ್ತಿ:ಚನ್ನಬಸವ ಫಾಳೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ :ಅ.13: ಪಟ್ಟಣದ ಡಾ॥ ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ ಶ್ರೀ ಗುರಪ್ಪಾ ಟೊಣ್ಣೆ ಪ್ರಾಥಮಿಕ ಶಾಲೆ ಹಾಗೂ ಗುರುಕಾರುಣ್ಯ ಪಬ್ಲಿಕ್ ಸ್ಕೂಲ್‌ನಲ್ಲಿ ಮಾದಕ ವಸ್ತು ವ್ಯಸನ ಮುಕ್ತಗೊಳಿಸಲು ಮಕ್ಕಳಿಂದ ಪ್ರತಿಜ್ಞೆ ಮಾಡಿಸುವ ಕಾರ್ಯಕ್ರಮ ಉದ್ಘಾಟನೆ ಮಾಡಿ ಶಾಲೆಯ ಆಡಳಿತಾಧಿಕಾರಿಗಳಾದ ಚನ್ನಬಸವ ಫಾಳೆ ಮಾತನಾಡಿದರು.

ಮಕ್ಕಳನ್ನು ಮತ್ತು ಎಲ್ಲಾ ಶಿಬ್ಬಂಧಿ ವರ್ಗದವರನ್ನು ಉದೇಶಿಸಿ ಯುವಕರು ರಾಷ್ಟ್ರದ ಶಕ್ತಿಯಾಗಿರುತ್ತಾರೆ ಮತ್ತು ಯುವ ಶಕ್ತಿಯು ಸಮಾಜ ಮತ್ತು ದೇಶದ ಅಭಿವೃಧಿಯಲ್ಲಿ ಪ್ರಮುಖ ಕೊಡುಗೆಯನ್ನು ನಿಡುವಲ್ಲಿ ಮುಖ್ಯ ಪಾತ್ರವನ್ನು ವಹಿಸುತ್ತಿದೆ ಅದರಿಂದ ಅತಿಹೆಚ್ಚು ಯುವಕರು ನಶಾಮುಕ್ತ ಭಾರತ ಅಭಿಯಾನದಲ್ಲಿ ಭಾಗವಹಿಸಿ ಕೊಡುಗೆ ನಿಡುವುದು ಬಹಳ ಮುಖ್ಯ ದೇಶದ ಸವಾಲನ್ನು ಸ್ವಿಕರಿಸಿ.

ಇಂದು ನಾವು ನಶಾಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ಒಂದಾಗುತಿವೆ ಎಂಬ ಪ್ರತಿಜ್ಞೆಯನ್ನು ಹೇಳಿದರು. ಈ ಸಂದರ್ಭದಲ್ಲಿ ಶಾಲಾ ಮಕ್ಕಳು ಮತ್ತು ಸಿಬ್ಬಂದಿಯರು ಇದ್ದರು.

ಪಿಎಂಎಫ್‌ಎಂಇ ಯೋಜನೆಯ ಜಿಲ್ಲಾ ಮಟ್ಟದ ಅರಿವು ಕಾರ್ಯಾಗಾರ

## 1 ಲಕ್ಷ ಬಂಡವಾಳ ಹೂಡಿದರೆ 10 ಲಕ್ಷದ ಉದ್ಯಮ ಪ್ರಾರಂಭಿಸಲು ಅವಕಾಶ: ಜಿಪಂ ಸಿಇಓ ಮಹಮ್ಮದ್ ಹ್ಯಾರೀಸ್ ಸುಮೈರ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.13–ಪಿಎಂಎಫ್‌ಎಂಇ ಯೋಜನೆಯಡಿ ಕಿರು ಆಹಾರ ಸಂಸ್ಕಾರಣಾಉದ್ಯಮಪ್ರಾರಂಭಿಸಲು ಇಚ್ಛಿಸಿದಲ್ಲಿ ಫಲಾನುಭವಿಯು ಕೇವಲ 1 ಲಕ್ಷ ಬಂಡವಾಳ ಹೂಡಿದರೆ10ಲಕ್ಷಬಂಡವಾಳವುಳ್ಳ ಉದ್ಯಮ ಆರಂಭಿಸಬಹುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಹೇಳಿದರು.




ಕೃಷಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾಪಂಚಾಯತ್ ಮತ್ತು ಕೆಪೆಕ್ ಸಂಸ್ಥೆಯ ಸಹಯೋಗದೊಂದಿಗೆ ನಗರದ ಜಿಪಂ ನಜೀರ್ ಸಾಬ್ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ನಿಯುಮಬದ್ಧಗೊಳಿಸುವಿಕೆ ಯೋಜನೆಯ ಜಿಲ್ಲಾ ಮಟ್ಟದ ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕಿರು ಆಹಾರ ಸಂಸ್ಕರಣಾ ಉದ್ಯಮ ಪ್ರಾರಂಭಿಸಲು 9 ಲಕ್ಷಗಳಷ್ಟು ಬ್ಯಾಂಕಿನ ಸಾಲ ದೊರೆಯುತ್ತದೆ. ಇದರಲ್ಲಿ 5 ಲಕ್ಷ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಸಹಾಯಧನ ದೊರೆಯುತ್ತದೆ. ಕೇವಲ 1 ಲಕ್ಷ ಹೂಡಿ 10 ಲಕ್ಷ ಬಂಡವಾಳದ ಉದ್ಯಮ ಪ್ರಾರಂಭಿಸಲು ಇದು ಸುವರ್ಣ ಅವಕಾಶವಾಗಿದ್ದು,ದೊಡ್ಡ ಕನಸಿಗೆ ಚಿಕ್ಕಹೆಜ್ಜೆಯಾಗಿ ಅಡಿಗಲ್ಲು ಹಾಕಲು ಸಾಧ್ಯವಾಗುವುದರಿಂದ ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಮಾತನಾಡಿ, ಪಿಎಂಎಫ್‌ಎಂಇ ಯೋಜನೆಯಡಿ ಆಹಾರ ಸಂಸ್ಕರಣೆಗೆ ಒತ್ತು ಕೊಡುವುದರಿಂದ ಮಹಿಳೆಯರು ತಮ್ಮ ಮನೆಯಿಂದಲೇ ಆಹಾರ ಸಂಸ್ಕರಣಾ ಪದಾರ್ಥಗಳಾದ ಜೋಳದ ರೊಟ್ಟಿ, ಚಕ್ಕುಲಿ, ಕಾರ, ಹಪ್ಪಳ, ಸಂಡಿಗೆ ಮತ್ತು ಇತರ ಪದಾರ್ಥಗಳನ್ನು ಆಹಾರ ಸಂಸ್ಕರಣೆ ಮಾಡುವ ಮೂಲಕ ಆರ್ಥಿಕವಾಗಿ ಸಬಲರಾಗಬಹುದು ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಮಾತನಾಡಿ,ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಂಡಲ್ಲಿ ತಮ್ಮ ಆದಾಯ ದ್ವಿಗುಣಗೊಳಿಸಿಕೊಳ್ಳಬಹುದು. ಈ ಯೋಜನೆಯು ಕೇವಲ ಈ ಒಂದು ವರ್ಷ ಮಾತ್ರ ಅನುಷ್ಠಾನದಲ್ಲಿರುವುದರಿಂದ ರೈತರು ಮತ್ತು ರೈತ ಮಹಿಳೆಯರು ಹಾಗೂ ನಿರುದ್ಯೋಗಿ ಯುವಕ-ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಮುಂದೆ ಬಂದು ಯೋಜನೆಯ ಲಾಭ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಲೀಡ್ ಬ್ಯಾಂಕ್‌ನ ವ್ಯವಸ್ಥಾಪಕ ಗಿರೀಶ್ ಕುಲಕರ್ಣಿ ಅವರು, ಫಲಾನುಭವಿಗಳು ಸಾಲ ಪಡೆಯಲು ಬ್ಯಾಂಕಿಗೆ ಸಲ್ಲಿಸಬೇಕಾದ ದಾಖಲೆಗಳ ಬಗ್ಗೆ ಮಾಹಿತಿ ನೀಡಿದರು.

ಕೆಪೆಕ್ ಸಂಸ್ಥೆಯ ಸಹಾಯಕ ನಿರ್ದೇಶಕ ಚಂದ್ರು ಕುಮಾರ್, ಯೋಜನೆಯ ಪ್ರಗತಿ ಮತ್ತು ಅನುಷ್ಠಾನದ ಬಗ್ಗೆ ಮಾಹಿತಿ ನೀಡಿದರು. ಕೆಪೆಕ್ ಸಂಸ್ಥೆಯ ಪ್ರಕಾಶ್ ನಾಯಕ ಮತ್ತು ವಿಘ್ನೇಶ್ ಯೋಜನೆಯ ರೂಪರೇಷೆ ಮತ್ತು ಅರ್ಜಿ ಸಲ್ಲಿಕೆಯ ಅರ್ಹತೆ ಹಾಗೂ ವಿಧಾನ ತಿಳಿಸಿಕೊಟ್ಟರು.

ಕಾರ್ಯಾಗಾರದಲ್ಲಿ ಉಪ ಕೃಷಿ ನಿರ್ದೇಶಕ ಮಂಜುನಾಥ್,ವಿವಿಧ ತಾಲ್ಲೂಕುಗಳ ಸಹಾಯಕ ಕೃಷಿ ನಿರ್ದೇಶಕರಾದ ಮಹ್ಮದ್ ರಫೀ, ಗರ್ಜಪ್ಪ, ಎಸ್.ಬಿ.ಪಾಟೀಲ್, ನಾಜನೀನ್ ನಾದಪ್ ಸೇರಿದಂತೆ ಕೃಷಿಸಂಬಂಧಿತ ಎಲ್ಲಾ ಇಲಾಖೆಗಳ ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಹಾಗೂ ಎನ್‌ಅರ್‌ಎಲ್‌ಎಂ ಕೋಷದ ಮುಖ್ಯಸ್ಥರು ಹಾಗೂ ಸಿಬ್ಬಂದಿಗಳು, ಸಾರ್ವಜನಿಕರು, ಇನ್ನಿತರರು ಹಾಜರಿದ್ದರು.

## ತನಿಖೆಗೇ ಆಗ್ರಹಿಸಿ ಕಾನೂನು ಕ್ರಮಕ್ಕೆ ಒತ್ತಾಯಿಸಿ ಮನವಿ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಪವಿತ್ರ ಧಾರ್ಮಿಕ ಕ್ಷೇತ್ರಗಳಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳವು ಒಂದು.ಸರಿ ಸುಮಾರು 800 ವರ್ಷಗಳ ಇತಿಹಾಸವನ್ನು ಹೊಂದಿರುವ ಈ ಕ್ಷೇತ್ರ "ದಕ್ಷಿಣ ಕಾಶಿ"ಎಂದೇ ನಾಮಾಂಕಿತವಾಗಿದೆ. ರಾಜ್ಯದಲ್ಲಷ್ಟೇ ಅಲ್ಲದೆ ತಮಳುನಾಡು, ಕೇರಳ, ಅಂಧ್ರಪ್ರದೇಶ ಹೀಗೆ ದೇಶದ ಬೇಡ, ಬೇರೆ ಕಡೆಗಳಿಂದ ನಿತ್ಯ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆಯಲು ನಿಮಾರು 30 ಸಾವಿರದಿಂದ 1 ಲಕ್ಷ ಮಂದಿ ಭಕ್ತರು ಇಲ್ಲಿಗೆ ಆಗಮಿಸುತ್ತಾರೆ.




ಕಳೆದ ಕೆಲವು ವರ್ಷಗಳಿಂದ ಗಿರೀಶ್ ಮಟ್ಟಣ್ಣವರ್, ಮಹೇಶ್ ಶೆಟ್ಟಿ ತಿಮರೋಡಿ, ಸಮೀರ್ ಎಂ.ಡಿ. ಸಂತೋಷ್ ಶೆಟ್ಟಿ, ಜಯಂತ ಟಿ ಅಜಯ್ ಅಂಜಿನ್ ಮತ್ತು ಅವನ ಸಹಚರರು ಸೇರಿ-ಕೊಂಡು ಶ್ರೀ ಮಂಜುನಾಥ ಸ್ವಾಮಿ ದೇವಾಲಯ ಹಾಗೂ ವೀರೇಂದ್ರ ಹೆಗ್ಗಡೆ ಮತ್ತು ಅವರ ಕುಟುಂಬದವರು ಸೇರಿಕೊಂಡು ವೀಡಿಯೋಗಳ ತುಣುಕುಗಳನ್ನು ತಯಾರಿಸಿ ಅದನ್ನು ಬೇರೆಯವರ ಹೆಸರಿಗೆ ಕಳಂಕ ತರುವಂತಹ ಡುತ್ತಿದ್ದಾರೆ. ಶ್ರೀ ಕ್ಷೇತ್ರ ಧರ್ಮಸ್ಥಳ ದೇವಾಲಯವನ್ನ ಗುರಿಯಾಗಿಸಿಕೊಂಡು ಯಾವುದೇ ಧಾಖಲೆಗಳಿಲ್ಲದೆ ನಿರಂತರವಾಗಿ ಸುಳ್ಳು ಸುದ್ದಿಗಳನ್ನು ಪ್ರಚಾರ ಮಾಡುತ್ತಿರುವುದರಿಂದ ಶ್ರೀ ಕ್ಷೇತ್ರದ ಕೋಟ್ಯಾಂತರ ಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗಿದೆ ರಿಂದಾಗಿ ಈಗಾಗಲೇ ಸಮಾಜದಲ್ಲಿ ಎರಡು ಬಣಗಳು ನಿರ್ಮಾಣವಾಗುವ ಲಕ್ಷಣಗಳು ಗೋಚರಿಸುತ್ತಿವೆ. ಇದು ಮುಂದಿನ ದಿನಗಳಲ್ಲಿ ಈ ಪ್ರಕ್ರಿಯೆಯು ಸಮಾಜದಲ್ಲಿ ಉದ್ವಿಗ್ನತೆ ಮತ್ತು ಶಾಂತಿಭಂಗಕ್ಕೆ ಕಾರಣವಾಗಬಹುದಾಗಿದೆ.

ಅನಾಮಿಕ ವ್ಯಕ್ತಿಯೋರ್ವ ನೀಡಿದ ದೂರಿನ ಆಧಾರದಲ್ಲಿ ರಾಜ್ಯ ಸರಕಾರವು 'ವಿಶೇಷ ತನಿಖಾ ತಂಡವನ್ನು ರಚಿಸಿ ತನಿಖೆ ನಡೆಸುತ್ತಿರುವುದನ್ನು ಶ್ರೀ ಕ್ಷೇತ್ರದ ಭಕ್ತವೃಂದದವರಾದ ನಾವೆಲ್ಲರೂ ಗೌರವ ದಿಂದ ಸ್ವಾಗತಿಸುತ್ತೇವೆ. ಆದರೆ ಇದೀಗ ಅನಾಮಿಕ ದೂರುದಾರನನ್ನು ಬಳಸಿಕೊಂಡು ಶ್ರೀ ಕ್ಷೇತ್ರದ ಬಗ್ಗೆ ದಿನಕ್ಕೊಂದು ರೀತಿಯಲ್ಲಿ ಯೂಟ್ಯೂಬ್, ಫೇಸ್ಬುಕ್, ಮುಂತಾದ ಸಾಮಾಜಿಕ ಜಾಲತಾಣದ ಮೂಲಕ ಸುಳ್ಳು ಮಾಹಿತಿಗಳನ್ನು ಭಿತ್ತರಿಸಿ ಭಕ್ತರಲ್ಲಿ ಗೊಂದಲವನ್ನು ನಿರ್ಮಿಸುತ್ತಿದ್ದಾರೆ.

ಕು ಸೌಜನ್ಯಾಳಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳದ ಮೇಲೆ ದಾಳಿಗೆ ಹೊರಟ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ ಮಟ್ಟಣ್ಣವರ್, ಸಮೀರ್ ಎಂ.ಡಿ., ಸಂತೋಷ್ ಶೆಟ್ಟಿ ಜಯಂತ ಟಿ, ಅಜಯ್ ಅಂಚನ್ ಇವರುಗಳು ಷಡ್ಯಂತ್ರ ಹಾಗೂ ಅಪಪ್ರಚಾರ ಮಾಡುತ್ತಿರುವುದರ ಹಿನ್ನೆಲೆ ಏನು? ಸುಳ್ಳು ಆರೋಪ ಮಾಡಲು ಪ್ರಚೋರಿಸುತ್ತಿರುವವರು ಯಾರು? ಈ ತಂಡಕ್ಕೆ ಹಣಕಾಸಿನ ನೆರವು ಎಲ್ಲಿಂದ ಬರುತ್ತಿದೆ? ಎಂಬುದನ್ನು ತಿಳಿಯಲು ಸೂಕ್ತ ತನಿಖೆ ನಡೆಸಬೇಕಾಗಿದೆ. ತಮ್ಮ ಮೊಬೈಲ್ನಲ್ಲಿ ಸಾಕ್ಷಿಗಳಿವೆ ಎಂದು ವೇದಿಕೆಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ಘಂಟಾಘೋಷವಾಗಿ ಭಾಷಣ ಮಾಡುತ್ತಿರುವ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣವರ್, ಸಮೀರ್ ಎಂ.ಡಿ.. ಜಯಂತ್ ಟಿ. ಸಂತೋಷ್ ಶೆಟ್ಟಿ, ಅಜಯ್ ಅಂಚನ್ ಇವರುಗಳನ್ನು ವಿಚಾರಣೆಗೆ ಒಳಪಡಿಸಿ ಸತ್ಯಾಸತ್ಯತೆಯನ್ನು ಬಯಲಿಗೆ ಎಳೆಯಬೇಕಾಗಿದೆ. ಈ ನಿಟ್ಟಿನಲ್ಲಿ ಈಗಿರುವ ಎಸ್‌ಐಟಿ ತಂಡ ಅಥವಾ ಇನ್ನೊಂದು ತನಿಖಾ ತಂಡವನ್ನು ರಚಿಸಿ ತಕ್ಷಣ ತನಿಖೆಯನ್ನು ಕೈಗೊಳ್ಳಬೇಕೆಂದು ಆಗ್ರಹಿಸುತ್ತೇವೆ.

ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಗಳನ್ನು ಹರಿಬಿಡುತ್ತಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಮುಂದಿನ ದಿನಗಳಲ್ಲಿ ಈ ರೀತಿಯ ಸುಳ್ಳು ಸುದ್ದಿಗಳು ಸಮೂಹ ಮಾಧ್ಯಮಗಳಲ್ಲಿ ಪ್ರಸಾರವಾಗದಂತೆ ಕ್ರಮ ಕೈಗೊಳ್ಳಬೇಕೆಂದು ಶ್ರೀ ಕ್ಷೇತ್ರ ಧರ್ಮಸ್ಥಳ ಭಕ್ತವೃಂದದವರು ನಗರದ ಈಶ್ವರ ದೇವಸ್ಥಾನ (ಪಾರ್ಕ್) ದಿಂದ ಪ್ರತಿಭಟನೆ ಮೂಲಕ

ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.ಸಿ ವಿ ಚಂದ್ರಶೇಖರ,ರಾಘವೇಂದ್ರ ಪಾನಘಂಟಿ,ಅಕ್ಬರ್ ಪಾಷಾ, ಡಾ:ರಾಧಾ ಕುಲಕರ್ಣಿ,ಅವರು ಧರ್ಮಸ್ಥಳದ ಧಾರ್ಮಿಕ ಹಾಗೂ ಕಾರ್ಯಗಳು ಉದ್ದೇಶಿಸಿ ಮಾತನಾಡಿದ್ದರು.

## ನಶಾ ಮುಕ್ತ ಭಾರತಕ್ಕೆ ಎಲ್ಲರೂ ಸಹಕರಿಸಿ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:13–ನಶಾ ಮುಕ್ತ ಭಾರತ ನಿರ್ಮಾಣ ಎಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡಿದಾಗ ಮಾತ್ರ ಸಾಧ್ಯವಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಮರಿಯಪ್ಪ ಅವರು ಹೇಳಿದರು.

ನಶಾ ಮುಕ್ತ ಭಾರತ ಅಭಿಯಾನ ಯೋಜನೆಯು 5 ವರ್ಷ ಪೂರ್ಣಗೊಳಿಸಿದ ಹಿನ್ನಲೆಯಲ್ಲಿ ಜಿಲ್ಲಾಪಂಚಾಯತ್ ಸಭಾಂಗಣದಲ್ಲಿ ಇಂದು ಬುಧವಾರ ಹಮ್ಮಿಕೊಂಡಿದ್ದ ನಶಾ ಮುಕ್ತ ಭಾರತ ಅಭಿಯಾನ ಹಾಗೂ ಸಾಮೂಹಿಕ ಪ್ರತಿಜ್ಞೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಯುವಜನತೆ ಇದಕ್ಕೆ ಅತಿಯಾಗಿ ಅಂಟಿಕೊಂಡು ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಇದನ್ನು ಗಂಭೀರವಾಗಿ ಪರಿಗಣಿಸಿ ಅನೇಕ ಕಾರ್ಯಕ್ರಮ ಮತ್ತು ಯೋಜನೆಗಳನ್ನು ಹಮ್ಮಿಕೊಳ್ಳುವ ಮೂಲಕ ಇದನ್ನು ತಡೆಯಲು ಸಾಕಷ್ಟು ಪ್ರಯತ್ನ ಮಾಡುತ್ತಿದೆ.ಈ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ನ್ಯಾಯಧೀಶರು ಹೇಳಿದರು.

ಇದೇ ಸಂದರ್ಭದಲ್ಲಿ ನಶಾಮುಕ್ತ ಕುರಿತು ಪ್ರತಿಜ್ಞಾ ವಿಧಿ ಬೋಧಿಸಲಾಯಿತು.ಜಿಲ್ಲಾ ಪಂಚಾಯತ್ ಆವರಣದಲ್ಲಿ ಸಸಿ ನೆಡುವ ಮೂಲಕ ಅರ್ಥಪೂರ್ಣವಾಗಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಧರಣೇಶ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ತಿಪ್ಪಣ್ಣ ಶಿರಸಗಿ, ಜಿಲ್ಲಾ ಆಯುಷ್ ಅಧಿಕಾರಿ ವಂದನಾ ಗಾಳಿ,ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಮಳೆಯಲ್ಲೇ ಪ್ರತಿಭಟನೆ ನಡೆಸಿದ ಆಶಾ ಕಾರ್ಯಕರ್ತೆಯರು: ಬೇಡಿಕೆಗಳ ಈಡೇರಿಕೆಗೆ ಸರ್ಕಾರದ ಮೇಲೆ ಒತ್ತಡ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ರಾಜ್ಯ ಸರ್ಕಾರದ ವಿರುದ್ಧ ಆಶಾ ಕಾರ್ಯಕರ್ತೆಯರು ನಡೆಸುತ್ತಿರುವ ಅಹೋರಾತ್ರಿ ಧರಣಿ ಯಾದಗಿರಿಯಲ್ಲಿ ಮುಂದುವರೆದಿದ್ದು,ಸುರಿಯುವ ಮಳೆಯನ್ನೂ ಲೆಕ್ಕಿಸದೆ ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿದ್ದಾರೆ. ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕತೆ-ರ್ಯರ ಸಂಘದ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ಈ ಹಿಂದೆ ನೀಡಿದ್ದ ಭರವಸೆಗಳನ್ನು ಜಾರಿಗೊಳಿಸುವಂತೆ ಒತ್ತಾಯಿಸಿದರು. ಪ್ರಮುಖವಾಗಿ, 2025ರ ಜನವರಿ 7 ರಿಂದ 10ರವರೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬೃಹತ್ ಪ್ರತಿಭಟನೆಯ ಸಂದರ್ಭದಲ್ಲಿ, ಮುಖ್ಯಮಂತ್ರಿಗಳು ಮತ್ತು ಅಂದಿನ ಆರೋಗ್ಯ ಸಚಿವರು ನೀಡಿದ್ದ ಭರವಸೆಗಳು ಇನ್ನೂ ಈಡೇರಿಲ್ಲ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಆ ಹೋರಾಟದಲ್ಲಿ ರಾಜ್ಯದ 40,000ಕ್ಕೂ ಹೆಚ್ಚು ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು. ಅಂದಿನ ಭರವಸೆಗಳು ಜಾರಿಯಾಗದ ಹಿನ್ನೆಲೆಯಲ್ಲಿ ಇದೀಗ ಮತ್ತೆ ರಾಜ್ಯಾದ್ಯಂತ ಪ್ರತಿಭಟನೆಗೆ ಇಳಿದಿದ್ದಾರೆ.

**ಆಶಾ ಕಾರ್ಯಕರ್ತೆಯರ ಪ್ರಮುಖ ಬೇಡಿಕೆಗಳು:**

ಕನಿಷ್ಠ ಗೌರವಧನ:2025ರ ಏಪ್ರಿಲ್ 1ರಿಂದ ಅನ್ವಯವಾಗುವಂತೆ,ಕೇಂದ್ರ ಸರ್ಕಾರದ ಪ್ರೋತ್ಸಾಹಧನವನ್ನೂ ಒಳಗೊಂಡಂತೆ ಮಾಸಿಕ ಕನಿಷ್ಠ ₹10,000 ಗೌರವಧನವನ್ನು ಖಚಿತಪಡಿಸಬೇಕು. ಈ ಬಗ್ಗೆ ಮುಖ್ಯಮಂತ್ರಿಗಳು ಭರವಸೆ ನೀಡಿ ಹಲವು ತಿಂಗಳು ಕಳೆದರೂ ಅಧಿಕೃತ ಆದೇಶ ಹೊರಬಿದ್ದಿಲ್ಲ ಎಂದು ಸಂಘಟನೆ ಆರೋಪಿಸಿದೆ.

ಗೌರವಧನ ಹೆಚ್ಚಳದಲ್ಲಿ ಸಮಾನತೆ: ರಾಜ್ಯ ಬಜೆಟ್‌ನಲ್ಲಿ ಅಂಗನವಾಡಿ ಮತ್ತು ಬಿಸಿಯೂಟ ಕಾರ್ಯಕರ್ತೆಯರಿಗೆ ₹1000 ಪ್ರೋತ್ಸಾಹಧನವನ್ನು ಹೆಚ್ಚಿಸಿದ ಮಾದರಿಯಲ್ಲಿಯೇ, ರಾಜ್ಯದ 42,000 ಆಶಾ ಕಾರ್ಯಕತೆ-ರ್ಯರಿಗೂ ಗೌರವಧನವನ್ನು ಹೆಚ್ಚಿಸಬೇಕು.ಸೇವಾ ಸ್ಥಗಿತ ನಿರ್ಧಾರ ಹಿಂಪಡೆಯುವುದು: ಆರೋಗ್ಯ ಸಚಿವರು ತಕ್ಷಣವೇ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಬೇಕು.ಆಶಾ ಸುಗಮಕಾರರು (facilitators) ಹಾಗೂ 60 ವರ್ಷ ಪೂರೈಸಿದ ಅನುಭವಿ ಆಶಾ ಕಾರ್ಯಕರ್ತೆಯರ ಸೇವೆಯನ್ನು ಸ್ಥಗಿತಗೊಳಿಸುವ ನಿರ್ಧಾರವನ್ನು ಸರ್ಕಾರ ಕೂಡಲೇ ಹಿಂಪಡೆಯಬೇಕು.

ತಮ್ಮ ಬೇಡಿಕೆಗಳು ಈಡೇರುವವರೆಗೂ ಹೋರಾಟವನ್ನು ಹಿಂಪಡೆಯುವುದಿಲ್ಲ ಎಂದು ಆಶಾ ಕಾರ್ಯಕತೆ-ರ್ಯರು ಪಟ್ಟು ಹಿಡಿದಿದ್ದಾರೆ. ಯಾದಗಿರಿಯಲ್ಲಿ ಮಳೆಯಲ್ಲಿಯೇ ಕುಳಿತು ಪ್ರತಿಭಟನೆ ನಡೆಸುತ್ತಿರುವ ದೃಶ್ಯಗಳು, ಸರ್ಕಾರದ ಭರವಸೆ ಮತ್ತು ವಾಸ್ತವದ ನಡುವಿನ ಅಂತರವನ್ನು ಎತ್ತಿ ತೋರಿಸುತ್ತಿವೆ.

## ಜಾತ್ರೆಗಳಿಂದ ಸಮಾಜದಲ್ಲಿ ಸಾಮರಸ್ಯ ಮೂಡುತ್ತದೆ : ಖಾಸಾಶ್ರೀ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ವಿಶ್ವದಲ್ಲಿಯೇ ನಮ್ಮ ಭಾರತ ದೇಶ ಆಧ್ಯಾತ್ಮಿಕ ಮೇರುಸ್ಥಾನದಲ್ಲಿದೆ, ಇಲ್ಲಿ ಅನಾಧಿಕಾಲದಿಂದ ಆಚರಿಸಿಕೊಂಡು ಬರುತ್ತಿರುವ ಜಾತ್ರೆಗಳಿಂದ ಸಮಾಜದಲ್ಲಿ ಸಾಮರಸ್ಯ ಮೂಡಿ ಪ್ರಗತಿಗೆ ಸಂದೇಶ ನೀಡಿವೆ ಎಂದು ಗುರುಮಿಠಕಲ್ ಖಾಸಾಮಠದ ಪೀಠಾಧಿಪತಿ ಶಾಂತವೀರ ಮಹಾಸ್ವಾಮೀಜಿ ನುಡಿದರು.

ಸೋಮವಾರ ಸಂಜೆ 6 ಗಂಟೆಗೆ ನಗರದ ವಾಲ್ಮೀಕಿ ನಗರದ ಹಿರೇಅಗಸಿ ಬೆಟ್ಟದ ಮೇಲಿರುವ ದಂಡಗುಂಡ ಬಸವಣ್ಣ ದೇವಸ್ಥಾನದ ಜಾತ್ರೆ ರಥೋತ್ಸವ ನಂತರ ನಡೆದ ಧರ್ಮಸಭೆಯನ್ನು ಉದ್ಘಾಟಿಸಿ ಆಶೀರ್ವಚನ ನೀಡಿದ ಅವರು ಇಲ್ಲಿ ಹಿಂದಿನಿಂದಲೂ ಋಷಿ–ಮುನಿಗಳು, ಶರಣರು, ಸಂತರು, ತಮ್ಮ ಆಧ್ಯಾತ್ಮಿಕ ಶಕ್ತಿಯಿಂದ ಆಯಾ ಕಾಲಕ್ಕೆ ಮನುಕುಲವನ್ನು ಉದ್ಧರಿಸಿದ್ದಾರೆ, ಪರಿಣಾಮ ನಿರಂತರ ಧಾರ್ಮಿಕ ಚಟುವಟಿಕೆಗಳು ನಡೆದುಕೊಂಡು ಬಂದಿವೆ ಎಂದು ಹೇಳಿದರು.

ಇಂದು ಪ್ರತಿಯೊಬ್ಬರು ಬಸವಾದಿ ಶರಣರ ಚಿಂತನೆಗಳನ್ನು ಮೈಗೂಡಿಸಿಕೊಂಡು ಧರ್ಮದ ಹಾದಿಯಲ್ಲಿ ಕಾಯಕ ತತ್ವವನ್ನು ಮೈಗೂಡಿಸಿಕೊಂಡು ಪರೋಪಕಾರಿಯಾಗಿ ಬದುಕು ಸಾಧಿಸಿದಾಗ ಮಾತ್ರ ಸದೃಢ ಸಮಾಜ ನಿರ್ಮಾಣವಾಗಿ ನಿಮ್ಮೆಲ್ಲರ ಬದುಕಿಗೆ ಸಾರ್ಥಕ ಭಾವನೆ, ಮೌಲ್ಯ ಎಲ್ಲರಿಂದ ಸಿಗುತ್ತದೆ ಎಂದು ತಿಳಿಸಿದರು.

ಅಬ್ಬೆತುಮಕೂರಿನ ಕಿರಿಯ ಶ್ರೀಗಳಾದ ಶಿವಶೇಖರ ಮಹಾಸ್ವಾಮೀಜಿ ಮಾತನಾಡಿ ಈ ಭರತ ಭೂಮಿಯಲ್ಲಿ ಹಿಂದು ಧರ್ಮಕ್ಕೆ ಶ್ರಾವಣ ಮಾಸ ಪವಿತ್ರವಾಗಿದೆ ನಾವೆಲ್ಲರೂ ಈ ದಿನಗಳಲ್ಲಿ ಕೈಗೊಳ್ಳುವ ಧಾರ್ಮಿಕ ಚಟುವಟಿಕೆಗಳಿಂದ ಶಾಂತಿ, ನೆಮ್ಮದಿ ದೊರಕುವ ಜೊತೆಗೆ ದೇಶದ ಆಧ್ಯಾತ್ಮಿಕ, ಧಾರ್ಮಿಕ ಸಂಸ್ಕೃತಿ ಉಳಿಸಿ ಬೆಳೆಸಿದಂತಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.

ಪಸಕ್ತ ದಿನಗಳಲ್ಲಿ ಎಲ್ಲರೂ ಯಾವುದಾದರೊಂದು ವಿಷಯದಲ್ಲಿ ಸದಾ ಒತ್ತಡದಲ್ಲಿ ಜೀವನ ಸಾಗಿಸುತ್ತಿದ್ದಾರೆ. ಸ್ವಲ್ಪ ಸಮಯ ಅವರು ಧಾರ್ಮಿಕ ಕೆಲಸಗಳಿಗೆ ಮೀಸಲಿಟ್ಟರೆ ಖಂಡಿತ ಅವರ ಬದುಕಿನಲ್ಲಿ ಪರಿವರ್ತನೆ ಕಾಣುತ್ತಾರೆ ಎಂದು ನುಡಿದರು.

ಮದರಕಲ್‌ನ ಅಂಭಾಮಠದ ಸಂತ ನಾಮದೇವಗೌಡ ಶರಣರು ಮಾತನಾಡಿ ಆಧ್ಯಾತ್ಮಿಕ ಚರಿತ್ರೆಯಲ್ಲಿ ಬಸವಣ್ಣನಿಗೆ ವಿಶೇಷವಾದ ಸ್ಥಾನವಿದೆ ಅದರಂತೆ 12ನೇ ಶತಮಾನದಲ್ಲಿ ಬಸವಣ್ಣನವರು ಅನುಭವ ಮಂಟಪದ ಮೂಲಕ ಸಮಾಜದಲ್ಲಿ ಸಮಾನತೆ, ಜನರಲ್ಲಿ ಜಾಗೃತಿ ಮೂಡಿಸಿ ಮೂಢನಂಬಿಕೆಗಳನ್ನು ದೂರ ಮಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಶ್ರಮಿಸಿದರು ಎಂದು ತಿಳಿಸಿದರು.

ಕಾರ್ಯಕ್ರಮದ ನೇತೃತ್ವವನ್ನು ದೇವಸ್ಥಾನದ ಮುಖ್ಯ ಅರ್ಚಕರಾದ ಸಿದ್ಧಯ್ಯಸ್ವಾಮಿ ಹಿರೇಮಠ ವಹಿಸಿದ್ದರು. ವೇದಿಕೆ ಮೇಲೆ ಬಿಜೆಪಿ ಯುವ ಮುಖಂಡರಾದ ಮಹೇಶರೆಡ್ಡಿ ಮುದ್ನಾಳ, ಬಿಜೆಪಿ ಜಿಲ್ಲಾ ಯುವಘಟಕ ಅಧ್ಯಕ್ಷ ಶ್ರೀಧರ ಸಾಹುಕಾರ, ನಗರಸಭೆ ಸದಸ್ಯರಾದ ಹಣಮಂತ ನಾಯಕ, ವಿಜಯಲಕ್ಷ್ಮೀ ನಾನೇಕ, ಮಶೆಪ್ಪ ನಾಯಕ, ಈರಯ್ಯಸ್ವಾಮಿ ಅಬ್ಬೆತುಮಕೂರು, ಎಇಇ ಬನ್ನಪ್ಪ ಕಣೇಕಲ್, ಮಲ್ಲಿಕಾರ್ಜುನ ಕಟ್ಟಿಮನಿ, ನ್ಯಾಯವಾದಿಗಳಾದ ಭೀಮಾಶಂಕರ ಮುಂಡರಡಿ, ಎಸ್.ಬಿ. ನಾಯಕ್, ಬಸವರಾಜ ಗೊಂದೇನೂರ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಜಾತ್ರೆ ನಿಮಿತ್ಯ ಹಮ್ಮಿಕೊಂಡಿದ್ದ ವಿವಿಧ ಕ್ರೀಡೆಗಳಲ್ಲಿ ವಿಜೇತರಾದ ತಂಡಗಳಿಗೆ ನಗದು ಬಹುಮಾನ ಹಾಗೂ ಕಪ್‌ಗಳನ್ನು ವಿತರಿಸಲಾಯಿತು.

ಅರ್ಚಕರಾದ ಸಣ್ಣಬಸವಣ್ಣ ಹಿರೇಮಠ ಸ್ವಾಗತಿಸಿದರು, ಶರಣಬಸವ ವಂದಿಸಿದರು.

## ಬೋರಬಂಡದಲ್ಲಿ 2ನೇಯ ವರುಷದ ವರಮಹಾಲಕ್ಷ್ಮಿ ಪೂಜಾ ವೈಭವ ಹಾಗೂ 12ನೇ ವರ್ಷದ ಶ್ರೀ ಕೃಷ್ಣ ಜನ್ಮಾಷ್ಟಮಿ ಭಕ್ತಿ ಸಂಭ್ರಮ



ಗುರುಮಠಕಲ : ತಾಲೂಕಿನ ಬೋರಬಂಡ ಗ್ರಾಮದಲ್ಲಿ ಶ್ರೀ ಲಕ್ಷ್ಮೀ ತಿಮ್ಮಪ್ಪ ದೇವಾಲಯದಲ್ಲಿ ಈ ವರ್ಷವೂ ಭಕ್ತಿಭಾವದಿಂದ ಸಾಮೂಹಿಕ ವರುಮಹಾಲಕ್ಷ್ಮಿ ಪೂಜಾ ಹಾಗೂ ಶ್ರೀ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮ ಜರುಗಲಿದೆ ಎಂದು ಸುದ್ದಿಗೋಷ್ಠಿಯಲ್ಲಿ ಶ್ರೀ ಲಕ್ಷ್ಮಿ ತಿಮ್ಮಪ್ಪ ದೇವಸ್ಥಾನದ ವ್ಯವಸ್ಥಾಪಕರಾದ ನರೆಂದ್ರ ರಾಥೋಡ್ ತಿಳಿಸಿದರು.

2 ನೇಯ ಸಾಮೂಹಿಕ ವರುಮಹಾಲಕ್ಷ್ಮಿ ಪೂಜಾ ಕಾರ್ಯಕ್ರಮವು ಆಗಸ್ಟ್ 15, 2025 ಶುಕ್ರವಾರದಂದು ಜರುಗಲಿದೆ, ಕಳೆದ ಬಾರಿ 75 ದಂಪತಿಗಳು ಭಾಗವಹಿಸಿದ್ದು, ಈ ಬಾರಿ 125 ದಂಪತಿಗಳು ಭಾಗವಹಿಸುವ ಸಾಧ್ಯತೆ ಇದೆ, ಆಸಕ್ತಿ ಉಳ್ಳವರು ಮುಂಗಡವಾಗಿ ನೊಂದಯಿಸಲು 8885011111,7021261844 ಸಂಪರ್ಕಿಸಲು ಸೂಚಿಸಲಾಗಿದೆ.

ಬೆಳಿಗ್ಗೆಯಿಂದಲೇ ಸುಪ್ರಭಾತ ಸೇವೆ,ಶ್ರೀ ಲಕ್ಷ್ಮೀ ತಿಮ್ಮಪ್ಪ ದೇವರ ವಿಶೇಷ ಅಲಂಕಾರ ಸೇವೆ, ರಥೋತ್ಸವ ನಡೆಯಲಿದೆ. ಶ್ರೀ ವರುಮಹಾಲಕ್ಷ್ಮಿ ಪೂಜಾ ಪ್ರಾರಂಭವಾಗಿ, ಮಧ್ಯಾಹ್ನ 11.00ಕ್ಕೆ ರಥೋತ್ಸವ ನೆರವೇರಲಿದೆ. ಮಧ್ಯಾಂತರದಲ್ಲಿ ಭಜನೆ, ಧಾರ್ಮಿಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಪೂಜೆಯಲ್ಲಿ ಭಾಗವಹಿಸುವ ಸ್ತ್ರೀಯರು ಮತ್ತು ಪುರುಷರು ಸಾಂಪ್ರದಾಯಕ ಉಡುಗೆಯೊಂದಿಗೆ ಪೂಜೆಯಲ್ಲಿ ಪಾಲ್ಗೊಳ್ಳಲು ಮನವಿ ಮಾಡಿದ್ದಾರೆ. 12ನೇ ವರ್ಷದ ಶ್ರೀ ಕೃಷ್ಣ ಜನ್ಮಾಷ್ಟಮಿ ಆಗಸ್ಟ್ 16, 2025ರಂದು ಭಕ್ತಿಭಾವದಿಂದ ಜರುಗಲಿದೆ. ಬೆಳಿಗ್ಗೆ 12:06ಕ್ಕೆ ಶ್ರೀ ಕೃಷ್ಣ ಜನ್ಮೋತ್ಸವ ಕಾರ್ಯಕ್ರಮ ಪ್ರಾರಂಭವಾಗಲಿದ್ದು, ಆಗಸ್ಟ್ 17ರಂದು ಸಂಜೆ 9:00ಕ್ಕೆ ಮೊಸರಿನ ಗಡಿಗೆ, ಬಣ್ಣದ ಓಕಳಿ ಹಾಗೂ ರಥೋತ್ಸವ, ಬಂಜರು ಸೇವೆ, ಮಂಗಳಾರತಿ ಕಾರ್ಯಕ್ರಮಗಳ ಮೂಲಕ ಉತ್ಸವಕ್ಕೆ ಮುಕ್ತಾಯ ಗೊಳ್ಳಲಿದೆ. ಕಾರ್ಯಕ್ರಮದಲ್ಲಿ ಶ್ರೀ ಹನುಮಂತ ದೇವರ ಸನ್ನಿಧಾನದಲ್ಲಿ ಶ್ರೀ ಕೃಷ್ಣ ಪಲ್ಲಕಿ ಉತ್ಸವ ಮತ್ತು ಮೊಸರಿನ ಗಡಿಗೆ ಹೊಡೆಯುವದು ವಿಶೇಷ ಆಕರ್ಷಣೆಯಾಗಲಿವೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ವರುಮಹಾಲಕ್ಷ್ಮಿ ದೇವಿಯ ಅನುಗ್ರಹ ಪಡೆಯಲು ಮತ್ತು ಶ್ರೀ ಕೃಷ್ಣನ ಕೃಪೆಗೆ ಪಾತ್ರರಾಗುವಂತೆ ದೇವಸ್ಥಾನದ ವ್ಯವಸ್ಥಾಪಕರು ಮತ್ತು ಉದ್ಯಮಿಗಳಾದ ನರೇಂದ್ರ ರಾಥೋಡ್ ಅವರು ಮನವಿ ಮಾಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಕಾಶೀನಾಥ್ ರಾಥೋಡ್ ಅಖಿಲಭಾರತ ಬಂಜಾರ ಸಮಾಜ ಗುರುಮಠಕಲ್ ತಾಲೂಕಿನ ಅಧ್ಯಕ್ಷ, ಬೋರಬಂಡ ಗ್ರಾಮ ಪಂಚಾಯತಿ ಸದಸ್ಯರಾದ ಶರಣಪ್ಪ, ಮ.ಹಫೀಜ ಉಪಸ್ಥಿತರಿದ್ದರು.

## ನಾಳೆ ( ಆ.15) ಸ್ವಾತಂತ್ರ್ಯ ಸಂಗ್ರಾಮದ ನೆನಪುಗಳು ಮತ್ತು ದೇಶಾಭಿಮಾನ ಕುರಿತು ವಿಶೇಷ ಉಪನ್ಯಾಸ ಹಾಗೂ ಕವಿಗೋಷ್ಠಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಚಕೋರ ಸಾಹಿತ್ಯ ವೇದಿಕೆ ಯಾದಗಿರಿ ಜಿಲ್ಲೆ " ಸ್ವಾತಂತ್ರ್ಯ ಸಂಗ್ರಾಮದ ನೆನಪುಗಳು ಮತ್ತು ದೇಶಾಭಿಮಾನ ಎಂಬ ವಿಷಯವನ್ನು ಕುರಿತು ವಿಶೇಷ ಉಪನ್ಯಾಸ ಹಾಗೂ ಕವಿಗೋಷ್ಠಿ ಕಾರ್ಯಕ್ರಮ ಆಯೋಜಿಸಲಾಗಿದೆ. ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡ ಭವನದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಬೆಂಗಳೂರು ಹಾಗೂ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಶಹಾಪುರ ವತಿಯಿಂದ ಅಗಸ್ಟ 15ರಂದು ಬೆಳಗ್ಗೆ 11–30 ಕ್ಕೆ ಏರ್ಪಡಿಸಲಾಗಿದೆ. ಹಿರಿಯ ಸಾಹಿತಿ ಹಾಗೂ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯರಾದ ಡಾ. ಸಿದ್ದರಾಮ ಹೊನ್ಕಲ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕಲ್ಬುರ್ಗಿಯ ವಿ.ಜಿ ಮಹಿಳಾ ಪದವಿ ಕಾಲೇಜಿನ ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಮಹೇಶ ಗಂವ್ಹಾರ ಅವರು ವಿಶೇಷ ಉಪನ್ಯಾಸ ನೀಡುವರು. ಸಾಹಿತಿ ಹಾಗೂ ಚಿಂತಕರಾದ ಡಾ. ಶಿವರಂಜನ್ ಸತ್ಯಂಪೇಟ ಕವಿ ಗೋಷ್ಠಿಯ ಅಧ್ಯಕ್ಷತೆ ವಹಿಸುವರು. ಯಾದಗಿರಿ ಜಿಲ್ಲಾ ಕ.ಸಾ.ಪ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ ಹಾಗೂ ಶಹಾಪುರ ತಾಲ್ಲೂಕ ಕ.ಸಾ.ಪ ನಿಕಟಪೂರ್ವ ಅಧ್ಯಕ್ಷ ಸಿದ್ದಲಿಂಗಣ್ಣ ಆನೆಗುಂದಿ , ಉಪನ್ಯಾಸಕ ಡಾ.ರಾಘವೇಂದ್ರ ಹಾರಣಯ ಮುಖ್ಯ ಅತಿಥಿಗಳಾಗಿ ಆಗಮಿಸುವರು.ಶಹಾಪುರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ರವೀಂದ್ರನಾಥ ಹೊಸ್ಮನಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕವಿಗೋಷ್ಠಿಯಲ್ಲಿ 30 ಹೆಚ್ಚು ಹಿರಿಯ ಹಾಗೂ ಯುವ ಕವಿಗಳು ಕವನ ವಾಚನ ಮಾಡಲಿದ್ದಾರೆ ಎಂದು ಕ.ಸಾ.ಪ ಗೌರವ ಕಾರ್ಯದರ್ಶಿ ಸುರೇಶಬಾಬು ಅರಣಿ ಹಾಗೂ ಕೋಶಾಧ್ಯಕ್ಷ ಶಂಕರ್ ಹುಲ್ಕಲ್. ಕೆ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: 79 ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.13–ಜಿಲ್ಲಾಡಳಿತ ವತಿಯಿಂದ 79ನೇ ಸ್ವಾತಂತ್ರ್ಯೋತ್ಸವದ ದಿನಾಚರಣೆ ಕಾರ್ಯಕ್ರಮವನ್ನು ಆ.15 ರಂದು ಬೆಳಿಗ್ಗೆ 09 ಗಂಟೆಗೆ ನಗರದ ಬಿಎಂಸಿಆರ್‌ಸಿ ಮೈದಾನದಲ್ಲಿ ಏರ್ಪಡಿಸಲಾಗಿದೆ ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ಧ್ವಜಾರೋಹಣಾ ನೆರವೇರಿಸಿ ಪಥಸಂಚಲನ ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ ಸ್ವಾತಂತ್ರ್ಯೋತ್ಸವದ ಸಂದೇಶ ನೀಡುವರು. ಇದಕ್ಕೂ ಮುನ್ನ ಸಚಿವರು, ಅಂದು ಬೆಳಿಗ್ಗೆ 08.20 ಕ್ಕೆ ಡಾ.ರಾಜ್‌ಕುಮಾರ್ ಉದ್ಯಾನವನದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಪ್ರತಿಮೆಗೆ ಗೌರವ ಸಮರ್ಪಣೆ ಮಾಡುವರು.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜಡ್.ಜಮೀರ್ ಅಹ್ಮದ್ ಖಾನ್ ಅವರು ಘನ ಉಪಸ್ಥಿತಿ ಇರುವರು.

ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಶಾಸಕರಾದ ಜೆ.ಎನ್.ಗಣೇಶ್, ಸಂಸದರಾದ ಈ.ತುಕಾರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನ ಪರಿಷತ್ ಶಾಸಕ ಡಾ.ಚಂದ್ರಶೇಖರ ಬಿ.ಪಾಟೀಲ್, ಶಾಸಕರಾದ ಬಿ.ಎಂ.ನಾಗರಾಜ, ನಾರಾ ಭರತ್ ರೆಡ್ಡಿ, ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಹಾಗೂ ಎಲ್ಲಾ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು ಸೇರಿದಂತೆ ಇನ್ನಿತರೆ ಗಣ್ಯರು ಪಾಲ್ಗೊಳ್ಳುವರು.

ಅಂದು ಬೆಳಿಗ್ಗೆ 10 ರಿಂದ ಬಿಎಂಸಿಆರ್‌ಸಿ ಮೈದಾನದಲ್ಲಿ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಸಂಜೆ 06 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ.

ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕರಾದ ವರ್ತಿಕ ಕಟಿಯಾರ್, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಇನ್ನೀತರರು ಉಪಸ್ಥಿತರಿರುವರು ಎಂದು ಜಿಲ್ಲಾಡಳಿತ ಪ್ರಕಟಣೆ ತಿಳಿಸಿದೆ.

### ಪಿಎಂಎಫ್‌ಎಂಇ ಯೋಜನೆಯ ಜಿಲ್ಲಾ ಮಟ್ಟದ ಅರಿವು ಕಾರ್ಯಗಾರ

## 1 ಲಕ್ಷ ಬಂಡವಾಳ ಹೂಡಿದರೆ 10 ಲಕ್ಷದ ಉದ್ಯಮ ಪ್ರಾರಂಭಿಸಲು ಅವಕಾಶ: ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್

ಬಳ್ಳಾರಿ,ಆ.13–ಪಿಎಂಎಫ್‌ಎಂಇ ಯೋಜನೆಯಡಿ ಕಿರು ಆಹಾರ ಸಂಸ್ಕಾರಣಾ ಉದ್ಯಮ ಪ್ರಾರಂಭಿಸಲು ಇಚ್ಛಿಸಿದಲ್ಲಿ ಫಲಾನುಭವಿಯು ಕೇವಲ 1 ಲಕ್ಷ ಬಂಡವಾಳ ಹೂಡಿದರೆ 10 ಲಕ್ಷ ಬಂಡವಾಳವುಳ್ಳ ಉದ್ಯಮ ಆರಂಭಿಸಬಹುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಹೇಳಿದರು.

ಕೃಷಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕೆಪೆಕ್ ಸಂಸ್ಥೆಯ ಸಹಯೋಗದೊಂದಿಗೆ ನಗರದ ಜಿಪಂ ನಜೀರ್ ಸಾಬ್ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ನಿಯಮಬದ್ಧಗೊಳಿಸುವಿಕೆ ಯೋಜನೆಯ ಜಿಲ್ಲಾ ಮಟ್ಟದ ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕಿರು ಆಹಾರ ಸಂಸ್ಕರಣಾ ಉದ್ಯಮ ಪ್ರಾರಂಭಿಸಲು 9 ಲಕ್ಷಗಳಷ್ಟು ಬ್ಯಾಂಕಿನ ಸಾಲ ದೊರೆಯುತ್ತದೆ. ಇದರಲ್ಲಿ 5 ಲಕ್ಷ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಸಹಾಯಧನ ದೊರೆಯುತ್ತದೆ. ಕೇವಲ 1 ಲಕ್ಷ ಹೂಡಿ 10 ಲಕ್ಷ ಬಂಡವಾಳದ ಉದ್ಯಮ ಪ್ರಾರಂಭಿಸಲು ಇದು ಸುವರ್ಣ ಅವಕಾಶವಾಗಿದ್ದು, ದೊಡ್ಡ ಕನಸಿಗೆ ಚಿಕ್ಕ ಹೆಜ್ಜೆಯಾಗಿ ಅಡಿಗಲ್ಲು ಹಾಕಲು ಸಾಧ್ಯವಾಗುವುದರಿಂದ ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಮಾತನಾಡಿ, ಪಿಎಂಎಫ್‌ಎಂಇ ಯೋಜನೆಯಡಿ ಆಹಾರ ಸಂಸ್ಕರಣೆಗೆ ಒತ್ತು ಕೊಡುವುದರಿಂದ ಮಹಿಳೆಯರು ತಮ್ಮ ಮನೆಯಿಂದಲೇ ಆಹಾರ ಸಂಸ್ಕರಣಾ ಪದಾರ್ಥಗಳಾದ ಜೋಳದ ರೊಟ್ಟಿ, ಚಕ್ಕುಲಿ, ಕಾರ, ಹಪ್ಪಳ, ಸಂಡಿಗೆ ಮತ್ತು ಇತರ ಪದಾರ್ಥಗಳನ್ನು ಆಹಾರ ಸಂಸ್ಕರಣೆ ಮಾಡುವ ಮೂಲಕ ಆರ್ಥಿಕವಾಗಿ ಸಬಲರಾಗಬಹುದು ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಮಾತನಾಡಿ, ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಂಡಲ್ಲಿ ತಮ್ಮ ಆದಾಯ ದ್ವಿಗುಣಗೊಳಿಸಿಕೊಳ್ಳಬಹುದು. ಈ ಯೋಜನೆಯು ಕೇವಲ ಈ ಒಂದು ವರ್ಷ ಮಾತ್ರ ಅನುಷ್ಠಾನದಲ್ಲಿರುವುದರಿಂದ ರೈತರು ಮತ್ತು ರೈತ ಮಹಿಳೆಯರು ಹಾಗೂ ನಿರುದ್ಯೋಗಿ ಯುವಕ–ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಮುಂದೆ ಬಂದು ಯೋಜನೆಯ ಲಾಭ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಲೀಡ್ ಬ್ಯಾಂಕ್‌ನ ವ್ಯವಸ್ಥಾಪಕ ಗಿರೀಶ್ ಕುಲಕರ್ಣಿ ಅವರು, ಫಲಾನುಭವಿಗಳು ಸಾಲ ಪಡೆಯಲು ಬ್ಯಾಂಕಿಗೆ ಸಲ್ಲಿಸಬೇಕಾದ ದಾಖಲೆಗಳ ಬಗ್ಗೆ ಮಾಹಿತಿ ನೀಡಿದರು.

ಕೆಪೆಕ್ ಸಂಸ್ಥೆಯ ಸಹಾಯಕ ನಿರ್ದೇಶಕ ಚಂದ್ರು ಕುಮಾರ್, ಯೋಜನೆಯ ಪ್ರಗತಿ ಮತ್ತು ಅನುಷ್ಠಾನದ ಬಗ್ಗೆ ಮಾಹಿತಿ ನೀಡಿದರು. ಕೆಪೆಕ್ ಸಂಸ್ಥೆಯ ಪ್ರಕಾಶ್ ನಾಯಕ ಮತ್ತು ವಿಘ್ನೇಶ್ ಯೋಜನೆಯ ರೂಪರೇಷೆ ಮತ್ತು ಅರ್ಜಿ ಸಲ್ಲಿಕೆಯ ಅರ್ಹತೆ ಹಾಗೂ ವಿಧಾನ ತಿಳಿಸಿಕೊಟ್ಟರು.

ಕಾರ್ಯಾಗಾರದಲ್ಲಿ ಉಪ ಕೃಷಿ ನಿರ್ದೇಶಕ ಮಂಜುನಾಥ್, ವಿವಿಧ ತಾಲ್ಲೂಕುಗಳ ಸಹಾಯಕ ಕೃಷಿ ನಿರ್ದೇಶಕರಾದ ಮಹ್ಮದ್ ರಫೀ, ಗರ್ಜಪ್ಪ, ಎಸ್.ಬಿ.ಪಾಟೀಲ್, ನಾಜನೀನ್ ನಾದಪ್ ಸೇರಿದಂತೆ ಕೃಷಿ ಸಂಬಂಧಿತ ಎಲ್ಲಾ ಇಲಾಖೆಗಳ ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಹಾಗೂ ಎನ್‌ಆರ್‌ಎಲ್‌ಎಂ ಕೋಷದ ಮುಖ್ಯಸ್ಥರು ಹಾಗೂ ಸಿಬ್ಬಂದಿಗಳು, ಸಾರ್ವಜನಿಕರು, ಇನ್ನೀತರರು ಹಾಜರಿದ್ದರು.

# ಅವೈಜ್ಞಾನಿಕ ಕಾಮಗಾರಿಗೆ ಸಾರ್ವಜನಿಕರ ಹಿಡಿಶಾಪ !



( ವೀರಯ್ಯ ವಿ ಹಿರೇಮಠ )

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರು ತಾಲೂಕಿನ ಆಡೂರು ಗ್ರಾಮದ ಹೊರ ಹೊಲಯದಲ್ಲಿ ಹಾದು ಹೋಗಿರುವ ತೊಂಡಿಹಾಳ ರಸ್ತೆಗೆ ನಿರ್ಮಿಸಿರುವ ಕೆಳ ಸೇತುವೆಯಲ್ಲಿ ಅಪಾರ ಪ್ರಮಾಣದ ನೀರು ಸಂಗ್ರಹಗೊಂಡು ಸಂಚಾರ ಸ್ಥಗಿತಗೊಂಡು ಪರಿಣಾಮವಾಗಿ ಸಾರ್ವಜನಿಕರು ಪರದಾಡುವಂತಾಗಿದೆ.

ಸತತವಾಗಿ ಸುರಿಯುತ್ತಿರುವ ಧಾರಾಕಾರ ಮಳೆಗೆ ಹಳ್ಳದ ನೀರು ಹರಿದು ಬಂದು ಸಂಗ್ರಹ ಗೊಂಡ ಪರಿಣಾಮವಾಗಿ ಸಾರ್ವಜನಿಕರಿಗೆ ಕೆಳ ಸೇತುವೆಯಲ್ಲಿ ಸಂಚರಿಸಲು ತೊಂದರೆಯಾಗುತ್ತಿದ್ದು ಗದಗ ವಾಡಿ ರೈಲ್ವೆ ಯೋಜನೆಗೆ ಈ ಸೇತುವೆ ನಿರ್ಮಿಸಲಾಗಿದೆ.

ಇಲ್ಲಿ ಅಪಾರ ಪ್ರಮಾಣದ ನೀರು ಹರಿದು ಬರುತ್ತದೆ ಎಂಬುದು ಗೊತ್ತಿದ್ದರೂ ಕೆಳ ಸೇತುವೆ ನಿರ್ಮಿಸಿರುವುದಕ್ಕೆ ರೈತರು ಹಾಗೂ ಸಾರ್ವಜನಿಕರು ರೈಲ್ವೆ ಇಲಾಖೆ ಅಧಿಕಾರಿಗಳ ವಿರುದ್ಧ ಇಡೀ ಶಾಪ ಹಾಕುತ್ತಿದ್ದಾರೆ. ಮಾರ್ಗದಲ್ಲಿ ಹಾದು ಹೋಗಿರುವ ಗದಗ ವಾಡಿ ರೈಲ್ವೆ ಮಾರ್ಗದ ಅಂಡರ್ ಗ್ರೌಂಡ ಬ್ರಿಜ್ ಕೆಳಗಡೆ ಮಳೆಯ ನೀರು ಶೇಖರಣೆ ಗೊಂಡ ಪರಿಣಾಮವಾಗಿ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿದ್ದು ಆಡೂರು ಮತ್ತು ತೊಂಡಿಹಾಳ ಗ್ರಾಮಕ್ಕೆ ಸಪರ್ಕ ಕಲ್ಪಿಸುವ ರಸ್ತೆ ಇದಾಗಿದ್ದು ಈ ರಸ್ತೆಯನ್ನು ಕೂಡಲೆ ಸಂಬಂಧಪಟ್ಟ ಅಧಿಕಾರಿಗಳು ರಸ್ತೆ ದುರಸ್ತಿಕಾರ್ಯ ಮಾಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ರೈತರಾದ ವೀರಣ್ಣ ಚನ್ನಪ್ಪ ಮುತ್ತಾಳ, ಸುರೇಶ್ ಹೊಸಮನಿ, ವಿಜಯಕುಮಾರ ಮುತ್ತಾಳ, ಶಂಕರರೆಡ್ಡಿ ಹೊಸಮನಿ, ಬಸ್ವಂತರೆಡ್ಡಿ ಕೆಂಚ ರೆಡ್ಡಿ, ಪ್ರಭುರಾಜ ಮೋಟಮ್ಮನವರ, ವೀರಣ್ಣ ಚೌಡಿ, ಈರಣ್ಣ ಬಸಪ್ಪ ಅಂಗಡಿ, ಶರಣಯ್ಯ ಪೂಜಾರ, ಹನುಮಪ್ಪ ನಾಗೋಜಿ, ವಿಜಯ ಅರಿಕೇರಿ, ಹಾಗೂ ಇತರರು ಇದ್ದರು.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ನಿರ್ದೇಶನ

# ಸರ್ಕಾರದ ಸೌಲಭ್ಯಗಳ ಕುರಿತು ಅರಿವು ಮೂಡಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.13–ಅಲ್ಪಸಂಖ್ಯಾತ ಸಮುದಾಯಗಳನ್ನು ಆರ್ಥಿಕ ಮತ್ತು ಭೌತಿಕವಾಗಿ ಸದೃಢಗೊಳಿಸಲು ಅವರಿಗಿರುವ ಸರ್ಕಾರದ ಸೌಲಭ್ಯಗಳ ಕುರಿತು ಸಮುದಾಯ ಮಟ್ಟದಲ್ಲಿ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಲ್ಪಸಂಖ್ಯಾತರಿಗೆ ಶೈಕ್ಷಣಿಕ ಅವಕಾಶಗಳನ್ನು ಹೆಚ್ಚಿಸುವ ನಿಟ್ಟಿನಲ್ಲಿ ಹಾಗೂ ಆರ್ಥಿಕ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಸಮಾನ ಹಂಚಿಕೆ, ಅಲ್ಪಸಂಖ್ಯಾತರ ಜೀವನ ಮಟ್ಟ ಸುಧಾರಣೆಗಾಗಿ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮವನ್ನು ಸಮರ್ಪಕವಾಗಿ ಜಾರಿಗೆ ತರಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಅಲ್ಪಸಂಖ್ಯಾತರ ಶೈಕ್ಷಣಿಕ ಅವಕಾಶಗಳನ್ನು ಹೆಚ್ಚಿಸಲು ಐಸಿಡಿಎಸ್ ಸೇವೆಗಳನ್ನು ಸಮಾನವಾಗಿ ದೊರೆಯುವಂತೆ ಮಾಡಬೇಕು. ಆರ್ಥಿಕ ಚಟುವಟಿಕೆ ಬಲಪಡಿಸಲು ಸಾಲ ಸೌಲಭ್ಯ ಕಲ್ಪಿಸುವುದು, ನಾಗರಿಕ ಸೇವೆಗಳ ಬಗ್ಗೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳುವುದು,



ಅಲ್ಪಸಂಖ್ಯಾತರ ಜೀವನ ಮಟ್ಟ ಸುಧಾರಿಸಲು ವಸತಿ ಯೋಜನೆ ಕಲ್ಪಿಸುವುದು. ಹೀಗೆ ಹಲವು ಕಾರ್ಯಕ್ರಮಗಳು ಬಗ್ಗೆ ನಿರ್ದೇಶನ ನೀಡಿದರು.

**ಕೌಶಲ್ಯ ತರಬೇತಿ ನೀಡಿ:**

ಅಲ್ಪಸಂಖ್ಯಾತ ಸಮುದಾಯದಲ್ಲಿ ಹೆಚ್ಚಾಗಿ ವಿದ್ಯಾಭ್ಯಾಸಕ್ಕೆ ಒತ್ತು ನೀಡುವುದಿಲ. ನಮ್ಮಲ್ಲಿ ಹೆಚ್ಚಾಗಿ ಕೈಗಾರಿಕಾ ವಲಯಗಳಿದ್ದು, ಜಿಟಿಟಿಸಿ, ಐಟಿಐ ಪೂರ್ಣಗೊಳಿಸಿದವರಿಗೆ ತಂತ್ರಜ್ಞಾನ ತರಬೇತಿ ಮೂಲಕ ಕೌಶಲ್ಯ ತರಬೇತಿ ನೀಡಲು ಕೌಶಲ್ಯಾಭಿವೃದ್ಧಿ ಇಲಾಖೆ, ಜಿಲ್ಲಾ ಕೈಗಾರಿಕೆ ತರಬೇತಿ ಕೇಂದ್ರ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಯೋಜನೆ ರೂಪಿಸಬೇಕು. ಈ ಕುರಿತು ಜಿಪಂ ಸಿಇಒ ಅವರ ಜೊತೆ ಚರ್ಚಿಸಿ ಎಂದರಲ್ಲದೇ ಬೇಕಾದ ಅನುದಾನ ಜಿಲ್ಲಾಡಳಿತದಿಂದ ನೀಡಲಾಗುವುದು ಎಂದು ಹೇಳಿದರು.

15 ಅಂಶಗಳ ಕಾರ್ಯಕ್ರಮಗಳಲ್ಲಿ ಸಂಬಂಧಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಎಲ್ಲಾ ಸೌಕರ್ಯ ನೀಡಬೇಕು. ಶಿಕ್ಷಣ ಇಲಾಖೆಯ ಎಲ್ಲಾ ಸೌಲಭ್ಯ ಕಲ್ಪಿಸಬೇಕು. ಕೃಷಿ ಇಲಾಖೆಯಲ್ಲಿ ಬರುವ ಸೂಕ್ಷ್ಮ ನೀರಾವರಿ, ಕೃಷಿ ಯಾಂತ್ರೀಕರಣ ಮತ್ತು ಬಿತ್ತನೆ ಬೀಜ ವಿತರಣೆಗೆ ಕ್ರಮ ವಹಿಸುವುದು. ತೋಟಗಾರಿಕೆ ಇಲಾಖೆಯಲ್ಲಿ ಬರುವ ವಿವಿಧ ಯೋಜನೆಗಳಡಿ ಸಹಾಯಧನ ಹಾಗೂ ಯೋಜನೆಗಳನ್ನು ನೀಡಬೇಕು ಎಂದು ಹೇಳಿದರು.

ಯೋಜನೆಗಳ ಹೊರತುಪಡಿಸಿಯೂ ಶಾಲೆಯಿಂದ ಹೊರಗುಳಿಯದಂತೆ ಪೋಷಕರಿಗೆ ಅರಿವು ಮೂಡಿಸಬೇಕು. ಬಾಲ್ಯವಿವಾಹ ಪದ್ಧತಿ, ಮಾದಕ ವಸ್ತುಗಳಿಂದ ದೂರವಿರುವಂತೆ ಅರಿವು ಮೂಡಿಸಲು ಅಧಿಕಾರಿಗಳು ಕ್ರಮವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು(ಪ್ರಭಾರ), ಜಿಲ್ಲಾ ಕೈಗಾರಿಕಾ ತರಬೇತಿ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಸವಿತಾ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಹಿಂದುಳಿದ ವರ್ಗಗಳ ಮಾಧ್ಯಮ ಮಾನ್ಯತೆ ಹೊಂದಿದ ಪತ್ರಕರ್ತರಿಗೆ ಮೀಡಿಯಾ ಕಿಟ್‌ಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.13–ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ, ಹಿಂದುಳಿದ ವರ್ಗಗಳ ಸಮುದಾಯದ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2025–26ನೇ ಸಾಲಿಗೆ ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ “ಮೀಡಿಯಾ ಕಿಟ್” ವಿತರಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹಿಂದುಳಿದ ವರ್ಗಗಳ ಮಾನ್ಯತೆ ಪಡೆದ ಪತ್ರಕರ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅಥವಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಂದ ಅರ್ಜಿ ನಮೂನೆ ಪಡೆದುಕೊಳ್ಳಬಹುದಾಗಿದೆ.

ಇಲಾಖೆಯ ಮಾನ್ಯತಾ ಕಾರ್ಡ್ (ಅಕ್ರೆಡಿಯೇಷನ್ ಕಾರ್ಡ್) ಹೊಂದಿದ ಪತ್ರಕರ್ತರು ತಮ್ಮ ಹೆಸರು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ (ಉಪಜಾತಿ), ಪತ್ರಿಕಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೇವಾನುಭವ, ವೇತನ ವಿವರಗಳನ್ನೊಳಗೊಂಡ ಮಾಹಿತಿಯನ್ನು ಭರ್ತಿ ಮಾಡಿ ಸ್ವ–ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿ ಸಲ್ಲಿಸಬೇಕು.

ಅರ್ಜಿಯೊಂದಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 2025–26ನೇ ಸಾಲಿನಲ್ಲಿ ವಿತರಿಸಲಾಗಿರುವ ಮಾಧ್ಯಮ ಮಾನ್ಯತಾ ಕಾರ್ಡ್ ಹೊಂದಿರುವ ಬಗ್ಗೆ ದೃಢೀಕೃತ ಜೆರಾಕ್ಸ್ ಪ್ರತಿ, ಜಾತಿ ದೃಢೀಕರಣಕ್ಕಾಗಿ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಹಾಗೂ ಅರ್ಜಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಮಾಹಿತಿಗಳಿಗೆ ಅಧಿಕೃತ ಪೂರಕ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕದೊಳಗಾಗಿ ಸಲ್ಲಿಸಬೇಕು.

ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರ್ಕಾರದ ವ್ಯಾಪ್ತಿಗೆ ಒಳಪಡುವ ನಿಗಮ, ಮಂಡಳಿಗಳಿಂದ ಹಾಗೂ ಸರ್ಕಾರದ ಯಾವುದೇ ಇಲಾಖೆಗಳಿಂದ ಈ ಯೋಜನೆಯಡಿ ಮಾಧ್ಯಮ ಕಿಟ್‌ಗಳನ್ನು ಪಡೆದಿರುವುದಿಲ್ಲ ಎಂದು ರೂ. 200 ರ ಬಾಂಡ್ ನಲ್ಲಿ ಮುಚ್ಚಳಿಕೆ ಪತ್ರ ಸಲ್ಲಿಸಬೇಕು.

ಮಾಧ್ಯಮ ಕಿಟ್ ಒದಗಿಸಲು ಪತ್ರಕರ್ತರ ಸೇವಾ ಹಿರಿತನ, ವಯೋಮಿತಿ ಹಾಗೂ ಸೇವಾನುಭವದ ಗರಿಷ್ಠತೆಯನ್ನು ಪರಿಗಣಿಸಲಾಗುವುದು. ಅರ್ಜಿಯೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ವಿವರ, ಪ್ರಸಾರ ಸಂಖ್ಯೆ, ಪತ್ರಿಕೆಯ ಮಾಧ್ಯಮ ಪಟ್ಟಿಯ ವಿವರ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ಆಗಸ್ಟ್ 21 ರೊಳಗಾಗಿ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ತುಕಾರಾಂ ರಾವ್ ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ: ಜಿಲ್ಲೆಯಲ್ಲಿ ನೋಂದಣಿಯಾಗಿ ಚಾಲನೆಯಲ್ಲಿರದ ರಾಜಕೀಯ ಪಕ್ಷದ ವಿಚಾರಣೆ

ಬಳ್ಳಾರಿ,ಆ.13–ಬಳ್ಳಾರಿ ಜಿಲ್ಲೆಯಲ್ಲಿ ನೋಂದಣಿಯಾಗಿ ಚಾಲನೆಯಲ್ಲಿರದ ರಾಜಕೀಯ ಪಕ್ಷದ ವಿಚಾರಣೆ ನಡೆಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಆಯೋಗದ ದಾಖಲೆಗಳ ಪ್ರಕಾರ, ಪಕ್ಷವು ಯಾವುದೇ ರಾಜ್ಯ ವಿಧಾನಸಭೆಗೆ ಅಥವಾ ಉಪಚುನಾವಣೆಗೆ 2019 ರಿಂದ ಕಳೆದ 06 ವರ್ಷಗಳಿಂದ ನಡೆದ ಯಾವುದೇ ಚುನಾವಣೆಗಳಲ್ಲಿ ಯಾವುದೇ ಅಭ್ಯರ್ಥಿಯನ್ನು ನಿಲ್ಲಿಸಿಲ್ಲ. ರಾಜಕೀಯ ಪಕ್ಷವಾಗಿ ಕಾರ್ಯನಿರ್ವಹಿಸುವುದನ್ನು ನಿಲ್ಲಿಸಿದೆ ಎಂಬುದು ಸ್ವಯಂ–ಸ್ಪಷ್ಟವಾಗಿದೆ.

ಆಯೋಗವು ಭಾರತದ ಸಂವಿಧಾನದ ಆರ್ಟಿಕಲ್ 324 ಮತ್ತು 1951ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 29ಎ ಅಡಿ ತನ್ನ ಅಧಿಕಾರ ಚಲಾಯಿಸಿ, “ಬಡವರ ಶ್ರಮಿಕ ರೈತ ಕಾಂಗ್ರೆಸ್ ಪಕ್ಷ” ಎಂಬ ರಾಜಕೀಯ ಪಕ್ಷವನ್ನು ನೋಂದಾಯಿತ ಪಕ್ಷಗಳ ಪಟ್ಟಿಯಿಂದ ತೆಗೆದುಹಾಕಲು ಪ್ರಸ್ತಾಪಿಸಿದೆ.

ಬಳ್ಳಾರಿ ಜಿಲ್ಲೆಯಲ್ಲಿ ನೋಂದಾಯಿತ, ಮಾನ್ಯತೆ ಪಡೆಯದ ರಾಜಕೀಯ ಪಕ್ಷವಾದ ‘ಬಡವರ ಶ್ರಮಿಕರ ರೈತರ ಕಾಂಗ್ರೆಸ್ ಪಕ್ಷ’ವು ಅಧಿಕೃತ ಪ್ರತಿನಿಧಿಯು ಇಚ್ಛಿಸಿದಲ್ಲಿ ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ, ಬೆಂಗಳೂರು ಇವರಿಗೆ 2025ರ ಜುಲೈ 18 ರೊಳಗಾಗಿ ತಮ್ಮ ಲಿಖಿತ ಮನವಿಯನ್ನು ಸಲ್ಲಿಸಬಹುದು.

ಈ ರಾಜಕೀಯ ಪಕ್ಷದ ವಿಚಾರಣೆಯನ್ನು ಸೆಪ್ಟೆಂಬರ್ 01 ರಂದು ನಿಗದಿಪಡಿಸಲಾಗಿದ್ದು, ವಿಚಾರಣೆಗೆ ಪಕ್ಷದ ಮುಖ್ಯಸ್ಥರು/ಅಧ್ಯಕ್ಷರು/ಪ್ರಧಾನಕಾರ್ಯದರ್ಶಿಗಳು ಕಡ್ಡಾಯವಾಗಿ ಹಾಜರಿರಬೇಕು.

ಒಂದು ವೇಳೆ ನಿಗದಿತ ಸಮಯದೊಳಗೆ ಪಕ್ಷದಿಂದ ಯಾವುದೇ ಲಿಖಿತ ಮನವಿ ಸ್ವೀಕೃತವಾಗದೇ ಇದ್ದಲ್ಲಿ ಪಕ್ಷದ ಯಾವುದೇ ಹೇಳಿಕೆ ಇರುವುದಿಲ್ಲವೆಂದು ಪರಿಗಣಿಸಿ, ಪಕ್ಷವನ್ನು ಸಂಪರ್ಕಿಸದೇ ಚುನಾವಣಾ ಆಯೋಗದಿಂದ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಸನಮುಕ್ತ ಸಮಾಜದ ನಿರ್ಮಾಣಕ್ಕೆ ಡಾ.ಮಹಾಂತ ಶಿವಯೋಗಿಗಳ ಕೊಡುಗೆ ಅಪಾರ: ಡಾ.ಡಿ.ವಿ ಪರಮಶಿವ ಮೂರ್ತಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.13–ಮಾದಕ ವಸ್ತುಗಳ ಸೇವನೆಯಿಂದಾಗಿ ಹಾಳಾದ ಸಂಸಾರಗಳನ್ನು ಉಳಿಸುವ ಸಲುವಾಗಿ ವ್ಯಸನಮುಕ್ತ ಸಮಾಜದ ನಿರ್ಮಾಣಕ್ಕೆ ಡಾ.ಮಹಾಂತ ಶಿವಯೋಗಿಗಳು ಮುಂದಾಗಿದ್ದರು. ದುಶ್ಚಟಗಳನ್ನು ತಮ್ಮ ಜೋಳಿಗೆಗೆ ಹಾಕಿಕೊಳ್ಳುವ “ಮಹಾಂತ ಜೋಳಿಗೆ” ಕಾರ್ಯವು ಇಡೀ ರಾಜ್ಯ, ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟಕ್ಕೆ ಪ್ರಸಿದ್ಧಿ ಪಡೆಯಿತು ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಡಿ.ವಿ ಪರಮಶಿವ ಮೂರ್ತಿ ಅವರು ಹೇಳಿದರು.

ಹಂಪಿ ಕಮಲಾಪುರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಶ್ರೀ ವಿಜಯ ಮಹಾಂತೇಶ್ವರ ಶಾಖಾ ಮಠ, ಸಿದ್ಧಯ್ಯನಕೋಟೆ ಹಾಗೂ ಚಿತ್ತರಗಿಚ್ಚಿ ಜ್ಯೋತಿ ಸಾಂಸ್ಕೃತಿಕ ಕಲಾ ಮತ್ತು ಕ್ರೀಡಾ ಸಂಘದ ಹಾಗೂ ಕನ್ನಡ ವಿಶ್ವವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ನಡೆದ ಮಹಾಂತ ಜೋಳಿಗೆ ಹಾಗೂ “ಮಕ್ಕಳ ಬದುಕಿಗೆ ಶರಣರ ಚಿಂತನೆ” ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತಾಡಿದರು.

ಡಾ.ಮಹಾಂತ ಶಿವಯೋಗಿಗಳು ಜನರಲ್ಲಿ ಹಣವನ್ನು ಕೇಳಲಿಲ್ಲ, ಹಣ್ಣು ಹಂಪಲು ಕೇಳಲಿಲ್ಲ, ಪೂಜೆ ಮಾಡಿ ಎಂದು ಹೇಳಲಿಲ್ಲ,



ಬದಲಾಗಿ ನಿಮ್ಮಲ್ಲಿರುವ ದುಶ್ಚಟ–ದುರ್ವ್ಯಸನಗಳನ್ನು ಜೋಳಿಗೆಗೆ ಹಾಕಿ ಎಂದು ಕೇಳುತ್ತಿದ್ದರು ಎಂದು ತಿಳಿಸಿದರು.

ಸಂಸಾರದಲ್ಲಿ ಆನೇಕ ಪಾತ್ರಗಳನ್ನು ನಿಭಾಯಿಸುವ ಸಂದರ್ಭಗಳು ಬರುತ್ತವೆ. ಅಂತಹ ಸಂದರ್ಭದಲ್ಲಿ ಅನೇಕ ದುಶ್ಚಟಗಳು, ದುರ್ಗುಣಗಳು ಆಕರ್ಷಿಸುತ್ತವೆ. ನಿಮ್ಮ ಬಹುಪಾಲು ಸಮಯವನ್ನು ಕಿತ್ತುಕೊಳ್ಳುತ್ತವೆ. ಹಾಗಾಗಿ ನಿಮ್ಮ ಆರೋಗ್ಯವನ್ನು ಹಾಳು ಮಾಡಿಕೊಳ್ಳಬೇಡಿ ಎಂದು ಕಿವಿಮಾತು ಹೇಳಿದರು.

ಬೆಳೆಯುತ್ತಿರುವ ಸಮಾಜಕ್ಕೆ ಮದ್ಯಪಾನ ಮಾರಕ ಎಂಬುದನ್ನು ಅರಿತ ಮಹಾತ್ಮಾ ಗಾಂಧೀಜಿಯವರು ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ಮಧ್ಯಪಾನ ವಿರೋಧಿಸಿ ಅಭಿಯಾನ ಆರಂಭಿಸಿದ್ದರು. ಸ್ವಾತಂತ್ರ್ಯ ನಂತರ ಡಾ.ಮಹಾಂತ ಶಿವಯೋಗಿಗಳು ಸಮಾಜದ ಸ್ವಾಸ್ಥ್ಯ ಕಾಪಾಡಿ, ಅನಾಚಾರ ತಡೆಗಟ್ಟಲು ಹಗಲಿರುಲು ಶ್ರಮಿಸಿದರು ಎಂದು ತಿಳಿಸಿದರು.

ಹಿರಿಯ ಪ್ರಾಧ್ಯಾಪಕ ಹಾಗೂ ದಲಿತ ಅಧ್ಯಯನ ಪೀಠದ ನಿರ್ದೇಶಕ ಚಿನ್ನಸ್ವಾಮಿ ಸೊಸಲೆ ಅವರು ಮಾತನಾಡಿ ಡಾ.ಮಹಾಂತ ಶಿವಯೋಗಿಗಳ ಆದರ್ಶಗಳನ್ನು ಇಂದಿನ ಯುವ ಜನತೆ ಅರಿತು ಪಾಲಿಸುವುದರ ಮೂಲಕ ದುಶ್ಚಟಗಳನ್ನು ತೊರೆದು ಸದೃಢ ರಾಷ್ಟ್ರ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ಪ್ರಾಂಶುಪಾಲರಾದ ನಿಸ್ಸಾರಮದ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾಜ ಹಾಗೂ ದೇಶವನ್ನು ಹಾಳು ಮಾಡುವ ದುರ್ವ್ಯಸನಗಳು, ದುಶ್ಚಟಗಳು ಹಾಗೂ ದುರಾಚಾರಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದವರು ಡಾ.ಮಹಾಂತ ಶಿವಯೋಗಿಗಳು. ಅವರ ಬದುಕು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಮುಡಿಪಾಗಿತ್ತು. ಅವರ ಆಶಯದಂತೆ ವ್ಯಸನಮುಕ್ತ ಸಮಾಜ ನಿರ್ಮಾಣದ ಹೊಣೆ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಸಿದ್ದಯ್ಯನಕೋಟೆ ಶ್ರೀ ವಿಜಯ ಮಹಾಂತೇಶ್ವರ ಶಾಖಾ ಮಠದ ಶ್ರೀ ಬಸವಲಿಂಗ ಮಹಾ ಸ್ವಾಮೀಜಿ ದಿವ್ಯಸಾನಿಧ್ಯ ವಹಿಸಿ ಮಾತನಾಡಿ, ಮನೆಯೇ ಮೊದಲ ಪಾಠಶಾಲೆ. ಮನೆಯಲ್ಲಿ ತಂದೆ–ತಾಯಿ ಉತ್ತಮ ಸಂಸ್ಕಾರ ಮಕ್ಕಳಿಗೆ ನೀಡುತ್ತಾರೋ ಆ ಮಕ್ಕಳು ಉತ್ತಮ ಸಂಸ್ಕಾರದತ್ತ ಸಾಗುತ್ತಾರೆ ಎಂದು ಹೇಳಿದರು.

ತಂಬಾಕು ಸೇವನೆಯು ಮನುಷ್ಯನ ಶರೀರವನ್ನು ಹಾಳು ಮಾಡುತ್ತದೆ. ತಂಬಾಕಿನಲ್ಲಿರುವ ನಿಕೋಟಿನ ಎಂಬ ಪದಾರ್ಥವು ತಂಬಾಕು ಸೇವನೆಗೆ ಅಂಟಿಕೊಳ್ಳುವಂತೆ ಮಾಡುತ್ತದೆ. ಭಾರತದಲ್ಲಿ ವರ್ಷದಲ್ಲಿ ಸರಿಸಮಾರು 7 ಲಕ್ಷ ಜನರು ಸಾಂಕ್ರಾಮಿಕವಲ್ಲದ ಕಾಯಿಲೆಗಳಿಗೆ ಸಾವನ್ನಪ್ಪುತ್ತಿದ್ದು, ಅದರಲ್ಲಿ 4 ಲಕ್ಷ ಜನರು ಕ್ಯಾನ್ಸರ್ ನಂತಹ ಮಾರಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಇದರಲ್ಲಿ ಯುವಕರು ಹೆಚ್ಚಿನವರಾಗಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಶ್ರೀಮಠದ ಕಾರ್ಯದರ್ಶಿ ಪಿ.ಆರ್ ಕಾಂತರಾಜ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ಜನರ ದುಶ್ಚಟಗಳನ್ನು ತಮ್ಮ ಜೋಳಿಗೆಗೆ ಹಾಕಿಕೊಂಡು ಇಡೀ ರಾಷ್ಟ್ರದ ಗಮನಸೆಳೆದ ಇಳಕಲ್ ಮಹಾಂತ ಶಿವಯೋಗಿಗಳ ಜನ್ಮದಿನ (ಆಗಸ್ಟ್ 1) ವನ್ನು ಸರ್ಕಾರವು ವ್ಯಸನಮುಕ್ತ ದಿನಾಚರಣೆಯನ್ನಾಗಿ ಆಚರಿಸುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಲಾವಿದರಾದ ಯಲ್ಲಪ್ಪ ಭಂಡಾರಿ ಮತ್ತು ತಂಡದವರಿಂದ ವಚನ ಸಂಗೀತ ಗಾಯನ, ಗಾಯಕ ತಿಮ್ಮನಹಳ್ಳಿ ಡಿ.ಬಿ ನಿಂಗರಾಜು ವಚನ ಗಾಯನ ಪ್ರಸ್ತುತಪಡಿಸಿದರು. ಆರ್.ವಿ.ಮಂಜುನಾಥ ನಿರೂಪಿಸಿದರು. ಶಿಕ್ಷಕ ಪ್ರಭು ವಂದಿಸಿದರು. ಉಪನ್ಯಾಸಕ

# ಸಂಸ್ಕಾರದಿಂದ ವ್ಯಕ್ತಿತ್ವ ವಿಕಾಸ: ಗುರುಪಾದ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಯೊಂದಕ್ಕೂಹೋರಾಟವಿದೆ. ಕೇವಲ ಅಂಕಗಳಿಂದ ಯಶಸ್ಸು ಸಾಧ್ಯವಿಲ್ಲ. ವಿದ್ಯಾಭ್ಯಾಸಕ್ಕಿಂತ ಹೆಚ್ಚು ಸಂಸ್ಕಾರವನ್ನು ರೂಢಿಸಿಕೊಳ್ಳುವ ಕೆಲಸವನ್ನು ವಿದ್ಯಾರ್ಥಿಗಳು ಮಾಡಬೇಕು ಎಂದು ಕಲ್ಮಠ ಬೀಳಗಿಯ ಕಲ್ಮಠದ ಗುರುಪಾದ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ನಗರದ ಬಸವೇಶ್ವರ ಕಲಾ ಮಹಾವಿದ್ಯಾಲಯದಲ್ಲಿಮಂಗಳವಾರ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಉದ್ಘಾಟನಾ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕೇವಲ ಪಠ್ಯಕ್ಕೆ ಸೀಮಿತವಾಗದೆ ಕ್ರೀಡೆಮತ್ತುಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು. ಅಧ್ಯಯನ ವಿಷಯದ ಮೇಲೆ ಪ್ರೀತಿ ಮತ್ತು ಉಪಮ್ಯಾಸಕರ ಮೇಲೆ ಗೌರವ ಹೊಂದಿದಾಗ ಮಾತ್ರ ಜ್ಞಾನವಂತರಾಗಲು ಸಾಧ್ಯ ಎಂದರು.

ಉಪನ್ಯಾಸಕ ವೃತ್ತಿ ಕೇವಲ ಸಂಬಳಕ್ಕಾಗಿ ಅಲ್ಲ ವಿದ್ಯಾರ್ಥಿಗಳ ಭವಿಷ್ಯ ಉತ್ತಮಗೊಳಿಸುವ ಸೇವೆಯಾಗಿದ್ದು ಅದನ್ನು ವಿದ್ಯಾರ್ಥಿಗಳು ಗೌರವ ಭಾವನೆಯಿಂದ ಅರ್ಥೈಸಿಕೊಳ್ಳಬೇಕು. ತಂದೆ–ತಾಯಿ ಮಾತನ್ನು ಕೇಳುವ ವ್ಯವದಾನ ಬೆಳೆಸಿಕೊಂಡು ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದ ಪೂಜ್ಯರು, ವಿದ್ಯಾರ್ಥಿ ಜೀವನ ಬದುಕು ಕಟ್ಟಿಕೊಳ್ಳುವ ಘಟ್ಟವಾಗಿದೆ. ದುಶ್ಚಟಗಳ ದಾಸರಾಗಬೇಡಿ ಎಂದು ಹೇಳಿದರು. ಪ್ರಾಚಾರ್ಯ ಎಸ್.ಆರ್.ಮೂಗನೂರಮಠ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಹುದುಗಿರುವ ಸಾಮರ್ಥ್ಯಗಳನ್ನು ವಿಕಸನಗೊಳಿಸುವ ಕೆಲಸವನ್ನು ಶಿಕ್ಷಣ ಮಾಡುತ್ತದೆ. ಗುರುವಿಗೆ ಮಹತ್ತರ ಸ್ಥಾನವಿದೆ. ಗುರು ಕೇವಲ ಮಾರ್ಗದರ್ಶಿಯಲ್ಲ ವಿದ್ಯಾರ್ಥಿಗಳನ್ನು ಪ್ರಕಾಶಮಾನಗೊಳಿಸಲು ಶ್ರಮಿಸುತ್ತಾರೆ. ಪ್ರತಿಯೊಂದಕ್ಕೂ ದೈವತ್ವದ ಸ್ವರೂಪ ನೀಡುವ ಶಕ್ತಿ ಭಾರತೀಯ ಸಂಸ್ಕೃತಿಗೆ ಇದ್ದು ಅದನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಯೋಜಕ ಡಾ.ಎ.ಯು.ರಾಠೋಡ, ಸಾಂಸ್ಕೃತಿಕ ವಿಭಾಗದ ಸಂಯೋಜಕ ಡಾ.ಕೆ.ವಿ.ಮಠ, ದೈಹಿಕ ಶಿಕ್ಷಣ ನಿರ್ದೇಶಕ ಎಂ.ಎಂ.ದೇವನಾಳ, ವಿದ್ಯಾರ್ಥಿ ಪ್ರತಿನಿಧಿಗಳಾದ ತಾನಾಜಿ ವಿಭೂತಿ, ಗಾಯತ್ರಿ ರಾಠೋಡ, ವಿವಿಧ ವಿಭಾಗಗಳ ಉಪನ್ಯಾಸಕರು ಪಾಲ್ಗೊಂಡಿದ್ದರು.

# ಓದುವ ಅಭಿರುಚಿ ಜ್ಞಾನದ ಕ್ಷಿತಿಜ ವಿಸ್ತರಿಸುತ್ತದೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಒಳ್ಳೆಯ ಪುಸ್ತಕಗಳನ್ನು ಓದುವುದು ವಿದ್ಯಾರ್ಥಿಗಳ ಹವ್ಯಾಸವಾಗಬೇಕು. ಓದುವ ಅಭಿರುಚಿಯನ್ನು ಬೆಳೆಸಿಕೊಂಡಲ್ಲಿ ಅದು ಜ್ಞಾನದ ಕ್ಷಿತಿಜವನ್ನು ವಿಸ್ತರಿಸಬಲ್ಲದು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಗ್ರಂಥಾಲಯ ವಿಜ್ಞಾನ ವಿಭಾಗ ಡಾ.ಎಸ್.ಆರ್.ರಂಗನಾಥನ್ ಜನ್ಮದಿನದ ಅಂಗವಾಗಿ ಮಂಗಳವಾರ ಆಯೋಜಿಸಿದ್ದ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುಸ್ತಕ ಓದುವಿಕೆಯಿಂದ ಜ್ಞಾನ ಸಂಪತ್ತು ಹೆಚ್ಚಾಗುವುದು. ಆಲೋಚನೆಗಳು ವಿಸ್ತಾರವಾಗಿ ಚಿಂತನೆಗೆ ಹೊಸ ಬೆಳಕನ್ನು ನೀಡಬಲ್ಲದು. ಮೊಬೈಲ್ ಸಂಸ್ಕೃತಿಯಿಂದ ಹೊರಬಂದು ಪುಸ್ತಕ ಸಂಸ್ಕೃತಿಯನ್ನು ಬೆಳೆಸಿಕೊಂಡು ಜ್ಞಾನ ಸಂಪತ್ತನ್ನು ಹೆಚ್ಚಿಸಿಕೊಂಡಲ್ಲಿ ಹೊರಜಗತ್ತಿನ ಪೈಪೋಟಿಯನ್ನು ಸಮರ್ಥವಾಗಿ ಎದುರಿಸಬಹುದು ಎಂದ ನರಗುಂದ, ಗ್ರಂಥಾಲಯ ವಿಜ್ಞಾನಕ್ಕೆ ಡಾ.ಎಸ್.ಆರ್.ರಂಗನಾಥನ್ ನೀಡಿದ ಕೊಡುಗೆಯನ್ನು ವಿದ್ಯಾರ್ಥಿಗಳು ಅರಿತು ಅವರ ವ್ಯಕ್ತಿತ್ವದಿಂದ ಪ್ರೇರಣೆ ಪಡೆಯಬೇಕು ಎಂದರು.

ಗ್ರಂಥಪಾಲಕ ಡಿ.ಎಚ್.ಬಿರಾದಾರ ಮಾತನಾಡಿ, ಪಠ್ಯ, ಸಾಮಾನ್ಯ ಜ್ಞಾನ, ಸ್ಪರ್ಧಾತ್ಮಕ ಪರೀಕ್ಷೆ, ಇತಿಹಾಸಕ್ಕೆ ಸಂಬಂಧಿಸಿದಂತೆ ಸಾಕಷ್ಟು ಪುಸ್ತಕಗಳು ಗ್ರಂಥಾಲಯದಲ್ಲಿ ಲಭ್ಯವಿದ್ದು ವಿದ್ಯಾರ್ಥಿಗಳು ಅವುಗಳನ್ನು ಓದಿ ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದರು.

ಐಕ್ಯೂಎಸಿ ಸಂಯೋಜಕ ಡಾ.ಎಸ್.ಎಸ್.ಹಂಗರಗಿ ವಂದಿಸಿದರು. ಇದೇ ಸಂದರ್ಭದಲ್ಲಿ ಆಯೋಜಿಸಿದ್ದ ಪುಸ್ತಕ ಪ್ರದರ್ಶನದಲ್ಲಿ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಪಾಲ್ಗೊಂಡರು.

# ನೀರು ಶುದ್ಧೀಕರಣ ಘಟಕ ಪರಿಶೀಲಿಸಿದ ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಜಿಲ್ಲೆಯ ಹುನಗುಂದ ತಾಲೂಕಿನ ಕೋಡಿಹಾಳ ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ನೀರಿನ ಶುದ್ಧೀಕರಣ ಘಟಕದ ಕಾಮಗಾರಿ ಸ್ಥಳಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ತಾಂತ್ರಿಕ ವಿವರ, ನೀರಿನ ಗುಣಮಟ್ಟ ನಿರ್ವಹಣಾ ವಿಧಾನ ಪರಿಶೀಲಿಸಿದರು.

ಮಂಗಳವಾರ ಶುದ್ಧೀಕರಣ ಘಟಕಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಕಾಮಗಾರಿ ಪರಿಶೀಲಿಸಿ ಗುಣಮಟ್ಟ ಕಾಯ್ದುಕೊಳ್ಳುವ ಮೂಲಕ ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು. ನಂತರ ತಾಲೂಕಿನ ಡಿಸೈನ್ ಬಿಲ್ಡ್ ಆಪರೇಟ್ ಟ್ರಾನ್ಸಫರ್ ಮಾದರಿಯಲ್ಲಿ ಹಾಗೂ ಜಲ ಜೀವನ ಮಿಷನ್ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳ ಪರಿಶೀಲನೆ ನಡೆಸಿದರು.

ನವಲಿ ಗ್ರಾಮದಲ್ಲಿರುವ ಇಂ–ಟೆಕ್ ಜ್ಯಾಕ್‌ವೆಲ್ ಕಾಮಗಾರಿ ಶುದ್ಧಿಕರಣ ಘಟಕಗಳಿಗೆ ಅಗತ್ಯವಾದ ಕಚ್ಚಾ ನೀರಿನ ಸಂಗ್ರಹ ಪೂ–ರೈಕೆ ಮುಖ್ಯವಾಗಿದ್ದು, ಇದರ ಸುರಕ್ಷತಾ ಕ್ರಮಗಳು, ನಿರ್ವಹಣಾ ಪಟ್ಟಿ ಹಾಗೂ ಕಾರ್ಯಕ್ರಮತೆ ಹೆಚ್ಚಿಸುವ ಕುರಿತು ತಿಳಿಸಿದರು. ಹುನಗುಂದ ಪಟ್ಟಣದಲ್ಲಿರುವ ಮೇಜರ್ ಬ್ಯಾಲೆನ್ಸಿಂಗ್ ಟ್ಯಾಂಕ್ ಕಾಮಗಾರಿಯನ್ನು ಪರಿಶೀಲಿಸಿದರು.

ಈ ಸಮಯದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಆಕಾ ವಂದೆ, ಹುನಗುಂದ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮುರಳಿ ದೇಶಪಾಂಡೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಕೆ.ಡಿ.ನಾಯಕ ಇತರರು ಇದ್ದರು.

# ಸ್ವಾತಂತ್ರ್ಯೋತ್ಸವ ಸಂಭ್ರಮ–ವಿವಿಧ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಜಿಲ್ಲೆಯಲ್ಲಿ ಆಗಸ್ಟ 15 ರಂದು ಆಚರಿಸಲ್ಪಡುವ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತದವತಿಯಿಂದ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 8.30ಕ್ಕೆ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ ಪುತ್ಥಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅವರಿಂದ ಮಾಲಾರ್ಪಣೆ, 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ದ್ವಜಾರೋಹಣ ನಂತರ ರಾಷ್ಟ್ರಗೀತೆ, ನಾಡಗೀತೆಯ ನಂತರ ಪರೇಡ ವೀಕ್ಷಣೆ, ಪಥ ಸಂಚಲನ, ಜಿಲ್ಲಾ ಉಸ್ತುವಾರಿ ಸಚಿವರಿಂದ ಸ್ವಾತಂತ್ರೋತ್ಸವದ ಸಂದೇಶ, ಸಾಂಸ್ಕೃತಿಕ ಕಾರ್ಯಕ್ರಮ, ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಸಲ್ಲಿಸಿದವರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಎಚ್.ವಾಯ್.ಮೇಟಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ಸಂಜೆ 5.30ಕ್ಕೆ ನವನಗರದ ಕಲಾಭವನದಲ್ಲಿ ಶಾಲಾ ವಿದ್ಯಾರ್ಥಿಗಳಿಂದ ದೇಶಭಕ್ತಿ ಗೀತೆ, ನೃತ್ಯ ರೂಪಕ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

# ವಿವಿಧ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಪ್ರಸಕ್ತ ಸಾಲಿಗೆ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿ ಸಮುದಾಯದ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆ ಮತ್ತು ಭೂ ಒಡೆತನ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

2022–23, 2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿಗಳನ್ನು ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ಅರ್ಜಿ ಸಲ್ಲಿಸುವವರು ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಬೆಂಗಳೂರು ಒನ್ ಕೇಂದ್ರಗಳಲ್ಲಿ ಆನ್ ಲೈನ್ ಮುಖಾಂತರ ಸೆಪ್ಟೆಂಬರ್ 10 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಕೊಠಡಿ ಸಂಖ್ಯೆ: 103, ಜಿಲ್ಲಾ ಆಡಳಿತ ಭವನ, ನವನಗರ, ಬಾಗಲಕೋಟೆ ಇಲ್ಲಿ ಸಂಪರ್ಕಿಸಬಹುದು ಎಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕ ಉಮೇಶ ಸಿದ್ನಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುಸ್ತಕ ಓದಿನಿಂದ ಸರ್ವತೋಮುಖ ಬೆಳವಣಿಗೆ ಸಾಧ್ಯ– ಡಾ.ಅರುಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಪುಸ್ತಕಗಳು ಮಾನವೀಯ ಮೌಲ್ಯಗಳನ್ನು ಬೆಳೆಸಿ ಮನುಷ್ಯನ ವ್ಯಕ್ತಿತ್ವವನ್ನು ಕಟ್ಟಿಕೊಡುವ ಸಾಧನಗಳಾಗಿದ್ದು, ವ್ಯಕ್ತಿಯ ಸರ್ವತೋಮುಖ ಬೆಳವಣಿಗೆ ಪುಸ್ತಕಗಳಿಂದ ಮಾತ್ರ ಸಾಧ್ಯ ಎಂದು ಪ್ರಾಚಾರ್ಯ ಅರುಣ ಹೂಲಿ ಹೇಳಿದರು.

ನಗರದ ಬಸವೇಶ್ವರ ವಿದ್ಯಾವರ್ಧಕ ಸಂಘದ ಬಿ.ವಿ.ವಿ.ಎಸ್. ಹೋಮಿಯೋಪಥಿಕ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಮಂಗಳವಾರ ಹಮ್ಮಿಕೊಂಡ ರಾಷ್ಟ್ರೀಯ ಗ್ರಂಥಪಾಲಕ ದಿನಾಚಾರಣೆ ನಿಮಿತ್ಯ ಗ್ರಂಥಾಲಯ ವಿಜ್ಞಾನದ ಪಿತಾಮಹ ಡಾ.ಎಸ್.ಆರ್.ರಂಗನಾಥನ್ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸಿ ಮಾತನಾಡಿದ ಅವರು ಮಾತನಾಡಿದರು.

ಇಂದಿನ ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಗ್ರಂಥಾಲಯ ಮತ್ತು ಅಂತರ್ಜಾಲದ ಮೂಲಕ ಜ್ಞಾನವನ್ನು ಗಳಿಸಿಕೊಳ್ಳುತ್ತಿದ್ದೇವೆ ಎಂದರೆ ಅದು ಗ್ರಂಥಾಲಯದ ಸೇವೆಯಿಂದ. ಪ್ರತಿಯೊಂದು ಜೀವಿಗೂ ಬದುಕಲು ನೀರು, ಗಾಳಿ ಬೆಳಕು ಮತ್ತು ಆಹಾರ ಹೇಗೆ ಮುಖ್ಯವೋ ಹಾಗೆಯೇ ಪುಸ್ತಕವು ಮುಖ್ಯ. ಮಾನವೀಯ ಮೌಲ್ಯಗಳನ್ನು ಬೆಳೆಸಿ ಮನುಷ್ಯನ ವ್ಯಕ್ತಿತ್ವವನ್ನು ಕಟ್ಟಿಕೊಡುವ ಸಾಧನವೇ ಪುಸ್ತಕ. ಪುಸ್ತಕದ ಮೌಲ್ಯ ಮತ್ತು ಸಾರ್ಥಕ್ಯ ಪಡೆಯಬೇಕಾದರೆ ಗ್ರಂಥಾಲಯಗಳು ಅವಶ್ಯ ಹಾಗೂ ಗ್ರಂಥಪಾಲಕನ ಪಾತ್ರ ಅತೀ ಮಹತ್ವದ್ದಾಗಿದೆ ಎಂದರು.

ಗ್ರಂಥಪಾಲಕ ಬಸವರಾಜ ಪೂಜಾರಿ, ವಿದ್ಯಾರ್ಥಿಗಳಿಗೆ ಗ್ರಂಥಾಲಯದ ಆಧುನಿಕ ತಂತ್ರಾಂಶಗಳನ್ನು ವಿವರಿಸಿ ಜ್ಞಾನ ಹಾಗೂ ಶಬ್ದ ಭಂಡಾರಕ್ಕಾಗಿ ಗ್ರಂಥಾಲಯಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದರು. ಪ್ರಾಧ್ಯಾಪಕರುಗಳಾದ ಡಾ.ರವಿ.ಕೋಟೆಣ್ಣವರ ಡಾ.ಸುಧೀರ ಬೆಟಗೇರಿ .ಡಾ.ಫಾತೀಮಾ ಬಾಲಸಿಂಗ. ಡಾ.ಅಖಿಲಾ ಹುಲ್ಲೂರ. ಡಾ.ಮಂಜುನಾಥ ಪಾಟೀಲ. ಡಾ.ಪ್ರದೀಪ ಕೆ., ಡಾ.ದೀಪಕ. ಎನ್., ಡಾ.ಪವನ ಟಾವನಿ ಕಾರ್ಯಾಲಯ ಅಧೀಕ್ಷಕ ರಾಜೇಶ ಬಾಗಲಕೋಟಕರ ಹಾಗೂ ವೈದ್ಯ ವಿದ್ಯಾರ್ಥಿಗಳು ಇದ್ದರು.

## 'ಹೋರಾಟ–ನಾಲ್ಕು ನಕ್ಷತ್ರಗಳು' ಕೃತಿ ಬಿಡುಗಡೆ

# ಇತಿಹಾಸಕಾರರಿಗೆ ಚಿಕಿತ್ಸಕ ಬುದ್ಧಿ ಇರಬೇಕು–ಪ್ರೊ.ಕೌಜಲಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ದಾಖಲೆಗಳ ಸಮೇತ ನೈಜ ಇತಿಹಾಸವನ್ನು ಜನತೆಯ ಮುಂದಿಡುವುದೇ ಇತಿಹಾಸಕಾರರ ಗುರಿಯಾಗಿರಬೇಕು. ಆಳವಾದ ಅಧ್ಯಯನದ ಮೂಲಕ ಸ್ವಾತಂತ್ರ್ಯ ಹೋರಾಟಗಾರರ ಹಾಗೂ ಸಂಸ್ಕೃತಿಗಳ ಪರಿಚಯವನ್ನು ಮಾಡಿಕೊಡುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಕನ್ನಡ ಜಾನಪದ ಪರಿಷತ್ ರಾಜ್ಯ ಕಾರ್ಯದರ್ಶಿ ಪ್ರೊ. ಕೆ.ಎಸ್. ಕೌಜಲಗಿ ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಚಿಕ್ಕಾಲಗುಂಡಿ ಗ್ರಾಮದಲ್ಲಿ ಸರಕಾರಿ ಪದವಿಪೂರ್ವ ಕಾಲೇಜು ಚಿಕ್ಕಾಲಗುಂಡಿ, ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ ಬಾಗಲಕೋಟೆ ಹಾಗೂ ಪುನೀತ್ ಮೆಮೋರಿಯಲ್ ಟ್ರಸ್ಟ್ ಬೀಳಗಿ ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಕಾಲೇಜು ಸಂಸತ್ತು ಉದ್ಘಾಟನೆ, ವಿಶ್ವ ಬುಡಕಟ್ಟು ದಿನಾಚರಣೆ ಹಾಗೂ ಸಾಹಿತಿ ವೀರೇಂದ್ರ ಶೀಲವಂತ ರಚಿತ 'ಹೋರಾಟ: ನಾಲ್ಕು ನಕ್ಷತ್ರಗಳು' ಕೃತಿ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಇತಿಹಾಸಕಾರರಲ್ಲಿ ಆಳವಾದ ಅಧ್ಯಯನ, ಸಂಶೋಧನಾ ಚಿಕಿತ್ಸಕ ಬುದ್ಧಿ ಇದ್ದಾಗ ಮಾತ್ರ ಇತಿಹಾಸಕ್ಕೆ ನ್ಯಾಯ ಒದಗಿಸಲು ಸಾಧ್ಯವಾಗುತ್ತದೆ. ಲಾವಣಿಗಳು, ಲಿಖಿತ ದಾಖಲೆಗಳ ಮೂಲಕ ಕಿತ್ತೂರಿನ ಇತಿಹಾಸ, ಹಲಗಲಿ ಬಂಡಾಯ, ಸಿಂಧೂರ ಲಕ್ಷ್ಮಣನ ಕುರಿತಾಗಿ ಸಮಗ್ರ ಅಧ್ಯಯನ ಮಾಡಿರುವ ವೀರೇಂದ್ರ ಶೀಲವಂತ ಅವರು ಕೃತಿಯ ಮೂಲಕ ನ್ಯಾಯ ಒದಗಿಸಿದ್ದಾರೆ ಎಂದು ಕೌಜಲಗಿ ಹೇಳಿದರು.

ಸಾಹಿತಿ ವೀರೇಂದ್ರ ಶೀಲವಂತ ಬುಡಕಟ್ಟು ಸಂಸ್ಕೃತಿ ಕುರಿತು ಉಪನ್ಯಾಸ ನೀಡಿ, ದೇಶದ ಮೂಲನಿವಾಸಿಗಳು, ಪ್ರಕೃತಿ ಪ್ರೀಯರು ಆದ ಬುಡಕಟ್ಟು ಜನಾಂಗ ಯಾರಗೊಡವಿಗೂ ಹೋದವರಲ್ಲ. ತಮ್ಮನ್ನು ಅವಮಾನಕ್ಕೊಳಪಡಿಸುವ, ದಬ್ಬಾಳಿಕೆಯಿಂದ ಹತ್ತಿಕ್ಕುವ ಸಂದರ್ಭ ಸೃಷ್ಟಿಯಾದಾಗ ಸಿಡಿದೆದ್ದು ನಿಂತು ತಮ್ಮ ಆತ್ಮಾಭಿಮಾನ, ಗೌರವವನ್ನು ಮೆರೆದವರು ಬುಡಕಟ್ಟು ಜನಾಂದವರು ಎಂದರು.

ಬೀಳಗಿಯ ಪುನೀತ್ ಮೆಮೋರಿಯಲ್ ಟ್ರಸ್ಟ್ ಅಧ್ಯಕ್ಷೆ ಡಾ.ಆಶಾ ಬೀಳಗಿ, ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಹಾಗೂ ಪ್ರಾಚಾರ್ಯ ಡಾ.ಎಸ್.ಕೆ.ಬಂಗಾರಿ ಮಾತನಾಡಿದರು. ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಬಾಬು ಕೆಂಪಲಿಂಗಣ್ಣವರ ಅಧ್ಯಕ್ಷತೆ ವಹಿಸಿದ್ದರು.

ಮುಖ್ಯೋಪಾಧ್ಯಾಯ ಸಂಗಣ್ಣ ಕರಿಸ್ಯೆಯಪ್ಪನವರ, ಕಜಾಪ ಜಿಲ್ಲಾ ಕಾರ್ಯದರ್ಶಿ ಆರ್.ಬಿ.ನಬಿವಾಲೆ, ವೈ.ಎಸ್.ರೂಗಿ, ಅರುಣ ಖಾನಾಪೂರ, ಶಿವು ದಿಬ್ಬದಮನಿ, ಮಂಜು ದೂರನ್ನವರ, ಲಕ್ಷ್ಮೀ ದಳವಾಯಿ ಅತಿಥಿಗಳಾಗಿ ಪಾಲ್ಗೊಂಡಿದ್ದರು.

# ಭೋವಿ ನಿಗಮ: ವಿವಿಧ ಸೌಲಭ್ಯಕ್ಕೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಪ್ರಸಕ್ತಸಾಲಿಗೆ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿಯ ಸಮುದಾಯದ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆ ಮತ್ತು ಭೂ ಒಡೆತನ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

2022–23, 2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿಗಳನ್ನು ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ಹೊಸದಾಗಿನ ಅರ್ಜಿದಾರರು ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಬೆಂಗಳೂರು ಒನ್ ಕೇಂದ್ರಗಳಲ್ಲಿ ಆನ್ ಲೈನ್ ಮುಖಾಂತರ ಸೆಪ್ಟೆಂಬರ್ 10 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಕೊಠಡಿ ಸಂಖ್ಯೆ: 201, ಜಿಲ್ಲಾ ಆಡಳಿತ ಭವನ, ನವನಗರ, ಬಾಗಲಕೋಟೆ ಇಲ್ಲಿ ಸಂಪರ್ಕಿಸಬಹುದು ಎಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕ ರಮೇಶ ಚವ್ಹಾಣ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಅಗ್ನಿವೀರ್ ಸೇನಾ ಭರ್ತಿ: 6ನೇ ದಿನಕ್ಕೆ 779 ಅಭ್ಯರ್ಥಿಗಳು ಭಾಗಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 13– ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದಲ್ಲಿ ಆಯೋಜನೆ ಮಾಡಿದ ಅಗ್ನಿವೀರ್ ಸೇನಾ ಭರ್ತಿಗೆ 6ನೇ ದಿನವಾದ ಆಗಸ್ಟ್ 13ರಂದು ಒಟ್ಟು 779 ಅಭ್ಯರ್ಥಿಗಳು ವರದಿ ಮಾಡಿಕೊಂಡರು.

ಈ ಪೈಕಿ, 1600 ಮೀಟರ್ ಓಟದ ಸ್ಪರ್ಧೆಯಲ್ಲಿ 492 ಅಭ್ಯರ್ಥಿಗಳು ತೇರ್ಗಡೆಯಾಗಿ ಮುಂದಿನ ವೈದ್ಯಕೀಯ ಪರೀಕ್ಷೆಗೆ ಪ್ರವೇಶ ಪಡೆದುಕೊಂಡರು.

ಮಳೆಯಿಂದ ಮೈದಾನ ಕೆಸರು: ಆಗಸ್ಟ್ 12ರಂದು ರಾತ್ರಿವೇಳೆಯಲ್ಲಿ ಜಿಟಿಜಿಟಿ ಮಳೆಯು ನಿರಂತರ ಸುರಿದ ಪರಿಣಾಮ ಆಗಸ್ಟ್ 13ರಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣವು ಕೇಸರಿನಿಂದ ಆವೃತವಾಗಿದ್ದು ಕಂಡು ಬಂದಿತು.

ಆಗಸ್ಟ್ 14ರಂದು ಬೆಳಗಾವಿ ಅಭ್ಯರ್ಥಿಗಳು: ವೇಳಾಪಟ್ಟಿಯಂತೆ ಆಗಸ್ಟ್ 14ರಂದು ಬೆಳಗಾವಿ ಜಿಲ್ಲೆಯಿಂದ ಅಂದಾಜು 860 ಅಭ್ಯರ್ಥಿಗಳು ಸೇನಾ ಭರ್ತಿಗೆ ವರದಿ ಮಾಡಿಕೊಳ್ಳಲಿದ್ದಾರೆ ಎಂದು ಸೇನಾಧಿ ಕಾರಿಗಳು ತಿಳಿಸಿದ್ದಾರೆ.

# ಮಹಿಳಾ ಕಾಲೇಜಿನಲ್ಲಿ ಕ್ರೀಡಾ ಚಟುವಟಿಕೆ ಉದ್ಘಾಟನೆ
# ಭಾರತೀಯ ಮಹಿಳೆಗೆ ವಿಶಿಷ್ಟ ಗೌರವ: ಅರುಣಾ ರಘುವೀರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.13–ಜಗತ್ತಿನಲ್ಲಿ ಭಾರತೀಯ ಮಹಿಳೆಯರಿಗೆ ವಿಶೇಷ ಗೌರವವಿದ್ದು, ನಾವು ಭಾರತೀಯ ಮಹಿಳೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳಬೇಕು ಎಂದು ಹಿರಿಯ ವಕೀಲೆ ಅರುಣಾ ರಘುವೀರ ಹೇಳಿದರು.

ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಅಕ್ಕಮಹಾದೇವಿ ಕಲಾ, ವಿಜ್ಞಾನ, ಮತ್ತು ವಾಣಿಜ್ಯ ಮಹಾವಿದ್ಯಾಲಯದ ನೂತನ ಸಭಾಂಗಣದಲ್ಲಿ ಮಂಗಳವಾರ 2025–26 ನೇ ಸಾಲಿನ ಕ್ರೀಡೆ, ಸಾಂಸ್ಕೃತಿಕ, ಎನ್‌ಎಸ್‌ಎಸ್ ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಬುದ್ಧಿ, ಭಾವ ಇವುಗಳ ಕ್ರಿಯಾತ್ಮಕ ಕಾರ್ಯರೂಪವೇ ಶಿಕ್ಷಣ. ಪ್ರಥಮದಲ್ಲಿ ನಮ್ಮನ್ನು ನಾವು ಗೌರವಿಸಿಕೊಳ್ಳಬೇಕು. ನಮ್ಮ ನಡುವಳಿಕೆಯಲ್ಲಿ ಭಾರತೀಯತೆ ಇರಬೇಕು. ನಮ್ಮ ಸಂಸ್ಕೃತಿಯ ವಾರಸುದಾರರು ನಾವುಗಳಾಗಿದ್ದು ನಮ್ಮ ದೇಶದ ಗೌರವ ಘನತೆಯನ್ನು ಎತ್ತಿಹಿಡಿಯಬೇಕು. ಸೌಂದರ್ಯ ಪ್ರಜ್ಞೆಯ ಜೊತೆಗೆ ಸಂಯಮ, ದೃಢತೆ ಮತ್ತು ಶಿಸ್ತನ್ನು ಜೀವನದಲ್ಲಿ ರೂಡಿಸಿಕೊಳ್ಳಬೇಕು. ಸಮರ್ಪಣಾ ಭಾವದ ಜೊತೆಗೆ ಮಹಿಳೆ ಮಾತೃತ್ವ, ಕತೃತ್ವದ ಜೊತೆಗೆ ನೇತೃತ್ವ ಶಕ್ತಿಯನ್ನು ಅಳವಡಿಸಿಕೊಂಡು ಅರ್ಥಪೂರ್ಣವಾಗಿ ಬದುಕಬೇಕು ಎಂದು ರಘುವೀರ ಹೇಳಿದರು.

ಅಧ್ಯಕ್ಷತೆವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯೆ ಸುಷ್ಮಾ ಒಡೆಯರ ಮಾತನಾಡಿ, ಮಹಿಳೆಯಿಂದ ಸಂಸ್ಕೃತಿ ಉಳಿದಿದ್ದು, ಸಂಸ್ಕೃತಿಯಿಂದ ನಾಗರಿಕತೆ ಉಳಿದಿದೆ ಎಂದರು.

ಸಾಂಸ್ಕೃತಿಕ ವಿಭಾಗದ ಸಂಯೋಜಕಿ ಪೂಜಾ ಅರ್ಕಸಾಲಿ ಕಾಲೇಜು ನಡೆದು ಬಂದ ದಾರಿಯ ಬಗ್ಗೆ ತಿಳಿಸಿದರು. ಗ್ರಂಥಪಾಲಕ ಎಮ್.ಆರ್.ಕಣಮಡಿ ರಾಷ್ಟ್ರೀಯ ಗ್ರಂಥಾಲಯ ದಿನಾಚರಣೆ ಬಗ್ಗೆ ಮಾಹಿತಿ ಹಂಚಿಕೊಂಡರು.

ಸೌಂದರ್ಯ ಜೂಜಿನ ಪ್ರಾರ್ಥಿಸಿದರು. ಐಕ್ಯೂಎಸಿ ಸಂಯೋಜಕಿ ಪಿ.ಕೆ.ಚೌಗಲಾ ಸ್ವಾಗತಿಸಿದರು. ಎನ್.ಎಸ್.ಎಸ್. ಅಧಿಕಾರಿ ಡಾ.ಎಂ.ವಿ.ಭಾಜಪ್ಪನವರ ಪರಿಚಯಿಸಿದರು. ಅನಿಲ ಬಡಿಗೇರ ಪ್ರತಿಜ್ಞಾವಿಧಿ ಬೋಧಿಸಿದರು. ವಿ.ಎಸ್.ಸತ್ತಿಗಿರಿ ವಂದಿಸಿದರು. ಎಸ್.ಕೆ.ಹಿರೇಮಠ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನಡೆಯಿತು, ನಂತರದಲ್ಲಿ ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



# ಸಮಾನ ಶಿಕ್ಷಣ

## ಸಮಾನ ಅವಕಾಶ!

- 25 ಹೊಸ ವಸತಿ ಶಾಲೆಗಳು, 50 ಮಾದರಿ ಶಾಲೆಗಳು ಮತ್ತು 100 ಹಾಸ್ಟೆಲ್‌ಗಳ ನಿರ್ಮಾಣ
- ಡಿಬಿಟಿ ಮೂಲಕ 7.2 ಲಕ್ಷ ವಿದ್ಯಾರ್ಥಿಗಳಿಗೆ 2254 ಕೋಟಿ ವಿದ್ಯಾರ್ಥಿವೇತನ ವಿತರಣೆ
- ಮೌಲಾನಾ ಆಜಾದ್ ಪ್ರತಿಭಾ ಪುರಸ್ಕಾರದ ಅಡಿಯಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತ್ಯಧಿಕ ಅಂಕ ಗಳಿಸಿದವರಿಗೆ ನಗದು ಬಹುಮಾನ ವಿತರಣೆ
- ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 10 ತಿಂಗಳು ತರಬೇತಿ - ಪಾಲ್ಗೊಂಡ 100ಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ಉದ್ಯೋಗ ಲಭ್ಯ
- ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿ ನರ್ಸಿಂಗ್ ಮಾಡಿದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ
- ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (NIOS) ಮೂಲಕ ಮದರಸಾ ವಿದ್ಯಾರ್ಥಿಗಳಿಗೆ ಎಸ್‌ಎಸ್‌ಎಲ್‌ಸಿ/ಪಿಯುಸಿ ತರಬೇತಿ
- ಅಲ್ಪಸಂಖ್ಯಾತ ಸಂಸ್ಥೆಗಳಲ್ಲಿ ಎಸ್‌ಎಸ್‌ಎಲ್‌ಸಿ, ಸಿಬಿಎಸ್‌ಇ ಮತ್ತು ಪಿಯುಸಿಗಳಲ್ಲಿ ಶೇ 90ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ

## ಶಿಕ್ಷಣದಲ್ಲಿ ಹೂಡಿಕೆ

## ಭವಿಷ್ಯಕ್ಕೆ ಸ್ಫೂರ್ತಿ



## ಕರ್ನಾಟಕ ನವ ನಿರ್ಮಾಣಕ್ಕೆ

# ಗ್ಯಾರಂಟಿ ಸರ್ಕಾರ...

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka  https://dipr.karnataka.gov.in/

ಕರ್ನಾಟಕ ವಾರ್ತೆ

ಗಡಿ ತಾಲ್ಲೂಕುಗಳಿಂದ ಪ್ರಕಟವಾಗುವ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು